24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ


www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 146 | ನವದೆಹಲಿ | ಬೆಲೆ ₹10 | ನವಂಬರ್ 23, 2026 ಸೋಮವಾರ

ಒಳಪುಟಗಳಲ್ಲಿ

ಸದ್ಗುರು ಜಗ್ಗಿ ವಾಸುದೇವ್‌ಗೆ ಗ್ಲೋಬಲ್ ಪೀಸ್ ಆನರ್ಸ್ ಪ್ರಶಸ್ತಿ - ಪು.4

ಕೆಪಿಎಸ್‌ಸಿ ಕಾರ್ಯವೈಖರಿಯಲ್ಲಿ ಮಹತ್ವದ ಬದಲಾವಣೆ- 6 ದಿನದಲ್ಲೇ ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳ ಪರೀಕ್ಷೆ ತಾತ್ಕಾಲಿಕ ಫಲಿತಾಂಶ ಪ್ರಕಟ - ಪು.5



ಕಾಡಾನೆ ಸ್ಥಳಾಂತರ: ಜನಪ್ರತಿನಿಧಿಗಳ ನಡುವೆ ಶುರುವಾಯ್ತು ಮುಸುಕಿನ ಗುದ್ದಾಟ - ಪು.6

ಮೂರು ದಿನಗಳ ಭೇಟಿಗಾಗಿ ಜಪಾನ್‌ಗೆ ತೆರಳಿದ ಸಿಎಂ ಡಿ.ಕೆ. ಶಿವಕುಮಾರ್

ನಗರಾಭಿವೃದ್ಧಿ ಹಾಗೂ ಹೂಡಿಕೆ ಆಕರ್ಷಣೆ ಕುರಿತು ವಿವಿಧ ಕಂಪನಿಗಳ ಮುಖ್ಯಸ್ಥರು, ಜಪಾನ್ ಸರ್ಕಾರದ ಅಧಿಕಾರಿಗಳ ಜತೆ ಇಂದು ಮಾತುಕತೆ

ಬೆಂಗಳೂರು, ನ.22: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇಂದಿನಿಂದ ವಿದೇಶ ಪ್ರವಾಸ ಕೈಗೊಂಡಿದ್ದು, ಮೂರು ದಿನಗಳ ಪ್ರವಾಸಕ್ಕಾಗಿ ಭಾನುವಾರ ಜಪಾನ್‌ಗೆ ಪ್ರಯಾಣ ಬೆಳೆಸಿದರು.

ನಗರಾಭಿವೃದ್ಧಿ ಮತ್ತು ಹೂಡಿಕೆ ಆಕರ್ಷಣೆಗಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಜಪಾನ್‌ನಲ್ಲಿ ಮೂರು ದಿನಗಳ ಕಾಲ ವಿವಿಧ ಕಂಪೆನಿಗಳ ಮುಖ್ಯಸ್ಥರ ಸಭೆ ಹಾಗೂ ಜಪಾನ್ ಸರ್ಕಾರದ ಹಿರಿಯ ಅಧಿಕಾರಿಗಳೊಂದಿಗೆ ಸಮಾಲೋಚನಾ ಸಭೆಗಳಲ್ಲಿ ಭಾಗಿಯಾಗಲಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜತೆ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಹಾಗೂ 8 ಹಿರಿಯ ಅಧಿಕಾರಿಗಳು ಜಪಾನ್‌ಗೆ ತೆರಳಿದರು.

ತಮ್ಮ ಜಪಾನ್ ಪ್ರವಾಸದ ಬಗ್ಗೆ ಸದಾಶಿವನಗರದ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು, ಸಚಿವ ಎಂ.ಬಿ. ಪಾಟೀಲ್ ಹಾಗೂ 8 ಅಧಿಕಾರಿಗಳು ಜಪಾನ್‌ಗೆ ತೆರಳುತ್ತಿದ್ದೇವೆ. ನಗರಾಭಿವೃದ್ಧಿ ಬಗ್ಗೆ ಹೆಚ್ಚು ಅಧ್ಯಯನ ಮಾಡಬೇಕಿದೆ. ಜತೆಗೆ ರಾಜ್ಯದಲ್ಲಿ ಜಪಾನ್ ಉದ್ಯಮಿಗಳಿಂದ ಹೂಡಿಕೆ ಆಕರ್ಷಿಸಲು ಈ ವಿದೇಶ ಪ್ರವಾಸ ಮಾಡುತ್ತಿದ್ದೇವೆ ಎಂದರು.

ಸಿಎಂಗೆ ಸ್ವಾಗತ ಕೋರಿದ ಜಪಾನ್‌ನಲ್ಲಿ ಭಾರತದ ರಾಯಭಾರಿ ನಗ್ಮಾ ಮೊಹಮದ್ ಮಲ್ಲಿಕ್ ಹಾಗೂ ಟೋಕಿಯೋ ಕನ್ನಡ ಸಂಘ ಸದಸ್ಯರು

ಜಪಾನ್‌ನಲ್ಲಿ ಹೊಸ ಹೊಸ ತಂತ್ರಜ್ಞಾನಗಳನ್ನು ಬಳಸಿಕೊಂಡು ಮೇಲ್ಸೇತುವೆಗಳ ನಿರ್ಮಾಣ ಮಾಡಿದ್ದಾರೆ. ಅದನ್ನು ನಮ್ಮಲ್ಲೂ ಅಳವಡಿಸಿಕೊಳ್ಳುವ ಬಗ್ಗೆ ಅಧ್ಯಯನ ಮಾಡುತ್ತೇವೆ ಎಂದು ಅವರು ಹೇಳಿದರು.

ಟೊಯೋಟಾ ಕಂಪೆನಿಯ ವಿಸ್ತರಣೆಯನ್ನು ರಾಜ್ಯದಲ್ಲಿ ಮಾಡುವ ಸಂಬಂಧ ಸೇರಿದಂತೆ ಜಪಾನ್‌ನ ವಿವಿಧ ಉದ್ಯಮಿಗಳೊಂದಿಗೆ ಚರ್ಚೆ ನಡೆಸುತ್ತೇವೆ ಎಂದು ಅವರು ಹೇಳಿದರು.

ಈ ನಿಯೋಗದಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಮುಖ್ಯ ಆಯುಕ್ತ ಎಂ. ಮಹೇಶ್ವರ್ ರಾವ್; ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಪ್ರಧಾನ ಕಾರ್ಯದರ್ಶಿ ಎಸ್. ಸೆಲ್ವಕುಮಾರ್; ಕೈಗಾರಿಕಾಭಿವೃದ್ಧಿ ಆಯುಕ್ತರು; ಕೈಗಾರಿಕೆ ಮತ್ತು ವಾಣಿಜ್ಯ ನಿರ್ದೇಶಕರು; ಮತ್ತು ಇನ್ವೆಸ್ಟ್ ಕರ್ನಾಟಕ ಫೋರಂ ಸಿಇಓ ಖುಷ್ಬೂ ಗೋಯಲ್ ಚೌಧರಿ ಅವರಂತಹ ಹಿರಿಯ ಅಧಿಕಾರಿಗಳ ಜೊತೆಗೆ ಮುಖ್ಯಮಂತ್ರಿ ಕಚೇರಿ, ಜಿಬಿಎ ಮತ್ತು ವಾಣಿಜ್ಯ ಹಾಗೂ ಕೈಗಾರಿಕೆ ಇಲಾಖೆಯ ಅಧಿಕಾರಿಗಳು ಇದ್ದಾರೆ.



ಮೂರು ದಿನಗಳ ಪ್ರವಾಸಕ್ಕಾಗಿ ಜಪಾನ್‌ಗೆ ತಲುಪಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಟೋಕಿಯೋ ವಿಮಾನ ನಿಲ್ದಾಣದಲ್ಲಿ ಭಾರತೀಯ ರಾಯಭಾರಿ ನಗ್ಮಾ ಮೊಹಮದ್ ಮಲ್ಲಿಕ್ ಹಾಗೂ ಟೋಕಿಯೋ ಕನ್ನಡ ಸಂಘದ ಸದಸ್ಯರು ಬರಮಾಡಿಕೊಂಡರು.

ನೇಪಾಳ ಪ್ರಧಾನಿ ಬಾಲೇಂದ್ರ ಶಾ ಭಾರತಕ್ಕೆ ಆಗಮನ

ದ್ವಿಪಕ್ಷೀಯ ಬಾಂಧವ್ಯ ವೃದ್ಧಿಗೆ ಪ್ರಧಾನಿ ಮೋದಿ ಜತೆ ಇಂದು ಮಹತ್ವದ ಮಾತುಕತೆ

ನವದೆಹಲಿ, ನ.22: ನೇಪಾಳದ ಪ್ರಧಾನಮಂತ್ರಿಯಾಗಿ ಮಾರ್ಚ್‌ನಲ್ಲಿ ಅಧಿಕಾರ ವಹಿಸಿಕೊಂಡ ನಂತರ ಬಾಲೇಂದ್ರ ಶಾ (ಬಾಲೇನ್ ಶಾ) ಅವರು ತಮ್ಮ ಮೊದಲ ವಿದೇಶ ಪ್ರವಾಸಕ್ಕಾಗಿ ಎರಡು ದಿನಗಳ ಭೇಟಿಗಾಗಿ ಭಾನುವಾರ ನವದೆಹಲಿಗೆ ಆಗಮಿಸಿದರು. ಭಾರತದ 'ನೆರೆಹೊರೆ ಮೊದಲು' ನೀತಿಯಡಿ ನೇಪಾಳ ಪ್ರಮುಖ ಪಾಲುದಾರ ರಾಷ್ಟ್ರವಾಗಿದ್ದು, ಈ ಭೇಟಿಯು ಉಭಯ ದೇಶಗಳ ನಡುವಿನ ಐತಿಹಾಸಿಕ ಮತ್ತು ಸಾಂಸ್ಕೃತಿಕ ಬಾಂಧವ್ಯವನ್ನು ಪ್ರತಿಬಿಂಬಿಸುತ್ತದೆ.

ಸೋಮವಾರ ನವದೆಹಲಿಯಲ್ಲಿ ನಡೆಯಲಿರುವ ದ್ವಿಪಕ್ಷೀಯ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಬಾಲೆನ್ ಶಾ ಅವರು ಇಂಧನ, ಜಲವಿದ್ಯುತ್, ರೈಲು ಸಂಪರ್ಕ ಹಾಗೂ ಮೂಲಸೌಕರ್ಯ ಅಭಿವೃದ್ಧಿ ವಿಷಯಗಳ ಕುರಿತು ಪ್ರಮುಖವಾಗಿ ಚರ್ಚಿಸಲಿದ್ದಾರೆ. ಸಭೆಯ ನಂತರ ಹಲವು ನೇಪಾಳಿ ಯೋಜನೆಗಳನ್ನು ನಾಯಕರು ವರ್ಚುವಲ್ ಆಗಿ ಉದ್ಘಾಟಿಸಲಿದ್ದು, ವಿವಿಧ ಕ್ಷೇತ್ರಗಳ ಪ್ರಮುಖ ಒಪ್ಪಂದಗಳನ್ನು ವಿನಿಮಯ ಮಾಡಿಕೊಳ್ಳುವ ಸಾಧ್ಯತೆಯಿದೆ. ತಮ್ಮ ಪ್ರವಾಸದ ವೇಳೆ ಬಾಲೆನ್ ಶಾ ಭಾರತದ ರಾಷ್ಟ್ರಪತಿ, ಉಪರಾಷ್ಟ್ರಪತಿ, ವಿದೇಶಾಂಗ ವ್ಯವಹಾರಗಳ ಸಚಿವರು ಮತ್ತು ಉಭಯ ದೇಶಗಳ ಉದ್ಯಮಿಗಳನ್ನು ಭೇಟಿಯಾಗಲಿದ್ದಾರೆ. ಮೂಲಸೌಕರ್ಯ ವಿಸ್ತರಣೆ, ಹೊಸ ತಂತ್ರಜ್ಞಾನಗಳ ಅಳವಡಿಕೆ, ವಿಪತ್ತು ನಿರ್ವಹಣೆ ಹಾಗೂ ಹವಾಮಾನ ಬದಲಾವಣೆ ಸಹಕಾರದ ಕಡೆಗೆ ಎರಡೂ ದೇಶಗಳು ಗಮನ ಹರಿಸಿವೆ.

ಅಲ್ಲದೆ, ಭಾರತದೊಂದಿಗಿನ ವಸಾಹತುಶಾಹಿ ಯುಗದ ಗಡಿ ವಿವಾದಕ್ಕೆ ಸಂಬಂಧಿಸಿದಂತೆ ಬ್ರಿಟನ್ ಮತ್ತು ಚೀನಾ ಜೊತೆ ಸಂಪರ್ಕದಲ್ಲಿದ್ದುದಾಗಿ ಬಾಲೆನ್ ಶಾ ನೀಡಿದ್ದ ಹೇಳಿಕೆಗೆ ನೇಪಾಳ ಸಂಸತ್ತಿನಲ್ಲಿ ಪ್ರತಿಭಟನೆ ವ್ಯಕ್ತವಾಗಿತ್ತು. ಈ ವಿಚಾರವಾಗಿ ಮೂರನೇ ವ್ಯಕ್ತಿಯ ಮಧ್ಯಸ್ಥಿಕೆಯನ್ನು ತಳ್ಳಿಹಾಕಿದ್ದ ಭಾರತೀಯ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಎರಡೂ ದೇಶಗಳ ನಡುವಿನ ಶೇ.98ರಷ್ಟು ಗಡಿಯನ್ನು ಈಗಾಗಲೇ ಗುರುತಿಸಲಾಗಿದ್ದು, ಉಳಿದ ಸಮಸ್ಯೆಯನ್ನು ಬಗೆಹರಿಸಲು ಸೂಕ್ತ ಕಾರ್ಯವಿಧಾನಗಳಿವೆ ಎಂದು ಸ್ಪಷ್ಟಪಡಿಸಿದ್ದರು. ಈ ಎಲ್ಲಾ ಘಟನೆಗಳ ಸುಮಾರು 6 ತಿಂಗಳ ಬಳಿಕ ಈ ಮಹತ್ವದ ಭೇಟಿ ನಡೆಯುತ್ತಿದೆ.



ಭಾರತದ ಭೇಟಿಗಾಗಿ ಭಾನುವಾರ ನವದೆಹಲಿಯ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿದ ನೇಪಾಳ ಪ್ರಧಾನಿ ಬಾಲೆನ್ ಶಾ ಅವರನ್ನು ಕೇಂದ್ರ ಸಚಿವ ಜಿತಿನ್ ಪ್ರಸಾದ್ ಸ್ವಾಗತಿಸಿದರು.

ಅಯೋಧ್ಯೆ-ಜನಕಪುರ ಧಾಮ ನಡುವೆ ಹೊಸ ರೈಲುಸೇವೆ ನಿರೀಕ್ಷೆ

ಉಭಯ ದೇಶಗಳ ನಡುವೆ ಇಂಧನ ಕ್ಷೇತ್ರವು ಪ್ರಮುಖ ಪಾತ್ರ ವಹಿಸುತ್ತಿದ್ದು, 2025–26ನೇ ಸಾಲಿನಲ್ಲಿ ಭಾರತಕ್ಕೆ ವಿದ್ಯುತ್ ರಫ್ತು ಮಾಡುವ ಮೂಲಕ ನೇಪಾಳ 1,800 ಕೋಟಿ ನೇಪಾಳಿ ರೂಪಾಯಿ ಆದಾಯ ಗಳಿಸಿದೆ. ಇನ್ನು ಸಂಪರ್ಕ ವಲಯದಲ್ಲಿ, ರಕ್ಸೌಲ್ ಮತ್ತು ಕಠ್ಮಂಡು ನಡುವಿನ ಪ್ರಸ್ತಾವಿತ ರೈಲುಮಾರ್ಗದ ಕುರಿತು ಚರ್ಚೆಗಳು ನಡೆಯುತ್ತಿದ್ದು, ಅಯೋಧ್ಯೆ ಮತ್ತು ಜನಕಪುರ ಧಾಮ ನಡುವೆ ಹೊಸ ಪ್ರಯಾಣಿಕ ರೈಲುಸೇವೆ ಆರಂಭವಾಗುವ ನಿರೀಕ್ಷೆಯಿದೆ. ವ್ಯಾಪಾರ ಕ್ಷೇತ್ರದಲ್ಲಿ ಭಾರತವು ನೇಪಾಳದ ಅತಿದೊಡ್ಡ ಪಾಲುದಾರನಾಗಿದ್ದು, ನೇಪಾಳದ ಶೇ.80ರಷ್ಟು ಸರಕು ರಫ್ತನ್ನು ಸ್ವೀಕರಿಸುತ್ತದೆ ಮತ್ತು ಶೇ. ಮೂರನೇ ಒಂದರಷ್ಟು ವಿದೇಶಿ ನೇರ ಹೂಡಿಕೆ ಹೊಂದಿದೆ.

ಭಾರತೀಯ ಆಧ್ಯಾತ್ಮಿಕ, ಧಾರ್ಮಿಕ ಸಂಪ್ರದಾಯಗಳ ಬಗ್ಗೆ ಬಿಜೆಪಿ, ಆರೆಸ್ಸೆಸ್‌ಗೆ ಅರಿವಿಲ್ಲ: ರಾಹುಲ್‌ಗಾಂಧಿ

ನವದೆಹಲಿ, ನ.22: ಭಾರತದ ಆಧ್ಯಾತ್ಮಿಕ ಮತ್ತು ಧಾರ್ಮಿಕ ಸಂಪ್ರದಾಯಗಳ ಬಗ್ಗೆ ಅವರಿಗೆ ಯಾವುದೇ ಅರಿವಿಲ್ಲ. ಬಿಜೆಪಿ ಮತ್ತು ಆರ್‌ಎಸ್‌ಎಸ್ ನಾಯಕರನ್ನು ಅಸಭ್ಯ, ದುರಾಸೆಯ ಮತ್ತು ಜಾತಿವಾದಿ ಪುರುಷ ಪ್ರಧಾನ ಮನಸ್ಥಿತಿಯವರು ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಾಗ್ದಾಳಿ ನಡೆಸಿದ್ದಾರೆ.

ತಮ್ಮ ಎಕ್ಸ್‌ನಲ್ಲಿ ಮುಂಬೈನ ಎಲಿಫೆಂಟಾ ಗುಹೆಗಳಲ್ಲಿರುವ ಶಿವ ಮತ್ತು ಪಾರ್ವತಿಯ ಏಕೀಕೃತ ರೂಪವಾದ 'ಅರ್ಧನಾರೀಶ್ವರ' ಶಿಲ್ಪದ ಚಿತ್ರವನ್ನು ಹಂಚಿಕೊಂಡಿರುವ ರಾಹುಲ್ ಗಾಂಧಿ, "ನಾನು ಭಾರತೀಯ ಆಧ್ಯಾತ್ಮಿಕ ಮತ್ತು ಧಾರ್ಮಿಕ ಸಂಪ್ರದಾಯಗಳನ್ನು ಆಳವಾಗಿ ಅಧ್ಯಯನ ಮಾಡಿದಷ್ಟೂ ಒಂದು ವಿಷಯ ಸ್ಪಷ್ಟವಾಗುತ್ತಿದೆ. ಅದೇನೆಂದರೆ, ಬಿಜೆಪಿ ಮತ್ತು ಆರ್‌ಎಸ್‌ಎಸ್‌ಗೆ ಈ ಪರಂಪರೆಗಳ ಬಗ್ಗೆ ಕಿಂಚಿತ್ತೂ ಅರಿವಿಲ್ಲ ಎಂದು ಉಲ್ಲೇಖಿಸಿದ್ದಾರೆ.

ಕಳೆದ ಮಂಗಳವಾರವಷ್ಟೇ ರಾಹುಲ್‌ಗಾಂಧಿ ಅವರು 12ನೇ ಶತಮಾನದ ದೇವಾಲಯವೊಂದರ ಶಿಲ್ಪದ ಫೋಟೋವನ್ನು ಹಂಚಿಕೊಂಡಿದ್ದರು. ಅದರಲ್ಲಿ ಶಿವನ ತೊಡೆಯ ಮೇಲೆ ಪಾರ್ವತಿ ಕುಳಿತಿರುವ ದೃಶ್ಯವಿತ್ತು. ಆ ಚಿತ್ರದೊಂದಿಗೆ ಬರೆದುಕೊಂಡಿದ್ದ ರಾಹುಲ್, "ಭಯ, ಕೋಪ ಮತ್ತು ದ್ವೇಷವು ಬಿಜೆಪಿ ಹಾಗೂ ಆರ್‌ಎಸ್‌ಎಸ್ ಬೆಂಬಲಿಗರ ಹೃದಯದಲ್ಲಿ ಬಲೆಯನ್ನು ಹೆಣೆದಿದ್ದು, ಅವರು ಪ್ರೀತಿಯನ್ನು ವ್ಯಕ್ತಪಡಿಸದಂತೆ ತಡೆಯುತ್ತಿದೆ. ಒಬ್ಬ ನಿಜವಾದ ಹಿಂದುವಾಗಿ, ಅವರನ್ನು ಈ ಬಲೆಯಿಂದ ಮುಕ್ತಗೊಳಿಸುವುದು ನನ್ನ ಕರ್ತವ್ಯ. ಆಗ ಮಾತ್ರ ಅವರೂ ತಮ್ಮ ಜೀವನದಲ್ಲಿ ಪ್ರೀತಿ ಮತ್ತು ಆತ್ಮೀಯತೆಯ ಸೌಂದರ್ಯವನ್ನು ಅನುಭವಿಸಲು ಸಾಧ್ಯ. ಸತ್ಯಂ ಶಿವಂ ಸುಂದರಂ" ಎಂದು ಉಲ್ಲೇಖಿಸಿದ್ದರು.

ಅಸಭ್ಯ, ದುರಾಸೆಯ ಮತ್ತು ಜಾತಿವಾದಿ ಪುರುಷ ಪ್ರಧಾನ ಮನಸ್ಥಿತಿಯವರು



ಸೋನಿಯಾ, ರಾಜೀವ್ ಗಾಂಧಿ ಕುರಿತ ಹೇಳಿಕೆ ಮತ್ತು ವಿವಾದ ಕಳೆದ ಸೋಮವಾರ ಸೋನಿಯಾ ಗಾಂಧಿ ಅವರ 'ಬಿಲಾಂಗಿಂಗ್: ಎ ಜರ್ನಿ ಆಫ್ ಲವ್' ಆತ್ಮಚರಿತ್ರೆ ಬಿಡುಗಡೆ ಸಮಾರಂಭದಲ್ಲಿ ರಾಹುಲ್ ಗಾಂಧಿ ತಮ್ಮ ಪೋಷಕರ ನಡುವಿನ ಬಾಂಧವ್ಯದ ಬಗ್ಗೆ ಆಡಿದ್ದ ಮಾತುಗಳು ವಿವಾದಕ್ಕೆ ಕಾರಣವಾಗಿದ್ದವು. ಕಾರ್ಯಕ್ರಮದಲ್ಲಿ ಮಾತನಾಡಿದ್ದ ರಾಹುಲ್, "ಊಟದ ಸಮಯದಲ್ಲಿ ಅಪ್ಪ (ರಾಜೀವ್ ಗಾಂಧಿ) ಇರುತ್ತಿದ್ದರು, ಮತ್ತು ಅಪ್ಪನ ತೊಡೆಯ ಮೇಲೆ ಅಮ್ಮ (ಸೋನಿಯಾ ಗಾಂಧಿ) ಕುಳಿತಿರುತ್ತಿದ್ದರು.

ನಾನು ಇದನ್ನು ಸಾಮಾನ್ಯ ಸಂಗತಿ ಎಂದು ಭಾವಿಸಿದ್ದೆ. ನನ್ನ ಸ್ನೇಹಿತರ ಮನೆಗಳಿಗೆ ಹೋದಾಗ ಅವರ ಪೋಷಕರು ಹೀಗೆ ಕುಳಿತಿರುತ್ತಿರಲಿಲ್ಲ. ಆಗ ನಾನು ನನ್ನ ಸ್ನೇಹಿತರಿಗೆ, 'ಏನಾಗುತ್ತಿದೆ? ನಿಮ್ಮ ಅಮ್ಮ ಯಾಕೆ ನಿಮ್ಮ ಅಪ್ಪನ ತೊಡೆಯ ಮೇಲೆ ಕುಳಿತಿಲ್ಲ' ಎಂದು ಕೇಳುತ್ತಿದ್ದೆ" ಎಂದು ಹೇಳಿದ್ದರು.

ರಾಹುಲ್‌ಗಾಂಧಿ ಹೇಳಿಕೆಗೆ ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಟೀಕೆ ಮಾಡಿ ವ್ಯಂಗ್ಯವಾಡಿದ್ದರು. ಆದರೆ, ಕಾಂಗ್ರೆಸ್ ಪಕ್ಷ ತನ್ನ ನಾಯಕನ ಬೆಂಬಲಕ್ಕೆ ನಿಂತಿದ್ದು, ರಾಹುಲ್ ಗಾಂಧಿ ಅವರು ಸಂಬಂಧಗಳಲ್ಲಿನ ಪ್ರೀತಿ, ವಾತ್ಸಲ್ಯ ಮತ್ತು ಸಮಾನತೆಯ ಕುರಿತು ಅಗತ್ಯವಾದ ಚರ್ಚೆಯನ್ನು ಹುಟ್ಟುಹಾಕಿದ್ದಾರೆ ಎಂದು ಸಮರ್ಥಿಸಿಕೊಂಡಿದೆ. "ಪ್ರೀತಿಯನ್ನು ಬಚ್ಚಿಡುವ ಅಗತ್ಯವಿಲ್ಲ, ವಾತ್ಸಲ್ಯವು ದೌರ್ಬಲ್ಯವಲ್ಲ, ಮತ್ತು ಸಂಗಾತಿಯನ್ನು ಸಮಾನವಾಗಿ ಕಾಣುವುದರಿಂದಲೇ ಸಮಾನತೆ ಪ್ರಾರಂಭವಾಗುತ್ತದೆ" ಎಂದು ಕಾಂಗ್ರೆಸ್ ಪಕ್ಷವು ಎಕ್ಸ್ ಮೂಲಕ ಪ್ರತಿಕ್ರಿಯಿಸಿದೆ.

ಉತ್ತರ ಪ್ರದೇಶ ಚುನಾವಣೆ: ಇಂದು ಕಾಂಗ್ರೆಸ್-ಎಸ್‌ಪಿ ಜಂಟಿ ಸಭೆ

ನವದೆಹಲಿ, ನ.22: 2027ರಲ್ಲಿ ನಡೆಯಲಿರುವ ಉತ್ತರ ಪ್ರದೇಶ ವಿಧಾನಸಭಾ ಚುನಾವಣೆಗೆ ರಾಜಕೀಯ ಪಕ್ಷಗಳ ಸಿದ್ಧತೆ ಚುರುಕುಗೊಂಡಿದ್ದು, ಕಾಂಗ್ರೆಸ್ ಮತ್ತು ಸಮಾಜವಾದಿ ಪಕ್ಷ ಇಂದು ಜಂಟಿ ಸಭೆ ನಡೆಸಲಿವೆ. ಚುನಾವಣೆಯಲ್ಲಿ ಸೀಟು ಹಂಚಿಕೆ ಹಾಗೂ ಮೈತ್ರಿಕೂಟದ ಕಾರ್ಯತಂತ್ರದ ಕುರಿತು ಎರಡೂ ಪಕ್ಷಗಳ ನಾಯಕರು ಚರ್ಚೆ ನಡೆಸಲಿದ್ದಾರೆ.

ಕಾಂಗ್ರೆಸ್ ಸಂಸದ ಇಮ್ರಾನ್ ಮಸೂದ್ ಅವರು ಈ ಸಭೆಯ ಕುರಿತು ಮಾಹಿತಿ ನೀಡಿದ್ದಾರೆ. ದೆಹಲಿಯಲ್ಲಿ ಮಾತನಾಡಿದ ಅವರು, ಎರಡೂ ಪಕ್ಷಗಳು ಒಟ್ಟಾಗಿ ಚುನಾವಣೆಯನ್ನು ಎದುರಿಸಲು ಬಯಸಿವೆ. ಮೈತ್ರಿಕೂಟದ ಗೆಲುವಿಗಾಗಿ ಉತ್ತಮ ಸಮನ್ವಯ ಅಗತ್ಯವಿದೆ ಎಂದು ತಿಳಿಸಿದ್ದಾರೆ.

ಉತ್ತರ ಪ್ರದೇಶದಲ್ಲಿ ಇಂಡಿಯಾ ಮೈತ್ರಿಕೂಟದ ಸರ್ಕಾರ ರಚನೆಯಾಗಬೇಕು ಎಂಬುದು ಎರಡೂ ಪಕ್ಷಗಳ ಆಶಯವಾಗಿದೆ. ಈ ನಿಟ್ಟಿನಲ್ಲಿ ಚುನಾವಣಾ ಸಿದ್ಧತೆ, ಕ್ಷೇತ್ರಗಳ ಹಂಚಿಕೆ ಹಾಗೂ ಪಕ್ಷಗಳ ನಡುವಿನ ಹೊಂದಾಣಿಕೆ ಕುರಿತು ಸಭೆಯಲ್ಲಿ ಚರ್ಚೆ ನಡೆಯಲಿದೆ ಎಂದು ಮಸೂದ್ ಹೇಳಿದ್ದಾರೆ.

ಇದಕ್ಕೂ ಮೊದಲು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮತ್ತು ಸಮಾಜವಾದಿ ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್ ನಡುವೆ ಸೀಟು ಹಂಚಿಕೆ ವಿಚಾರವಾಗಿ ಮಾತುಕತೆ ನಡೆದಿತ್ತು. ಎರಡೂ ಪಕ್ಷಗಳ ಹಿರಿಯ ನಾಯಕರು ಈಗಾಗಲೇ ಈ ಕುರಿತು ಚರ್ಚೆ ನಡೆಸಿದ್ದು, ಮುಂದಿನ ಹಂತದ ಮಾತುಕತೆಗೆ ವೇದಿಕೆ ಸಿದ್ಧವಾಗಿದೆ.

ಸೀಟು ಹಂಚಿಕೆ ಕುರಿತು ಚರ್ಚೆ



ಉತ್ತರ ಪ್ರದೇಶದಲ್ಲಿ ಒಟ್ಟು 403 ವಿಧಾನಸಭಾ ಕ್ಷೇತ್ರಗಳಿವೆ. ಯಾವ ಕ್ಷೇತ್ರದಲ್ಲಿ ಯಾವ ಪಕ್ಷದ ಅಭ್ಯರ್ಥಿಗೆ ಗೆಲುವಿನ ಸಾಧ್ಯತೆ ಹೆಚ್ಚಿದೆ ಎಂಬುದನ್ನು ಪರಿಗಣಿಸಿ ಸೀಟು ಹಂಚಿಕೆ ಮಾಡಬೇಕು ಎಂಬ ನಿಲುವನ್ನು ಅಖಿಲೇಶ್ ಯಾದವ್ ವ್ಯಕ್ತಪಡಿಸಿದ್ದಾರೆ.

ಇದೇ ವೇಳೆ, ಕಾಂಗ್ರೆಸ್ 181 ಕ್ಷೇತ್ರಗಳನ್ನು ಕೇಳಿದೆ ಎಂಬ ವರದಿಗಳ ಕುರಿತು ಪ್ರತಿಕ್ರಿಯಿಸಿರುವ ಇಮ್ರಾನ್ ಮಸೂದ್, ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಇಂತಹ ವರದಿಗಳಿಗೆ ಯಾವುದೇ ಆಧಾರವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.


ಗೋಹತ್ಯೆ ನಿಷೇಧ ಕಾನೂನಿನ ದುರುಪಯೋಗ ದೌರ್ಜನ್ಯ ಸಹಿಸುವುದಿಲ್ಲ: ಸಿಎಂ ಡಿ.ಕೆ.ಶಿವಕುಮಾರ್

ಬೆಂಗಳೂರು, ನ.22: ರಾಜ್ಯದಲ್ಲಿ ಗೋವುಗಳ ರಕ್ಷಣೆಗೆ ಸರ್ಕಾರ ಬದ್ಧವಾಗಿದೆ. ಆದರೆ ಗೋಹತ್ಯೆ ನಿಷೇಧ ಕಾನೂನಿನ ಹೆಸರಿನಲ್ಲಿ ನಡೆಯುವ ದುರುಪಯೋಗ ಮತ್ತು ದೌರ್ಜನ್ಯಗಳನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ಗೋಹತ್ಯೆ ನಿಷೇಧ ಕಾಯ್ದೆಯ ವಿಚಾರವಾಗಿ ಮಾತನಾಡಿದ ಅವರು, ಕಾನೂನುಗಳು ಸಮಾಜದಲ್ಲಿ ದ್ವೇಷ ಹರಡುವ ಅಸ್ತ್ರಗಳಾಗಬಾರದು ಮತ್ತು ಸಾಮಾನ್ಯ ಜನರ ಜೀವನೋಪಾಯಕ್ಕೆ ಧಕ್ಕೆ ತರಬಾರದು ಎಂದು ಅಭಿಪ್ರಾಯಪಟ್ಟರು.

ಈ ವಿಚಾರದಲ್ಲಿ ಪ್ರತಿಪಕ್ಷ ಬಿಜೆಪಿಯನ್ನು ನೇರವಾಗಿ ತರಾಟೆಗೆ ತೆಗೆದುಕೊಂಡ ಮುಖ್ಯಮಂತ್ರಿಗಳು, ಬಿಜೆಪಿಯ ದ್ವಂದ್ವ ನೀತಿಯನ್ನು ಪ್ರಶ್ನಿಸಿದರು. ಬಿಜೆಪಿ ಆಡಳಿತವಿರುವ ಉತ್ತರ ಪ್ರದೇಶದಲ್ಲಿ ಬೃಹತ್ ಮಾಂಸ ರಫ್ತು ಕಂಪನಿಗಳು ಇಂದಿಗೂ ಹೇಗೆ ಕಾರ್ಯನಿರ್ವಹಿಸುತ್ತಿವೆ ಎಂದು ಪ್ರಶ್ನಿಸಿದ್ದಾರೆ.

ನಿತ್ಯ ಪಂಚಾಂಗ 23.11.2026 ಸೋಮವಾರ



ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯನ ಶರದ್ ಋತು/ ಚಾಂದ್ರಮಾನ ಆಶ್ವಯುಜ-ಕಾರ್ತಿಕ ಮಾಸ

ಕಾರ್ತಿಕ ಶುದ್ಧ, ಚತುರ್ದಶಿ, ಭರಣಿ ನಕ್ಷತ್ರ, ಕಾರ್ತಿಕ ಸೋಮವಾರ, ಚಿಂತಾಮಣಿ ರಥ, ವೇಕುಂಠ ಚತುರ್ದಶಿ, ಅರಣೋದಯ ಶಿವಪೂಜೆ, ಸೂಡಿ ಬಸವೇಶ್ವರ ಕಾರ್ತಿಕ

ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	4.30 – 6.00	12.00 – 1.30	3.00 – 4.30
ಸೋಮ	7.30 – 9.00	10.30 – 12.00	1.30 – 3.00
ಮಂಗಳ	3.00 – 4.30	9.00 – 10.30	12.00 – 1.30
ಬುಧ	12.00 – 1.30	7.30 – 9.00	10.30 – 12.00
ಗುರು	1.30 – 3.00	6.00 – 7.30	9.00 – 10.30
ಶುಕ್ರ	10.30 – 12.00	3.00 – 4.30	7.30 – 9.00
ಶನಿ	9.00 – 10.30	1.30 – 3.00	6.00 – 7.30

ವಿಧಾನಮಂಡಲ ಅಧಿವೇಶನಕ್ಕೂ ಮುನ್ನ ಸೂಕ್ತ ನಿರ್ಧಾರ

ಧರಣಿ ಕೈಬಿಡುವಂತೆ ಆಶಾ ಕಾರ್ಯಕರ್ತೆಯರಿಗೆ ಸಿಎಂ ಮನವಿ

ಬೆಂಗಳೂರು, ನ.22: ರಾಜಕೀಯ ಒತ್ತಡಕ್ಕೆ ಮಣಿಯದೆ ಆಶಾ ಕಾರ್ಯಕರ್ತರು ತಮ್ಮ ಧರಣಿಯನ್ನು ಕೈಬಿಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ ಮಾಡಿದರು.

ಜಪಾನ್ ಪ್ರವಾಸಕ್ಕೆ ತೆರಳುವ ಮುನ್ನ ನಗರದಲ್ಲಿ ಮಧ್ಯರಾತ್ರಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಶಾ ಕಾರ್ಯಕರ್ತರ ಧರಣಿಯ ಕುರಿತು ಪ್ರತಿಕ್ರಿಯೆಸಿದರು.

ಆಶಾ ಕಾರ್ಯಕರ್ತರೊಂದಿಗೆ ಒಂದೂವರೆ ಗಂಟೆ ಚರ್ಚೆ ನಡೆದ ಬಳಿಕವೂ, ಯಾವುದೋ ಒಂದು ರಾಜಕೀಯ ಸಂಘಟನೆ ಒತ್ತಡ ಹಾಕುತ್ತಿದೆ ಎಂಬ ಕಾರಣಕ್ಕೆ ಧರಣಿಯನ್ನು ಮುಂದುವರಿಸುವುದಾದರೆ ನಾವು ಕೆಲಸ ಮಾಡುವುದು ಕಷ್ಟವಾಗುತ್ತದೆ ಎಂದು ಅಸಮಾಧಾನ ವ್ಯಕ್ತ ಪಡಿಸಿದರು.

ವಿಧಾನ ಮಂಡಲದ ಅಧಿವೇಶನಕ್ಕೂ ಮುನ್ನವೇ ಸೂಕ್ತ ನಿರ್ಧಾರ ತೆಗೆದುಕೊಳ್ಳುತ್ತೇವೆ, ಸಚಿವ ಸಂಪುಟ ಸಭೆಯಲ್ಲಿ ಈಗಾಗಲೇ



ಚರ್ಚೆ ಮಾಡಿದ್ದೇವೆ. ಅನಗತ್ಯವಾಗಿ ಧರಣಿ ಮುಂದುವರೆಸಬೇಡಿ. ನಿಮಗೆ ಸಹಾಯ ಮಾಡಲು ಸರ್ಕಾರ ಸಿದ್ಧವಿದೆ ಎಂದರು.

ವೇತನ ಪರಿಷ್ಕರಣೆ ಒಂದು ಇಲಾಖೆಗೆ ಸೀಮಿತವಾಗಿಲ್ಲ. ಏಳೆಂಟು ಇಲಾಖೆಗಳು ಸಮೇಳಿತವಾಗಿದೆ. ಅತಿಥಿ ಶಿಕ್ಷಕರು–ಉಪನ್ಯಾಸಕರು, ಆರೋಗ್ಯ ಕಾರ್ಯಕರ್ತರು, ಅಂಗನವಾಡಿಯವರು, ಅಡುಗೆ ಸಹಾಯಕರು ಸೇರಿದಂತೆ ಎಂಟು ಇಲಾಖೆಗಳ ಸಿಬ್ಬಂದಿಗಳಿಗೂ ಇದು ಅನ್ವಯವಾಗುತ್ತದೆ. ಒಬ್ಬರಿಗೆ ಹೆಚ್ಚಳ ಮಾಡಿದರೆ ಅದನ್ನು ಬೇರೆ

ಹಿಂದೆ ಭರವಸೆ ನೀಡಿದಂತೆ ಬೇಡಿಕೆ ಈಡೇರಿಕೆ
2025ರಲ್ಲಿ ಉಪಮುಖ್ಯಮಂತ್ರಿಯಾಗಿದ್ದ ಡಿ.ಕೆ.ಶಿವಕುಮಾರ್ 10 ಸಾವಿರ ರೂಪಾಯಿ ವೇತನ ಹೆಚ್ಚಿಸುವುದಾಗಿ ಭರವಸೆ ನೀಡಿದ್ದರು ಎಂಬ ವಾದವನ್ನು ತಳ್ಳಿಹಾಕಿದ ಅವರು, ಈ ಹಿಂದೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾಗಿದ್ದ ದಿನೇಶ್ ಗುಂಡೂರಾವ್‌ರೊಂದಿಗೆ ಚರ್ಚೆ ಮಾಡಿದ್ದೆ, ಆಗ ಭರವಸೆ ನೀಡಿದಂತೆ ಖಂಡಿತ ಸಹಾಯ ಮಾಡುತ್ತೇವೆ. ಆದರೆ 10 ಸಾವಿರ ರೂಪಾಯಿ ನಿಗದಿ ಮಾಡುತ್ತೇವೆ ಎಂದು ಯಾವುದೇ ಸಂಖ್ಯೆಯನ್ನು ಉಲ್ಲೇಖಿಸಿ ಭರವಸೆ ನೀಡಿರಲಿಲ್ಲ ಎಂದು ಸ್ಪಷ್ಟಪಡಿಸಿದರು. ಆಶಾ ಕಾರ್ಯಕರ್ತರು ನಮ್ಮ ಮೇಲೆ ಭರವಸೆ ಇಡಲಿ. ಸಹೋದರಿಯರು, ತಾಯಂದಿರಿಗೆ ಖಂಡಿತ ಸಹಾಯ ಮಾಡುತ್ತೇವೆ ಎಂದು ಡಿ.ಕೆ. ಶಿವಕುಮಾರ್ ಪುನರುಚ್ಚರಿಸಿದರು.

ಇಲಾಖೆಗಳಿಗೂ ಜಾರಿ ಮಾಡಬೇಕಾಗುತ್ತದೆ. ಹೀಗಾಗಿ ಸಹನೆಯಿಂದ ವರ್ತಿಸುವಂತೆ ಹೇಳಿದರು.

ಮೂರು ದಿನ ಮಾತ್ರ ಜಪಾನ್ ಪ್ರವಾಸ ಕೈಗೊಳ್ಳುತ್ತಿದ್ದು ವಾಪಸ್ ಬಂದ ನಂತರ ನ.25ರಂದು ನಡೆಯುವ ಸಂವಿಧಾನ ದಿನಾಚರಣೆಯಲ್ಲಿ ಭಾಗವಹಿಸುತ್ತೇನೆ ಮತ್ತು ವಿಧಾನ ಮಂಡಲದ ಅಧಿವೇಶನಕ್ಕೆ ಪೂರ್ವ ತಯಾರಿ ನಡೆಸಬೇಕಿದೆ ಎಂದರು. ಸಚಿವ ಎಂ.ಬಿ. ಪಾಟೀಲ್ ಮತ್ತು ಅಧಿಕಾರಿಗಳ ತಂಡ ಪ್ರವಾಸ ಮುಂದುವರೆಸಲಿದೆ. ಜಪಾನ್ ಹಾಗೂ ಸೋಲ್‌ನಲ್ಲಿ ರೋಡ್ ಶೋ ನಡೆಸಲಿದ್ದಾರೆ. ಬೆಂಗಳೂರಿನ ಬಿಡದಿ ಬಳಿಯ ಟೊಯೋಟಾ ಘಟಕ ಇದೆ. ಸಂಸ್ಥೆಯ ಮುಖ್ಯಸ್ಥರನ್ನು ಭೇಟಿ ಮಾಡಿ ಟೊಯೋಟಾದ ಮತ್ತೊಂದು ಘಟಕವನ್ನು ರಾಜ್ಯದಲ್ಲಿ ಆರಂಭಿಸುವಂತೆ ಮನವಿ ಮಾಡುತ್ತೇವೆ ಎಂದರು.

ಸಿಎಂ ನಿವಾಸ ನವೀಕರಣ ವೆಚ್ಚ ತನಿಖೆಗೆ ವಿಜಯೇಂದ್ರ ನೇತೃತ್ವದ ಸಮಿತಿ ರಚಿಸಿ: ಡಿಕೆಶಿ ಸವಾಲು

ಸದಸ್ಯರ ಆಯ್ಕೆ ಅವರಿಗೆ ಬಿಟ್ಟದ್ದು, ವಿಧಾನಸಭೆಗೆ ವರದಿ ನೀಡಲಿ

ಬೆಂಗಳೂರು, ನ.22: ಮುಖ್ಯಮಂತ್ರಿಗಳ ಅಧಿಕೃತ ನಿವಾಸದ ನವೀಕರಣ ಕಾಮಗಾರಿಗೆ ಮಾಡಿರುವ ವೆಚ್ಚದ ಕುರಿತು ತನಿಖೆ ನಡೆಸಲು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ಐವರು ಸದಸ್ಯರ ಸಮಿತಿ ರಚಿಸುತ್ತೇನೆ, ಬೇಕಾದರೆ ಪಾರದರ್ಶಕವಾಗಿ ತನಿಖೆ ಮಾಡಲಿ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಸ್ತಾಪಿಸಿದ್ದಾರೆ.

ಪಾರಂಪರಿಕ ಕಟ್ಟಡವಾಗಿರುವ ಕುಮಾರಕೃಪಾ ಅತಿಥಿಗೃಹವನ್ನು ನವೀಕರಿಸಿ ಮುಖ್ಯಮಂತ್ರಿ ಅಧಿಕೃತ ನಿವಾಸವಾದ ಗಂಗಾ ಎಂದು ರೂಪಿಸಲಾಗಿದೆ. ನವೀಕರಣ ಕಾಮಗಾರಿಗೆ ಸಾರ್ವಜನಿಕರ ಸುಮಾರು 100 ಕೋಟಿ ರೂ. ಹಣ ವೆಚ್ಚ ಮಾಡಲಾಗಿದೆ ಎಂಬ ಮಾಹಿತಿ ಇದೆ ಎಂದು ವಿಜಯೇಂದ್ರ ಆರೋಪಿಸಿದ್ದರು. ವಿಜಯೇಂದ್ರ ಅಧ್ಯಕ್ಷತೆಯಲ್ಲೇ ತನಿಖಾ ಸಮಿತಿ ರಚಿಸಲು ಸಿದ್ಧನಿದ್ದೇನೆ. ಸಮಿತಿಯಲ್ಲಿ ಯಾರಿರಬೇಕು, ನಮ್ಮ ಪಕ್ಷದ ಒಬ್ಬರೂ ಇರಬೇಕಾದ ಅಗತ್ಯವಿಲ್ಲ. ಜೆಡಿಎಸ್, ಬಿಜೆಪಿ–ಎನ್‌ಡಿಎ ಸದಸ್ಯರನ್ನು ಸೇರಿಸಿಕೊಳ್ಳಲಿ. ಅವರು ಬಯಸಿದರೆ ಪಕ್ಷೇತರರನ್ನೂ ಸೇರಿಸಿಕೊಳ್ಳಲಿ ಎಂದು ಹೇಳಿದರು.

ಐವರು ಸದಸ್ಯರ ಸಮಿತಿ ರಚಿಸುತ್ತೇನೆ. ಅವರು ತನಿಖೆ ನಡೆಸಲಿ, ಎಲ್ಲ ದಾಖಲೆಗಳನ್ನು ಪರಿಶೀಲಿಸಲಿ, 100 ಕೋಟಿ ರೂ. ವೆಚ್ಚವಾಗಿದ್ದರೆ ಆ ಹಣ ಎಲ್ಲಿ, ಹೇಗೆ ಖರ್ಚಾಗಿದೆ ಎಂಬುದನ್ನು ಪತ್ತೆ ಮಾಡಲಿ ಎಂದರು. ಎರಡು ದಿನಗಳೊಳಗೆ ತಮ್ಮ ತಂಡದಲ್ಲಿ ಯಾರಿರಬೇಕು ಎಂಬುದನ್ನು ಅವರೇ ನಿರ್ಧರಿಸಬಹುದು. ಬಳಿಕ ವಿಧಾನಸಭೆಗೆ ವರದಿ ಸಲ್ಲಿಸಲಿ ಎಂದರು. ಅಧಿಕೃತ ನಿವಾಸದಲ್ಲಿ ಊಟಕ್ಕೆ ವಿಜಯೇಂದ್ರ ಸೇರಿದಂತೆ ಎಲ್ಲರನ್ನೂ ಆಹ್ವಾನಿಸಿದ್ದೆ. ಎಲ್ಲ ಪಕ್ಷಗಳ ನಾಯಕರು ಭಾಗವಹಿಸಿದ್ದರು. ಕೆಲವರು ಬರಲಿಲ್ಲ, ಅದು ಬೇರೆ ವಿಷಯ ಎಂದರು.

2023ರ ಚುನಾವಣೆಗೂ ಮುನ್ನ ಅಂಗನವಾಡಿ, ಆಶಾ ಕಾರ್ಯಕರ್ತೆಯರಿಗೆ ಭರವಸೆ ನೀಡಿದ್ದು ಮರೆತಿರಾ?

ಆತ್ಮಸಾಕ್ಷಿಯಿದ್ದರೆ ನನ್ನ ಪ್ರಶ್ನೆಗಳಿಗೆ ಉತ್ತರಿಸುವಂತೆ ಸಿಎಂಗೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಸವಾಲು



ಬೆಂಗಳೂರು, ನ.22: ಆತ್ಮಸಾಕ್ಷಿ ಇದ್ದರೆ, ಸಂವಿಧಾನದ ಮೇಲೆ ಕೈಯಿಟ್ಟು ಪ್ರಮಾಣ ಮಾಡಿ ನನ್ನ ಪ್ರಶ್ನೆಗಳಿಗೆ ಉತ್ತರಿಸಿ ಎಂದು ಸಿಎಂ ಡಿ.ಕೆ.ಶಿವಕುಮಾರ್‌ಗೆ ವಿಪಕ್ಷ ನಾಯಕ ಆರ್.ಅಶೋಕ್ ಸವಾಲು ಹಾಕಿದ್ದಾರೆ.

ಈ ಸಂಬಂಧ ಎಕ್ಸ್ ಪೋಸ್ಟ್ ಮಾಡಿರುವ ಅವರು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೇ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಸುರ್ಜೀವಾಲ ಅವರೇ, ಸಂವಿಧಾನದ ದಿನದಂದು ಸಂವಿಧಾನದ ಬಗ್ಗೆ ದೊಡ್ಡ ಭಾಷಣ ಮಾಡುವ ಮೊದಲು, ನೀವು ಕರ್ನಾಟಕದ ಸ್ವಾಭಿಮಾನಿ ಮಹಿಳೆಯರಿಗೆ ಕೊಟ್ಟ ಮಾತುಗಳ ಬಗ್ಗೆ ಉತ್ತರಿಸುವ ನೈತಿಕತೆ ತೋರಿಸಿ.

ನನ್ನದೊಂದು ನೇರ ಸವಾಲು. 2023ರ ವಿಧಾನಸಭಾ ಚುನಾವಣೆಗೂ ಮುನ್ನ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರ ಪ್ರತಿನಿಧಿಗಳನ್ನು ನೀವು ಪ್ರತ್ಯೇಕವಾಗಿ ಕರೆಸಿ ಸಭೆ ನಡೆಸಿದ್ದು ಸುಳ್ಳಾ, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರ ಗೌರವಧನ ಹೆಚ್ಚಿಸುತ್ತೇವೆ ಎಂದು ಭರವಸೆ ನೀಡಿದ್ದು ಸುಳ್ಳಾ, ಮಹಿಳಾ ಕಾರ್ಯಕರ್ತೆಯರಿಗೆ ನೀಡಿದ ಈ ಭರವಸೆಯನ್ನು ಕಾಂಗ್ರೆಸ್ ಪಕ್ಷದ ಚುನಾವಣಾ ಪ್ರಣಾಳಿಕೆಯಲ್ಲಿ ಸೇರಿಸಿದ್ದು ಸುಳ್ಳಾ, ಈ ಭರವಸೆಗಳನ್ನೇ ಮುಂದಿಟ್ಟುಕೊಂಡು ಸಾವಿರಾರು ಮಹಿಳೆಯರ ಮತಗಳನ್ನು ಕೇಳಿದ್ದು ಸುಳ್ಳಾ ಈ ನಾಲ್ಕು ಪ್ರಶ್ನೆಗಳಿಗೆ ಉತ್ತರಿಸುವ ನೈತಿಕತೆ ನಿಮಗಿದೆಯೇ ಎಂದು ಪ್ರಶ್ನಿಸಿದ್ದಾರೆ.

ಮಹಿಳೆಯರ ಮತ ಬೇಕಾದಾಗ ಅವರ ಮನೆಬಾಗಿಲಿಗೆ ಹೋಗಿ, ಅವರ ಸಮಸ್ಯೆಗಳನ್ನು ಆಲಿಸುವ ನಾಟಕವಾಡಿ, ವೇದಿಕೆಗಳ ಮೇಲೆ ಭರವಸೆಗಳ ಮಳೆ ಸುರಿಸಿ, ಪ್ರಣಾಳಿಕೆಯಲ್ಲಿ ಘೋಷಣೆಗಳನ್ನು ಮುದ್ರಿಸಿ ಅಧಿಕಾರಕ್ಕೆ ಬಂದಿರಿ. ಆದರೆ ಅಧಿಕಾರ ಸಿಕ್ಕಿದ ಮೇಲೆ ಆ ಮಹಿಳೆಯರೇ ನಿಮಗೆ ನೆನಪಿಲ್ಲ. ಇಂದು ಅದೇ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ತಮ್ಮ ನ್ಯಾಯಯುತ ಬೇಡಿಕೆಗಳಿಗಾಗಿ ಬೀದಿಗಿಳಿಯಬೇಕಾಗಿದೆ. ಅಹೋರಾತ್ರಿ ಪ್ರತಿಭಟನೆ ನಡೆಸಬೇಕಾಗಿದೆ. ಸರ್ಕಾರದ ಗಮನ ಸೆಳೆಯಲು ಮನೆ, ಕುಟುಂಬ ಬಿಟ್ಟು ಬೀದಿಗೆ ಇಳಿಯಬೇಕಾದ ದುಸ್ಥಿತಿಗೆ ಅವರನ್ನು ತಳ್ಳಿದ್ದೀರಿ ಎಂದು ವಾಗ್ದಾಳಿ ನಡೆಸಿದ್ದಾರೆ.

ಹಿರಿಯೂರು ಉಪಚುನಾವಣೆಯಲ್ಲೂ ಮತದಾರರು ಕಾಂಗ್ರೆಸ್‌ಗೆ ಕಪಾಳಮೋಕ್ಷ ಮಾಡಲಿದ್ದಾರೆ

ಬಿಜೆಪಿಯವರು ಮನೆಬಾಗಿಲಿಗೆ ಬಂದರೆ ಬಹಿಷ್ಕರಿಸಿ: ಸಿಎಂ ಹೇಳಿಕೆಗೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ತಿರುಗೇಟು



ಶಿವಮೊಗ್ಗ, ನ.22: ಬಿಜೆಪಿಯವರು ಮತದಾರರ ಬಾಗಿಲಿಗೆ ಬಂದರೆ ಬಹಿಷ್ಕಾರ ಹಾಕಿ ಎಂದು ಹಿರಿಯೂರಿನಲ್ಲಿ ಸಿಎಂ ಡಿ.ಕೆ.ಶಿವಕುಮಾರ್ ಉದ್ಧಟತನದಿಂದ ಮಾತನಾಡಿದ್ದರೆ. ಇತ್ತೀಚಿನ ವಿಧಾನ ಪರಿಷತ್ ಚುನಾವಣೆಯಲ್ಲಿ ಪ್ರಬುದ್ಧ ಮತದಾರರು ಕಾಂಗ್ರೆಸ್‌ಗೆ ಕಪಾಳ ಮೋಕ್ಷ ಮಾಡಿದ್ದಾರೆ. ಅದೇ ರೀತಿ ಹಿರಿಯೂರಿನ ಉಪಚುನಾವಣೆಯಲ್ಲೂ ನಡೆಯಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿಗಳಿಗೆ ಕಳೆದ ಮೂರುವರೆ ವರ್ಷದಿಂದ ನೆನಪಿಗೆ ಬಾರದ ಕಾಡುಗೊಲ್ಲ ಸಮುದಾಯ ಈಗ ನೆನಪಾಗಿದೆಯೇ. ಈಗ ಸಿಎಂ ಕಾಡುಗೊಲ್ಲ ಸಮುದಾಯದ ವಿಚಾರದಲ್ಲಿ ರಾಜಕೀಯ ಮಾಡಲು ಬಂದಿದ್ದಾರೆ. ಹಿರಿಯೂರಿಗೆ ಈಗ ನೀರು ತೆಗೆದುಕೊಂಡು ಹೋಗಿದ್ದಾರೆ. ಆ ಯೋಜನೆಗೆ ಅನುದಾನ ಕೊಟ್ಟಿದ್ದು ಬಿಜೆಪಿ ಸರ್ಕಾರ. ನೀವು ನೀರಾವರಿಗೆ ಎಷ್ಟು ಅನುದಾನ ನೀಡಿದ್ದೀರಿ ಎಂಬುದನ್ನು ಚಳಿಗಾಲದ ಅಧಿವೇಶನದಲ್ಲಿ ಚರ್ಚೆಸೋಣ ಎಂದರು.

ರಾಜ್ಯದಲ್ಲಿ ಬರಗಾಲವಿದೆ. ಆದರೂ ಸಹ ಸಿಎಂ ಡಿ.ಕೆ.ಶಿವಕುಮಾರ್ ಹಲವು ಯೋಜನೆಗಳನ್ನು ಮನಸೋ ಇಚ್ಛೆ ಘೋಷಣೆ ಮಾಡಿದ್ದಾರೆ. ಕಳೆದ ಮೂರು ವರ್ಷಗಳಿಂದ ರಸ್ತೆಗಳ ಗುಂಡಿ ಮುಚ್ಚಲು ಸರ್ಕಾರಕ್ಕೆ ಆಗಲಿಲ್ಲ. ಶಾಸಕರ ಕ್ಷೇತ್ರಗಳ ಅಭಿವೃದ್ಧಿಗೆ ಹಣವನ್ನೂ ಕೊಡಲಿಲ್ಲ. ಇದರಿಂದ ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಸರ್ಕಾರ ಕೇವಲ ಜಾಹೀರಾತು ಮೂಲಕ ನುಡಿದಂತೆ ನಡೆದ ಸರ್ಕಾರವಾಗಿದೆ ಎಂದು ಹರಿಹಾಯ್ದರು.

ಬರದ ಸಂದರ್ಭದಲ್ಲಿ ಬೋರ್ಡ್‌ಗಳಿಗೆ ನೇಮಕ ಅನಿವಾರ್ಯವಾಗಿತ್ತೇ?

ರಾಜ್ಯ ಸರ್ಕಾರ ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರನ್ನು ನೇಮಕ ಮಾಡಿದೆ. ಭಾರತ್ ಜೋಡೋ ಸಂಯೋಜಕರನ್ನು ನೇಮಿಸಿದೆ. ರಾಜ್ಯದಲ್ಲಿ ಭೀಕರ ಬರಗಾಲ ಇದ್ದು, ರೈತರಿಗೆ ಪರಿಹಾರ ಕೊಡುವ ಯೋಗ್ಯತೆ ಇಲ್ಲ. ಶಾಸಕರಿಗೆ ಬೋರ್ಡ್ ಅಧ್ಯಕ್ಷ ಸ್ಥಾನ ನೀಡಿ ಕ್ಯಾಬಿನೆಟ್ ದರ್ಜೆ ಕೊಡುತ್ತಿದ್ದಾರೆ. ಈ ಮೂಲಕ ಕಾಂಗ್ರೆಸ್ ಕಾರ್ಯಕರ್ತರಿಗೆ ಗಂಜಿ ಕೇಂದ್ರ ತೆರೆಯುವ ಕೆಲಸ ಮಾಡುತ್ತಿದೆ. ರಾಜ್ಯ ಸರ್ಕಾರವೇ ಆರ್ಥಿಕ ಸಂಕಷ್ಟದಲ್ಲಿದೆ. ಬರಗಾಲದ ಸಂದರ್ಭದಲ್ಲಿ ಬೋರ್ಡ್ ನೇಮಕ ಮಾಡುವ ಅನಿವಾರ್ಯತೆ ಸಿಎಂಗೆ ಏನಿತ್ತು. ನಾನು ಪ್ರಜಾ ಸೇವಕ ಎಂದು ಕರೆದುಕೊಳ್ಳುವ ಮುಖ್ಯಮಂತ್ರಿ ತಮ್ಮ ಮನೆಯ ಶೃಂಗಾರಕ್ಕೆ 100 ಕೋಟಿ ರೂ ಖರ್ಚು ಮಾಡಿದ್ದಾರೆ. ಪ್ರಜಾಸೇವಕ ಅನ್ನೋರು ಬರಗಾಲದಲ್ಲಿ ಮನೆ ಅಲಂಕಾರ ಮಾಡಿಕೊಳ್ಳಬೇಕಿತ್ತೇ ಎಂದು ವಿಜಯೇಂದ್ರ ಪ್ರಶ್ನಿಸಿದರು.

ಸಿಎಂ ನೂತನ ಸರ್ಕಾರಿ ನಿವಾಸದ ಗೃಹಪ್ರವೇಶ ಔತಣಕೂಟದಲ್ಲಿ ಬಿಜೆಪಿ ಶಾಸಕರು ಪಾಲ್ಗೊಂಡಿದ್ದಕ್ಕೆ ವಿಜಯೇಂದ್ರ ಅಸಮಾಧಾನಕ್ಕೆ ಪ್ರತಿಕ್ರಿಯೆ



ಹೊಂದಾಣಿಕೆ ರಾಜಕಾರಣಿಯಲ್ಲ: ಜನಾರ್ದನ ರೆಡ್ಡಿ ತಿರುಗೇಟು

ಬೆಂಗಳೂರು, ನ.22: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೂತನ ಸರ್ಕಾರಿ ನಿವಾಸದ ಗೃಹಪ್ರವೇಶ ಔತಣಕೂಟದಲ್ಲಿ ಬಿಜೆಪಿ ಶಾಸಕರು ಪಾಲ್ಗೊಂಡಿರುವ ವಿಚಾರ ರಾಜ್ಯ ರಾಜಕೀಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ನವೆಂಬರ್ 19ರಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಮ್ಮ ನೂತನ ಅಧಿಕೃತ ನಿವಾಸವಾದ ಗಂಗಾದಲ್ಲಿ ಗೃಹಪ್ರವೇಶದ ಅಂಗವಾಗಿ ಪಕ್ಷಾತೀತ ಔತಣಕೂಟವನ್ನು ಆಯೋಜಿಸಿದ್ದರು.

ಈ ಕಾರ್ಯಕ್ರಮಕ್ಕೆ ಆಹ್ವಾನದ ಮೇರೆಗೆ ಗಾಲಿ ಜನಾರ್ದನ ರೆಡ್ಡಿ, ಎಸ್.ಆರ್. ವಿಶ್ವನಾಥ್, ಕೆ. ಗೋಪಾಲಯ್ಯ, ಎಂ. ಕೃಷ್ಣಪ್ಪ ಹಾಗೂ ಎಲ್.ಎ.ರವಿ ಸುಬ್ರಹ್ಮಣ್ಯ ಸೇರಿದಂತೆ ಹಲವು ಬಿಜೆಪಿ ಶಾಸಕರು ಹಾಜರಾಗಿದ್ದರು. ಆದರೆ, ತಮ್ಮ ಪಕ್ಷದ ಶಾಸಕರು ಮುಖ್ಯಮಂತ್ರಿಗಳ ಔತಣಕೂಟದಲ್ಲಿ ಭಾಗಿಯಾಗಿರುವುದನ್ನು ವೈಯಕ್ತಿಕವಾಗಿ ಒಪ್ಪುವುದಿಲ್ಲ ಎಂದು ವಿಜಯೇಂದ್ರ ಅಸಮಾಧಾನ ಹೊರಹಾಕಿದ್ದರು.

ವಿಜಯೇಂದ್ರ ಅವರ ಈ ಅಸಮಾಧಾನಕ್ಕೆ ಕೊಪ್ಪಳದ ಕಾರಟಗಿಯಲ್ಲಿ ಪ್ರತಿಕ್ರಿಯಿಸಿರುವ ಜನಾರ್ದನರೆಡ್ಡಿ, ಮುಖ್ಯಮಂತ್ರಿಗಳ ಔತಣಕೂಟಕ್ಕೆ ಬಿಜೆಪಿ ಶಾಸಕರು ಹೋಗಬಾರದು ಎಂಬ ನಿರ್ಧಾರವಿದ್ದರೆ ರಾಜ್ಯಾಧ್ಯಕ್ಷರು ಈ ಮೊದಲೇ ಸ್ಪಷ್ಟ ಸೂಚನೆ ನೀಡಬೇಕಿತ್ತು. ಮೊದಲೇ ತಿಳಿಸಿದ್ದರೆ ನಮ್ಮಲ್ಲಿ ಯಾರೂ ಆ ಕಾರ್ಯಕ್ರಮಕ್ಕೆ ಹೋಗುತ್ತಿರಲಿಲ್ಲ ಎಂದು ಹೇಳಿದ್ದಾರೆ.

ತಾವು ಮುಖ್ಯಮಂತ್ರಿಗಳ ಅಧಿಕೃತ ನಿವಾಸದ ಗೃಹಪ್ರವೇಶ ಕಾರ್ಯಕ್ರಮಕ್ಕೆ ಒಬ್ಬ ಶಾಸಕನಾಗಿ ಬಹಿರಂಗವಾಗಿಯೇ ಹೋಗಿದ್ದೇವೆಯೇ ಹೊರತು, ಕಾಂಗ್ರೆಸ್ ಪಕ್ಷದ ಯಾವುದೇ ಕಾರ್ಯಕ್ರಮದಲ್ಲಿ ಭಾಗವಹಿಸಿಲ್ಲ. ನಾವು ಬೇರೆಯವರಂತೆ ಹಿಂದಿನ ಬಾಗಿಲಿನಿಂದ ಅಥವಾ ಕತ್ತಲಲ್ಲಿ ಹೋಗಿ ಅಡ್ಜಸ್ಟ್‌ಮೆಂಟ್ ಮಾಡಿಕೊಂಡು ಬರುವ ರಾಜಕಾರಣಿಯಲ್ಲ, ಬದಲಾಗಿ ಎಲ್ಲವನ್ನೂ ನೇರವಾಗಿ ಮಾಡುವ ರಾಜಕಾರಣಿ ಎಂದು ಖಾರವಾಗಿ ನುಡಿದಿದ್ದಾರೆ.

ನಿಸ್ವಾರ್ಥ ಪ್ರೇಮವೇ ಎಲ್ಲ ಸೇವಾ ಕಾರ್ಯಗಳ ಮೂಲ: ಸದ್ಗುರು ಶ್ರೀ ಮಧುಸೂದನ ಸಾಯಿ



ಮುದ್ದೇನಹಳ್ಳಿಯಲ್ಲಿ ಸಾಯಿಸ್ಫೂರ್ತಿ ಹಳೆಯ ವಿದ್ಯಾರ್ಥಿಗಳ ವಾರ್ಷಿಕ ಸಮ್ಮಿಲನ; ಇಬ್ಬರು ಸಾಧಕರಿಗೆ ಅಲುಮ್ನಿ ಎಕ್ಸಲೆನ್ಸ್ ಪ್ರಶಸ್ತಿ ಪ್ರದಾನ



ಚಿಕ್ಕಬಳ್ಳಾಪುರ, ನ.22: ನಿಸ್ವಾರ್ಥ ಪ್ರೇಮವೇ ಎಲ್ಲ ಸೇವಾ ಕಾರ್ಯಗಳ ಮೂಲ. ಪ್ರೇಮದ ಮೂಲಕವೇ ನಿಜವಾದ ಸೇವೆ ಸಾಧ್ಯ ಎಂದು ಸದ್ಗುರು ಶ್ರೀ ಮಧುಸೂದನ ಸಾಯಿ ಹೇಳಿದರು.

ತಾಲ್ಲೂಕಿನ ಮುದ್ದೇನಹಳ್ಳ

ಭೂಗ್ಯಾರಂಟಿ ಯೋಜನೆಯಡಿ 5 ಲಕ್ಷ ನಿವೇಶನಗಳ ಅಭಿವೃದ್ಧಿಗೆ 1 ಸಾವಿರ ಕೋಟಿ ಮೀಸಲು: ಸಿಎಂ ಡಿಕೆಶಿ

ಬೆಂಗಳೂರು,ನ.22: ರಾಜ್ಯದಲ್ಲಿ ಭೂಗ್ಯಾರಂಟಿ ಯೋಜನೆಯಡಿ 15 ಲಕ್ಷ ಉಚಿತ ನಿವೇಶನ ವಿತರಿಸಲು ಸರ್ಕಾರ ನಿರ್ಧರಿಸಿದ್ದು, ಮೊದಲ ಹಂತದಲ್ಲಿ 5 ಲಕ್ಷ ನಿವೇಶನಗಳ ಅಭಿವೃದ್ಧಿಗೆ 1 ಸಾವಿರ ಕೋಟಿ ಮೀಸಲಿಡಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ವಸತಿ ಸೌಲಭ್ಯಕ್ಕೆ ಹೊಸ ವಿಸ್ತಾರ ಮತ್ತು ಸ್ವಂತ ಸೂರು ಸರ್ಕಾರದ ಭರವಸೆಯಾಗಿದ್ದು, ಪ್ರತಿಯೊಂದು ಕುಟುಂಬಕ್ಕೂ ಸೂರು ಕಲ್ಪಿಸುವ ಉದ್ದೇಶ ಹೊಂದಲಾಗಿದೆ. ಇತ್ತೀಚೆಗೆ ನಡೆದ ಸಚಿವ ಸಂಪುಟದಲ್ಲಿ ಮಹತ್ವದ ನಿರ್ಧಾರಗಳನ್ನು ಕೈಗೊಳ್ಳಲಾಗಿದೆ. ರಾಜ್ಯದ ವಸತಿರಹಿತ ಮತ್ತು ಭೂರಹಿತ ಕುಟುಂಬಗಳಿಗೆ ವಸತಿ ಭದ್ರತೆ ಒದಗಿಸುವುದು ಸರ್ಕಾರದ ಕರ್ತವ್ಯವಾಗಿದೆ ಎಂದು ತಿಳಿಸಿದ್ದಾರೆ.

ಮಾಜಿ ಸೈನಿಕರು, ದುರ್ಬಲ ವರ್ಗದ ಕುಟುಂಬಗಳಿಗೆ ಸ್ವಂತ ಸೂರು ಕಲ್ಪಿಸಲಾಗುವುದು.



ಪರಿಶಿಷ್ಟ ಸಮುದಾಯದ ಜನರಿಗೆ ಮನೆ ನಿರ್ಮಾಣ ಸಹಾಯಧನವನ್ನು 3 ಲಕ್ಷ ಹಾಗೂ ಸಾಮಾನ್ಯ ವರ್ಗಕ್ಕೆ 2 ಲಕ್ಷ ರೂಪಾಯಿಗೆ ಹೆಚ್ಚಳ ಮಾಡಲಾಗಿದೆ ಎಂದು ಹೇಳಿದ್ದಾರೆ.

ವಿವಿಧ ವಸತಿ ಯೋಜನೆಗಳಡಿ ಫಲಾನುಭವಿಗಳಿಗೆ 1 ಲಕ್ಷ ಹೊಸ ಮನೆ ನಿರ್ಮಾಣಕ್ಕೆ 2 ಸಾವಿರದ 241 ಕೋಟಿ ರೂ. ಮೀಸಲಿಟ್ಟಿದ್ದು, ಸಾಮಾನ್ಯ ವರ್ಗದ ಫಲಾನುಭವಿಗಳ ಸಹಾಯಧನ 1 ಲಕ್ಷದ 20 ಸಾವಿರದಿಂದ 2 ಲಕ್ಷಕ್ಕೆ ಏರಿಕೆ, ಪರಿಶಿಷ್ಟ ಜಾತಿ, ಪಂಗಡದ ಫಲಾನುಭವಿಗಳಿಗೆ 2 ಲಕ್ಷದಿಂದ 3 ಲಕ್ಷಕ್ಕೆ ಸಹಾಯಧನ ಹೆಚ್ಚಿಸಲಾಗಿದ್ದು, ರಾಜೀವ್ ಗಾಂಧಿ ವಸತಿ ನಿಗಮದಿಂದ ಯೋಜನೆ ಅನುಷ್ಠಾನ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ನಮ್ಮ ಮನೆ ಯೋಜನೆಯಡಿ 93240 ನಿವೇಶನ ಹಂಚಿಕೆಗೆ ನಿರ್ಧಾರ

ಮುಖ್ಯಮಂತ್ರಿಗಳ ನಮ್ಮ ಮನೆ ಯೋಜನೆಯಡಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ರಾಜ್ಯಾದ್ಯಂತ 6 ಸಾವಿರದ 600 ಎಕರೆ ಜಮೀನಿನಲ್ಲಿ 93 ಸಾವಿರದ 240 ನಿವೇಶನ ಹಂಚಲು ನಿರ್ಧರಿಸಲಾಗಿದ್ದು, ಅಂದಾಜು 11 ಸಾವಿರದ 655 ಕೋಟಿ ಮೆಚ್ಚದಲ್ಲಿ ಅಭಿವೃದ್ಧಿಪಡಿಸಲು ಸರ್ಕಾರ ಮುಂದಾಗಿದೆ. ಸಮುದಾಯದ ಶ್ರಮಿಕರಿಗೆ ಶೇಕಡ 50ರ ರಿಯಾಯಿತಿಯಲ್ಲಿ 50 ಸಾವಿರ ನಿವೇಶನ ನೀಡಲಾಗುವುದು. ಈ ಉದ್ದೇಶಕ್ಕಾಗಿ 2 ಸಾವಿರದ 914 ಕೋಟಿ ರೂ. ಹಂಚಿಕೆ ಮಾಡಲಾಗುವುದು ಎಂದು ಡಿ.ಕೆ. ಮಾಹಿತಿ ಹಂಚಿಕೊಂಡಿದ್ದಾರೆ.

ಡಿ.2ರಿಂದ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ

ಬೆಳಗಾವಿ, ನ.22: ಡಿಸೆಂಬರ್ 2ರಿಂದ ಇಲ್ಲಿನ ಸುವರ್ಣ ವಿಧಾನಸೌಧದಲ್ಲಿ ಆರಂಭವಾಗಲಿರುವ ರಾಜ್ಯ ವಿಧಾನಮಂಡಲದ 10 ದಿನಗಳ ಚಳಿಗಾಲದ ಅಧಿವೇಶನದಲ್ಲಿ ಅಭಿವೃದ್ಧಿ ವಿಚಾರಗಳಿಗೆ, ಅದರಲ್ಲೂ ವಿಶೇಷವಾಗಿ ಉತ್ತರ ಕರ್ನಾಟಕದ ಸಮಸ್ಯೆಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ವಿಧಾನಸಭಾಧ್ಯಕ್ಷ ಜಿ.ಎಸ್.ಪಾಟೀಲ್ ಮತ್ತು ವಿಧಾನ ಪರಿಷತ್ ಸಭಾಪತಿ ಸಲೀಂ ಅಹ್ಮದ್ ತಿಳಿಸಿದರು.ಸುವರ್ಣ ವಿಧಾನಸೌಧದಲ್ಲಿ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸದನದಲ್ಲಿ ಅರ್ಥಪೂರ್ಣ ಚರ್ಚೆಗಳಿಗೆ ಅವಕಾಶ ಕಲ್ಪಿಸಲಾಗುವುದು. ಪ್ರಾದೇಶಿಕ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳು ಒಟ್ಟಾಗಿ ಕಾರ್ಯನಿರ್ವಹಿಸುವಂತೆ ಪ್ರೋತ್ಸಾಹಿಸಲಾಗುವುದು ಎಂದು ಭರವಸೆ ನೀಡಿದರು.

ಕಲಾಪಕ್ಕೆ ಅಡ್ಡಿಯಾಗದಂತೆ ಕ್ರಮ: ಜಿ.ಎಸ್. ಪಾಟೀಲ್



ಶಾಸಕ ಹಾಜರಾತಿ ಹೆಚ್ಚಿಸಲು ಉತ್ತೇಜನ: ಸಲೀಂ ಅಹ್ಮದ್

ವರ್ಷವಿಡೀ ಸುವರ್ಣ ವಿಧಾನಸೌಧವನ್ನು ಸಕ್ರಿಯವಾಗಿ ಬಳಸಿಕೊಳ್ಳಲು ಪ್ರತಿ ತಿಂಗಳು ವಿಧಾನಮಂಡಲದ ಒಂದು ಸಮಿತಿ ಸಭೆಯನ್ನು ಇಲ್ಲಿಯೇ ನಡೆಸಲು ಯೋಜಿಸಲಾಗಿದೆ. ಈ ಬಾರಿಯ ಅಧಿವೇಶನದಲ್ಲಿ ಕಲಾಪದ ಜೊತೆಗೆ ಹಲವು ಹೊಸ ಉಪಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸಾಂಸ್ಕೃತಿಕ ಕಾರ್ಯಕ್ರಮಗಳು, ಪುಸ್ತಕ ಮೇಳ, ಯೋಗಾಭ್ಯಾಸ ಹಾಗೂ ಶಾಲಾ ಮಕ್ಕಳಿಗಾಗಿ ಕೃತಕ ಬುದ್ಧಿಮತ್ತೆ ಆಧಾರಿತ ವಿಶೇಷ ಸಂವಾದ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಇನ್ನು ಸದನದಲ್ಲಿ ಶಾಸಕರ ಹಾಜರಾತಿ ಹೆಚ್ಚಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಸಭಾಪತಿ ಸಲೀಂ ಅಹ್ಮದ್ ಸ್ಪಷ್ಟಪಡಿಸಿದರು.

ಅಧಿವೇಶನದ ಸಂದರ್ಭದಲ್ಲಿ ಸಾರ್ವಜನಿಕರು ಪ್ರತಿಭಟನೆಗೆ ಇಳಿಯುವ ಮುನ್ನವೇ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಪರಿಹರಿಸಬಹುದಾದ ಸಮಸ್ಯೆಗಳನ್ನು ತಕ್ಷಣವೇ ಬಗೆಹರಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಸದನದ ಕಲಾಪಗಳಿಗೆ ಅಡ್ಡಿಯಾಗದಂತೆ ಎಚ್ಚರ ವಹಿಸಲಾಗುವುದು ಮತ್ತು ಅಭಿವೃದ್ಧಿ ವಿಷಯಗಳ ಚರ್ಚೆಗೆ ಹೆಚ್ಚಿನ ಸಮಯ ಮೀಸಲಿಡಲಾಗುವುದು. ಅಧಿವೇಶನಕ್ಕೆ ಆಗಮಿಸುವ ಶಾಸಕರು ಹಾಗೂ ಅಧಿಕಾರಿಗಳಿಗೆ ವಸತಿ, ಊಟ, ಸಾರಿಗೆ, ಭದ್ರತೆ, ನಿರಂತರ ವಿದ್ಯುತ್ ಮತ್ತು ಅಂತರ್ಜಾಲ ಸೌಲಭ್ಯ ಕಲ್ಪಿಸಲು ಸಕಲ ಸಿದ್ಧತೆ ನಡೆಸಲಾಗಿದೆ. ಶಾಸಕರಿಗೆ ಉತ್ತಮ ವಸತಿ ಸೌಲಭ್ಯ ಒದಗಿಸಲು ಬೆಂಗಳೂರಿನ ಶಾಸಕರ ಭವನದ ಮಾದರಿಯಲ್ಲೇ ಇಲ್ಲಿಯೂ ಪ್ರತ್ಯೇಕ ಕಟ್ಟಡ ನಿರ್ಮಿಸುವ ಪ್ರಸ್ತಾವನೆಯಿದ್ದು, ಸಿಎಂ ಜೊತೆ ಚರ್ಚಿಸಿ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ಸ್ಪೀಕರ್ ಜಿ.ಎಸ್. ಪಾಟೀಲ್ ತಿಳಿಸಿದರು

ಅರಣ್ಯ ಕಾಯ್ದೆ ಅನುಷ್ಠಾನ: ರೈತರನ್ನು ಒಕ್ಕಲೆಬ್ಬಿಸಲು ಬಿಡಲ್ಲ–ಎಚ್.ಡಿ.ಕುಮಾರಸ್ವಾಮಿ ಭರವಸೆ

ಬೆಂಗಳೂರು ನ.22: ಅರಣ್ಯ ಕಾಯ್ದೆಗಳ ಅನುಷ್ಠಾನದ ಸಂದರ್ಭದಲ್ಲಿ ತೀವ್ರ ತೊಂದರೆಗೆ ಸಿಲುಕುತ್ತಿರುವ ರೈತರಿಗೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಕೇಂದ್ರದ ಅರಣ್ಯ ಸಚಿವರೊಂದಿಗೆ ಚರ್ಚೆ ಮಾಡೋಣ. ಚಳಿಗಾಲದ ಸಂಸತ್ ಅಧಿವೇಶನ ಸಂದರ್ಭದಲ್ಲಿ ಒಂದು ನಿಯೋಗ ಬನ್ನಿ. ನಾನೇ ನಿಮ್ಮನ್ನು ಕೇಂದ್ರದ ಅರಣ್ಯ ಸಚಿವರ ಬಳಿಗೆ ಕರೆದುಕೊಂಡು ಹೋಗುತ್ತೇನೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಎಚ್.ಡಿ.ಕುಮಾರಸ್ವಾಮಿ ಅವರು ಕೊಡಗಿನ ರೈತರಿಗೆ ಭರವಸೆ ನೀಡಿದರು.

ಸೋಮವಾರಪೇಟೆಯಲ್ಲಿ ರೈತ ಮುಖಂಡ ಹಾಗೂ ಸಮಾಜಸೇವಕ ಹರಪಳ್ಳಿ ರವೀಂದ್ರ ಅವರ ಕುರಿತಾದ ಪುಸ್ತಕವನ್ನು ಭಾನುವಾರ ಲೋಕಾರ್ಪಣೆ ಮಾಡಿ ಮಾತನಾಡಿ, ಸಮಸ್ಯೆ ಕೇವಲ ಕೊಡಗು ಜಿಲ್ಲೆಗೆ ಮಾತ್ರವೇ ಇಲ್ಲ. ಮಲೆನಾಡಿನ ಬಹುತೇಕ ಜಿಲ್ಲೆಗಳ ರೈತರಿಗೂ ಇದೇ ತೊಂದರೆ ಇದೆ. ಯಾವುದೇ ಕಾರಣಕ್ಕೂ ರೈತರನ್ನು ಒಕ್ಕಲೆಬ್ಬಿಸಲು ಬಿಡುವುದಿಲ್ಲ ಎಂದು ಹೇಳಿದರು.

15 ದಿನಗಳಲ್ಲಿ ಸಂಸತ್ತಿನ ಚಳಿಗಾಲದ ಅಧಿವೇಶನ ಆರಂಭವಾಗುತ್ತಿದೆ. ಕೊಡಗಿನ 4–5 ರೈತ ಮುಖಂಡರು, ವಕೀಲರು ದೆಹಲಿಗೆ ಬನ್ನಿ. ನಾನು ಮತ್ತು ನನ್ನ ಸಂಪುಟ ಸಹೋದ್ಯೋಗಿಗಳಾಗಿರುವ ಪ್ರಹ್ಲಾದ್ ಜೋಶಿ ಅವರೊಂದಿಗೆ ಚರ್ಚಿಸಿ ನಿಮ್ಮನ್ನು ಅರಣ್ಯ ಸಚಿವರ ಬಳಿಗೆ ಕರೆದುಕೊಂಡು ಹೋಗಿ ಒಂದು ಸಭೆ ನಡೆಸುವ ಪ್ರಯತ್ನ ಮಾಡುತ್ತೇನೆ. ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೂ ಕೂಡ ಚರ್ಚೆ ಮಾಡೋಣ. ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಪ್ರಾಮಾಣಿಕ ಪ್ರಯತ್ನ ಮಾಡೋಣ ಎಂದು ಸಚಿವರು ಹೇಳಿದರು.

ರೈತರು ಅರಣ್ಯಭೂಮಿಯನ್ನು ಒತ್ತುವರಿ



ಮಾಡಿದ್ದಾರೆ ಎಂಬುದನ್ನು ಒಪ್ಪಲು ಸಾಧ್ಯವಿಲ್ಲ. ಕಾಡಿನ ಮಕ್ಕಳಾಗಿ ಪ್ರಕೃತಿಯನ್ನು ಜವಾಬ್ದಾರಿಯಿಂದ ರಕ್ಷಣೆ ಮಾಡುವ ಕೆಲಸವನ್ನು ರೈತರು ಮಾಡುತ್ತಿದ್ದಾರೆ. ಕೇವಲ ಅರಣ್ಯ ಇಲಾಖೆಯಷ್ಟೇ ಅದನ್ನು ಮಾಡುತ್ತಿಲ್ಲ ಎಂಬುದನ್ನು ಮರೆಯುವುದಿಲ್ಲ. ಕೇವಲ ಅರಣ್ಯ ಇಲಾಖೆಯಿಂದ ಮಾತ್ರ ಕಾಡು ಉಳಿದಿದೆ ಎಂಬುದನ್ನು ನಾವು ಒಪ್ಪುವುದಿಲ್ಲ ಎಂದರು ಸಚಿವರು. ಅರಣ್ಯ ಕಾಯ್ದೆಗಳನ್ನು ಅನುಷ್ಠಾನ ಮಾಡಬೇಕಾದಾಗ ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ ಯಾವುದು ಅರಣ್ಯ, ಯಾವುದು ಅರಣ್ಯವಲ್ಲ ಎಂಬುದನ್ನು ಬಹಳ ಸೂಕ್ಷ್ಮತೆಯಿಂದ ಗಮನಿಸಬೇಕಾಗುತ್ತದೆ. ಸ್ಥಳ ಪರಿಶೀಲನೆ ಮಾಡದೆ ಅಧಿಕಾರಿಗಳು ಕಚೇರಿಯಲ್ಲಿ ಕುಳಿತು ನಕ್ಷೆಯನ್ನು ತಯಾರಿಸುತ್ತಿದ್ದಾರೆ. ನೈಜ ಕೃಷಿಭೂಮಿಯನ್ನು, ಕಾಡಿನ ಭೂಮಿಯನ್ನು ಗುರುತಿಸುವ ಕೆಲಸ ಮಾಡದೆ ರೈತರಿಗೆ ತೊಂದರೆ ಕೊಡುವ ಕೆಲಸ ನಡೆಯುತ್ತಿದೆ ಎಂದು ಸಚಿವರು ದೂರಿದರು. ಈ ಅನಾಹುತಗಳಿಗೆ ಕಳೆದ 45–50 ವರ್ಷಗಳಿಂದ ಪರಿಹಾರ ಸಿಗದಿರುವುದು ದುರ್ದೈವದ ಸಂಗತಿ. ಈ ನಿಟ್ಟಿನಲ್ಲಿ ಕೊಡಗು ಜಿಲ್ಲೆ, ರೈತರು ಸಾಕಷ್ಟು ತೊಂದರೆ ಅನುಭವಿಸಿದ್ದಾರೆ ಎಂಬ ವಿಷಯ ನನಗೆ ಗೊತ್ತಿದೆ. ಇದಕ್ಕೆ ನ್ಯಾಯಸಮ್ಮತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ನಾವೆಲ್ಲರೂ ಪ್ರಯತ್ನ ಮಾಡೋಣ ಎಂದು ಅವರು ಹೇಳಿದರು.

ಈ ಸಮಸ್ಯೆಗೆ ಇಂದಲ್ಲ ನಾಳೆ ಪರಿಹಾರ ಸಿಕ್ಕೇ ಸಿಗುತ್ತದೆ ಎಂಬ ನಂಬಿಕೆ ನನಗಿದೆ. ನೂರಾರು ವರ್ಷಗಳಿಂದ ಇಲ್ಲಿಯೇ ಬದುಕಿ ಬಾಳುತ್ತಿರುವ, ಭೂಮಿಯನ್ನೇ ನಂಬಿರುವ ನಿಮ್ಮನ್ನು ಒಕ್ಕಲೆಬ್ಬಿಸಲು ಬಿಡುವುದಿಲ್ಲ ಎಂದು ಕುಮಾರಸ್ವಾಮಿ ಗುಡುಗಿದರು.

ವಿಧಾನಸಭೆಯ ಮಾಜಿ ಅಧ್ಯಕ್ಷ ಕೆ.ಜಿ. ಬೋಪಯ್ಯ, ಮಾಜಿ ಸಚಿವ ಸಾ.ರಾ. ಮಹೇಶ್, ಶಾಸಕ ಮಂಥರ್‌ಗೌಡ, ರೈತ ಮುಖಂಡ ಸುರೇಶ್, ಮಾಜಿ ಎಂಎಲ್ಸಿ ಮೇದಪ್ಪ, ಮಾಜಿ ಶಾಸಕರಾದ ಮಾದೇಗೌಡ, ಮಹದೇವ್ ಹಾಗೂ ಮುಖಂಡರಾದ ಸಂಕೇತ್ ಪೂವಯ್ಯ ಸೇರಿದಂತೆ ಅನೇಕ ಗಣ್ಯಮಾನ್ಯರು ಉಪಸಿತರಿದ್ದರು.

ವಿಧಾನಮಂಡಲ ಅಧಿವೇಶನದ ಅವಧಿ ಕಡಿತ: ವ್ಯಾಪಕ ಚರ್ಚೆ

ಬೆಂಗಳೂರು, ನ.22: ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಚಳಿಗಾಲದ ವಿಧಾನ ಮಂಡಲದ ಉಭಯ ಸದನಗಳ ಅಧಿವೇಶನ ನಡೆಸಲು ಒಂದೆಡೆ ಸಿದ್ಧತೆಗಳು ಭರದಿಂದ ಸಾಗಿದ್ದರೆ, ಮತ್ತೊಂದೆಡೆ ಅಧಿವೇಶನದ ಕಲಾಪಗಳು ನಿಗದಿತ ಪ್ರಮಾಣಕ್ಕಿಂತ ಕಡಿಮೆಯಾಗುತ್ತಿವೆ ಎಂಬ ಅಸಮಾಧಾನ ವ್ಯಕ್ತವಾಗುತ್ತಿದೆ.

ವಾರ್ಷಿಕ 60 ದಿನಗಳ ಕಾಲ ಅಧಿವೇಶನ ನಡೆಸಬೇಕು ಎಂಬ ಕಾಯ್ದೆಯನ್ನು ರಾಜ್ಯ ಸರ್ಕಾರ ಜಾರಿಗೆ ತಂದು ಅಧಿವೇಶನ ನಡೆಯಬೇಕಾದ ದಿನಾಂಕವನ್ನು ನಿಗದಿ ಮಾಡಿದೆ. ಆದರೆ, ಕಾಯ್ದೆಯ ಪ್ರಕಾರ ನಿಗದಿಪಡಿಸಿದ ದಿನಾಂಕಗಳಲ್ಲಿ ಹಾಗೂ ಪ್ರಮಾಣದಲ್ಲಿ ಅಧಿವೇಶನ ನಡೆಯುತ್ತಿಲ್ಲ ಎಂಬ ಬೇಸರ ಸಾಮಾನ್ಯವಾಗಿ ಕೇಳಿಬರುತ್ತಿದೆ. ಇತ್ತೀಚಿನ ವರ್ಷಗಳಲ್ಲಿ ವಾರ್ಷಿಕ 50 ದಿನಗಳ ಕಾಲ ಅಧಿವೇಶನದ ಕಲಾಪಗಳು ನಡೆಯುತ್ತಿಲ್ಲ.

ವಿಧಾನಸಭೆ ಸಚಿವಾಲಯದ ಮಾಹಿತಿ ಪ್ರಕಾರ, ಪ್ರಸಕ್ತ 2026ರಲ್ಲಿ 9 ದಿನಗಳ ಕಾಲ ಜಂಟಿ ಅಧಿವೇಶನ, 13 ದಿನಗಳ ಕಾಲ ಬಜೆಟ್ ಅಧಿವೇಶನ, 8 ದಿನಗಳ ಕಾಲ ಮಳೆಗಾಲದ ಅಧಿವೇಶನ ಹಾಗೂ 4ದಿನಗಳ ವಿಶೇಷ ಅಧಿವೇಶನ ನಡೆದಿದ್ದು, ಇದುವರೆಗೆ 34 ದಿನಗಳ ಅಧಿವೇಶನ ನಡೆಸಲಾಗಿದೆ. ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್ 2ರಿಂದ 9 ದಿನಗಳ ಕಾಲ ಚಳಿಗಾಲದ ಅಧಿವೇಶನ ನಡೆಸಲು ತೀರ್ಮಾನಿಸಲಾಗಿದೆ. ಅಂದರೆ ಈ ವರ್ಷ ಒಟ್ಟು 43 ದಿನಗಳ ಅಧಿವೇಶನ ನಡೆದಂತಾಗಲಿದೆ.

ಯಾವ ವರ್ಷದಲ್ಲಿ ಎಷ್ಟು ದಿನ ಕಲಾಪ...?

ಕಳೆದ 2000ರಲ್ಲಿ 67 ದಿನಗಳು, 2001ರಲ್ಲಿ 54 ದಿನಗಳು, 2002ರಲ್ಲಿ 63 ದಿನಗಳ ಕಾಲ ವಿಧಾನಸಭೆ ಅಧಿವೇಶನಗಳು ನಡೆದಿವೆ. ಆದರೆ, ಅನಂತರ ಇಂದಿನವರೆಗೂ 60 ದಿನಗಳ ಕಾಲ ವಿಧಾನ ಮಂಡಲದ ಅಧಿವೇಶನ ನಡೆದ ನಿದರ್ಶನವಿಲ್ಲ. 2003–44ದಿನಗಳು, 2004–23, 2005– 52, 2006–56, 2007–59, 2008–17, 2009–42, 2010 ಮತ್ತು 2011ರಲ್ಲಿ 31ದಿನಗಳು, 2012ರಲ್ಲಿ 57 ದಿನಗಳ ಕಾಲ ಅಧಿವೇಶನ ನಡೆಸಲಾಗಿದೆ. 2013– 47ದಿನಗಳು, 2014–53, 2015– 58, 2016–35, 2017– 40, 2018– 11, 2018–22, 2019– 18, 2020–31, 2021– 40, 2022–45 , 2023–39, 2024–29 ಮತ್ತು 2025ರಲ್ಲಿ 34 ದಿನಗಳ ಕಾಲ ಅಧಿವೇಶನ ನಡೆಸಲಾಗಿದೆ.

ಭ್ರೂಣಲಿಂಗ ಪತ್ತೆಗೆ ರಡಿಯಾಲಜಿಸ್ಟ್‌ಗಳೇ ಕಡಿವಾಣ ಹಾಕಬೇಕು: ಈಶ್ವರ ಖಂಡ್ರೆ ಕರೆ

ಬೆಂಗಳೂರು, ನ.22: ರೋಗಪತ್ತೆಯಲ್ಲಿ ರೇಡಿಯಾಲಜಿ ಮಹತ್ವದ ಪಾತ್ರ ವಹಿಸುತ್ತಿದ್ದು, ಗ್ರಾಮೀಣ ಭಾಗದ ಬಡಜನರಿಗೂ ಈ ಸೇವೆ ಲಭಿಸುವಂತೆ ಸಂಚಾರಿ ರೇಡಿಯಾಲಜಿ ಘಟಕಗಳನ್ನು ಅಭಿವೃದ್ಧಿ ಪಡಿಸಿ, ಕಾರ್ಯಾಚರಣ ಮಾಡಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಕರೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ಇಂಡಿಯನ್ ರೇಡಿಯಾಲಜಿಕಲ್ ಅಂಡ್ ಇಮೇಜಿಂಗ್ ಅಸೋಸಿಯೇಷನ್ – ಐಆರ್.ಐಎ ರಾಜ್ಯ ಘಟಕ ಭಾನುವಾರ ಆಯೋಜಿಸಿದ್ದ ವಿ ಕಿರಣೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಜನರು ಎಕ್ಸ್–ರೇ, ಅಲ್ಟ್ರಾಸೌಂಡ್ ಅಥವಾ ಸಿಟಿ ಸ್ಕ್ಯಾನ್ ಮಾಡಿಸಲು ತಾಲ್ಲೂಕು ಅಥವಾ ಜಿಲ್ಲಾ ಕೇಂದ್ರಗಳಿಗೆ ಬರುವ ಪರಿಸ್ಥಿತಿ ಇದೆ. ಈ ನಿಟ್ಟಿನಲ್ಲಿ ಐಆರ್.ಐಎ ಸಂಚಾರಿ ಘಟಕ ನಿರ್ವಹಣೆಗೆ ಮುಂದಾಗಬೇಕು ಎಂದರು.

ಇಂದು ಎಲ್ಲ ಕ್ಷೇತ್ರಕ್ಕೂ ಕೃತಕ ಬುದ್ಧಿಮತ್ತೆ ಕಾಲಿಟ್ಟಿದ್ದು, ತಂತ್ರಜ್ಞಾನ ಮತ್ತು ಕೃತಕ ಬುದ್ಧಿಮತ್ತೆ ಬೆಳೆದಂತೆ, ರೇಡಿಯಾಲಜಿ ಕ್ಷೇತ್ರವೂ ಬದಲಾಗುತ್ತಿದೆ ಮತ್ತು ನಿಖರತೆ ಪಡೆಯುತ್ತಿದೆ. ಇಂದಿನ ಯುಗಮಾನದ ಬದಲಾವಣೆಗೆ ಹೊಂದಿಕೊಳ್ಳುವ ಮತ್ತು ಆ ಸವಾಲುಗಳನ್ನು ಎದುರಿಸಲು ರೇಡಿಯಾಲಜಿಸ್ಟ್ ಗಳು ಸಜ್ಜಾಗಬೇಕು ಎಂದರು.



ಎಷ್ಟೇ ನಾಗರಿಕತೆ ಬೆಳೆದಿದ್ದರೂ, ಮೂಢ ನಂಬಿಕೆ ಮಾತ್ರ ಹೋಗಿಲ್ಲ. ಇಂದಿಗೂ ಹಣ್ಣು ಭ್ರೂಣಹತ್ಯೆ ನಿಂತಿಲ್ಲ. ಪ್ರಸವ ಪೂರ್ವದಲ್ಲಿ ಭ್ರೂಣಲಿಂಗ ಪತ್ತೆ ಮತ್ತು ಹತ್ಯೆ ಎರಡೂ ಅಪರಾಧ ಆದರೂ, ಕೆಲವೇ ಕೆಲವು ಧನದಾಹಿಗಳು ಇಂತಹ ಕೆಲಸ ಮಾಡಿ ಇಡೀ ಸಮುದಾಯಕ್ಕೆ ಕೆಟ್ಟ ಹೆಸರು ತರುತ್ತಾರೆ. ಐ.ಆರ್.ಐ.ಎ. ಇಂತಹ ರೇಡಿಯಾಲಜಿಸ್ಟ್‌ಗಳನ್ನು ನಿಯಂತ್ರಿಸಬೇಕು ಎಂದರು.

ರೇಡಿಯಾಲಜಿಗೆ ಕನ್ನಡದಲ್ಲಿ ವಿಕಿರಣಶಾಸ್ತ್ರ ಎಂದು ಹೇಳಲಾಗುತ್ತದೆ. ಆದರೆ ವಿಕಿರಣದಲ್ಲಿನ ಕನ್ನಡದ 'ವಿ' ಬದಲಿಗೆ ಇಂಗ್ಲಿಷ್ ಪದ 'ವಿ' ಹಾಕುವ ಮೂಲಕ ವಿಶಿಷ್ಟವಾಗಿ ಆಚರಿಸಲಾಗುತ್ತಿರುವ ಈ ವಿ ಕಿರಣೋತ್ಸವ ಸೃಜನಾತ್ಮಕವಾಗಿದೆ ಎಂದು ಈಶ್ವರ ಖಂಡ್ರೆ ಹೇಳಿದರು.

ರಾಜೀವಗಾಂಧೀ ವಿಶ್ವವಿದ್ಯಾಲಯದ ಉಪ ಕುಲಪತಿಗಳಾದ ಡಾ. ಭಗವಾನ್, ಡಾ. ಮುರಳಿ ಕೃಷ್ಣ, ಡಾ. ವೀರೇಶ್ ಹಂಚಲ್, ಡಾ. ಆರ್.ಕೆ. ಸರೋಜಾ, ಡಾ. ಸುಧೀರ್‌ಕುಮಾರ್ ಕಾಳೆ ಮೊದಲಾದವರು ಉಪಸ್ಥಿತರಿದ್ದರು.

ಮಹಿಳೆಯರು, ಮಕ್ಕಳ ಸೈಬರ್ ಸುರಕ್ಷತೆಗೆ ರಕ್ಷಣಾ ದಳ

ಬೆಂಗಳೂರು, ನ.22: ಡೀಪ್‌ಫೇಕ್, ಡೀಪ್ ಪೋರ್ನ್, ಆನ್‌ಲೈನ್ ಮಕ್ಕಳ ಲೈಂಗಿಕ ದೌರ್ಜನ್ಯ ವಿಷಯ ಸೇರಿದಂತೆ ಮಹಿಳೆಯರು ಮತ್ತು ಮಕ್ಕಳ ವಿರುದ್ಧ ಹೆಚ್ಚುತ್ತಿರುವ ಡಿಜಿಟಲ್ ಅಪರಾಧಗಳನ್ನು ನಿಯಂತ್ರಿಸಲು ಕರ್ನಾಟಕ ಸರ್ಕಾ

ವಾಯುಮಾಲಿನ್ಯ: ದೆಹಲಿಯನ್ನೂ ಹಿಂದಿಕ್ಕಿದ ಚೆನ್ನೈ

ದೇಶದಲ್ಲೇ ಅತ್ಯಂತ ಕಲುಷಿತ ನಗರವಾದ ಗುಮ್ಮಿಡಿಪೂಂಡಿ; ವಾಯು ಗುಣಮಟ್ಟ ಸೂಚ್ಯಂಕ 342ಕ್ಕೆ ಏರಿಕೆ

ಚೆನ್ನೈ,ನ.22: ಸಾಮಾನ್ಯವಾಗಿ ವಾಯು ಮಾಲಿನ್ಯ ಎಂದಾಕ್ಷಣ ರಾಷ್ಟ್ರ ರಾಜಧಾನಿ ದೆಹಲಿಯ ಹೆಸರು ಮೊದಲು ಕೇಳಿಬರುತ್ತದೆ. ಆದರೆ, ಶನಿವಾರ (ನವೆಂಬರ್ 21) ಚೆನ್ನೈನ ಉತ್ತರದ ಹೊರವಲಯದಲ್ಲಿರುವ ಕೈಗಾರಿಕಾ ಪಟ್ಟಣ ಗುಮ್ಮಿಡಿಪೂಂಡಿ ದೆಹಲಿಯನ್ನೂ ಮೀರಿಸಿ ದೇಶದಲ್ಲೇ ಅತ್ಯಂತ ಕಲುಷಿತ ನಗರವಾಗಿ ಹೊರಹೊಮ್ಮಿದೆ.

ಇಲ್ಲಿ ವಾಯು ಗುಣಮಟ್ಟ ಸೂಚ್ಯಂಕ (ಎಕ್ಯೂಐ) 342ಕ್ಕೆ ಏರಿಕೆಯಾಗಿದ್ದು, ದೆಹಲಿಯ 265ಕ್ಕಿಂತಲೂ ಅಧಿಕವಾಗಿದೆ. ಕಳೆದ ಮೂರು ದಿನಗಳಿಂದ ವಾಯು ಗುಣಮಟ್ಟ ನಿರಂತರವಾಗಿ ಹದಗೆಡುತ್ತಿದೆ. ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ (ಸಿಪಿಸಿಬಿ) ನಗರವಾರು ಅಂಕಿಅಂಶಗಳ ಪ್ರಕಾರ, ಗುಮ್ಮಿಡಿಪೂಂಡಿಯ ಎಕ್ಯೂಐ ನವೆಂಬರ್ 19ರಂದು 305ರಷ್ಟಿತ್ತು. ನವೆಂಬರ್ 20ರಂದು 321ಕ್ಕೆ ಏರಿಕೆಯಾಗಿದ್ದು, ನವೆಂಬರ್ 21ರಂದು 342 ತಲುಪಿದೆ.

ಮತ್ತೊಂದು ಪ್ರತ್ಯೇಕ ಡ್ಯಾಶ್‌ಬೋರ್ಡ್‌ನ ಮಾಹಿತಿಯಂತೆ ಶನಿವಾರ ಸಂಜೆ 5.05ರ ವೇಳೆಗೆ ಈ ಪ್ರಮಾಣ 346ಕ್ಕೆ ಏರಿಕೆಯಾಗಿತ್ತು.



ಪಟ್ಟಣದ ವಾಯು ಗುಣಮಟ್ಟ ಅತ್ಯಂತ ಕಳಪೆ ವಿಭಾಗಕ್ಕೆ ಸೇರಿದೆ.

ಚೆನ್ನೈನಲ್ಲಿ ಎಕ್ಯೂಐ 224 ದಾಖಲಾಗಿದೆ. ಗುಮ್ಮಿಡಿಪೂಂಡಿಯಲ್ಲಿ ಹೆಚ್ಚಿನ ಸಂಖ್ಯೆಯ ಕೈಗಾರಿಕೆಗಳಿರುವುದರಿಂದ ಕಾರ್ಖಾನೆಗಳಿಂದ ಹೊರಸೂಸುವ ಹೊಗೆ, ಇಂಧನ ದಹನ, ಸಾರಿಗೆ ಮತ್ತು ಕಚ್ಚಾವಸ್ತುಗಳ ನಿರ್ವಹಣೆ ಮಾಲಿನ್ಯಕ್ಕೆ ಕಾರಣವಾಗಿರಬಹುದು ಎಂದು ಹೇಳಲಾಗುತ್ತಿದೆ.

ರಸ್ತೆ ಧೂಳು, ನಿರ್ಮಾಣ ಚಟುವಟಿಕೆಗಳು ಮತ್ತು ಸ್ಥಳೀಯ ಮಾಲಿನ್ಯಕಾರಕಗಳೂ ಗಾಳಿಯಲ್ಲಿನ ಸೂಕ್ಷ್ಮ ಕಣಗಳ ಪ್ರಮಾಣ ಹೆಚ್ಚಿಸಲು ಕಾರಣವಾಗಿರಬಹುದು. ಆದರೆ ಪ್ರಸ್ತುತ ಮಾಲಿನ್ಯದ ಏರಿಕೆಗೆ ಯಾವ ಮೂಲ ಎಷ್ಟು ಕೊಡುಗೆ ನೀಡಿದೆ ಎಂಬುದನ್ನು ಖಚಿತಪಡಿಸಲು ಹೊರಸೂಸುವಿಕೆ ಮತ್ತು ಮಾಲಿನ್ಯದ ಮೂಲಗಳ ಕುರಿತ ಅಧ್ಯಯನ ಅಗತ್ಯ ಎಂದು ತಜ್ಞರು ತಿಳಿಸಿದ್ದಾರೆ.

ಗಾಳಿಯ ದಿಕ್ಕು ಮತ್ತು ವಾತಾವರಣದ ಸ್ಥಿತಿಗತಿಗಳೂ ಮಾಲಿನ್ಯ ಹೆಚ್ಚಳಕ್ಕೆ ಕಾರಣವಾಗಿರಬಹುದು. ಗಾಳಿಯ ಚಲನೆಯಿಂದ ಮಾಲಿನ್ಯಕಾರಕಗಳು ಒಂದೆಡೆ ಸಂಗ್ರಹವಾಗಬಹುದು ಅಥವಾ ಬೇರೆ ಪ್ರದೇಶಗಳಿಂದ ಕಲುಷಿತ ಗಾಳಿ ಈ ಭಾಗಕ್ಕೆ ಹರಿದುಬರಬಹುದು ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಗಾಳಿಯ ನಿಖರವಾದ ದಿಕ್ಕನ್ನು ಅವಲಂಬಿಸಿ ಕೈಗಾರಿಕಾ ಮತ್ತು ನಗರ ಪ್ರದೇಶಗಳಿಂದ ಮಾಲಿನ್ಯಕಾರಕಗಳು ಬೇರೆಡೆಗೆ ಹರಡಬಹುದು. ಗಾಳಿಯ ವೇಗ ಕಡಿಮೆಯಿದ್ದರೆ ಮತ್ತು ವಾತಾವರಣದಲ್ಲಿ ಲಂಬವಾಗಿ ಗಾಳಿ ಮಿಶ್ರಣವಾಗುವ ಪ್ರಕ್ರಿಯೆ ಸೀಮಿತಗೊಂಡರೆ ಮಾಲಿನ್ಯಕಾರಕಗಳು ಚದುರಿಹೋಗದೆ ಒಂದೇ ಪ್ರದೇಶದಲ್ಲಿ ಸಂಗ್ರಹವಾಗುತ್ತವೆ ಎಂದು ತಮಿಳುನಾಡು ಮಾಲಿನ್ಯ ನಿಯಂತ್ರಣ ಮಂಡಳಿಯ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ನೇಪಾಳದ ಮೂಲಕ ಸೇನಾ ವಿಮಾನ ಹಾರಾಟಕ್ಕೆ ಅನುಮತಿ ಕೋರಿಲ್ಲ: ಭಾರತ

ನವದೆಹಲಿ, ನ.22: ನೇಪಾಳದ ವಾಯುಪ್ರದೇಶದ ಮೂಲಕ ಪಶ್ಚಿಮ ಬಂಗಾಳದ ಬಾಗ್ಡೋಗ್ರಾ ವಿಮಾನ ನಿಲ್ದಾಣಕ್ಕೆ ಭಾರತೀಯ ಸೇನಾ ವಿಮಾನಗಳ ಸಂಚಾರಕ್ಕೆ ಅನುಮತಿ ನೀಡುವಂತೆ ಭಾರತ ಪ್ರಸ್ತಾವನೆ ಸಲ್ಲಿಸಿದೆ ಎಂಬ ಮಾಧ್ಯಮ ವರದಿಗಳನ್ನು ಭಾರತ ತಳ್ಳಿಹಾಕಿದೆ. ಸೇನಾ ವಿಮಾನಗಳ ಹಾರಾಟಕ್ಕೆ ಅನುಮತಿ ಕೋರಿ ಪ್ರಸ್ತಾವನೆ ಸಲ್ಲಿಸಿಲ್ಲ ಎಂದು ಸರ್ಕಾರಿ ಮೂಲಗಳು ಭಾನುವಾರ ಸ್ಪಷ್ಟಪಡಿಸಿವೆ.

ಭಾರತ ಮತ್ತು ನೇಪಾಳದ ನಡುವೆ ಹೆಚ್ಚುವರಿ ವಾಯುಮಾರ್ಗಗಳ ಬಳಕೆ ಹಾಗೂ ವಿಮಾನ ಸಂಪರ್ಕ ವಿಸ್ತರಣೆ ಕುರಿತು ಮಾತುಕತೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಈ ವಿಚಾರ ಮುನ್ನೆಲೆಗೆ ಬಂದಿತ್ತು. ಬಾಗ್ಡೋಗ್ರಾ ವಿಮಾನ ನಿಲ್ದಾಣಕ್ಕೆ ಸಂಪರ್ಕ ಕಲ್ಪಿಸುವ ಮಾರ್ಗದ ಮೂಲಕ ಭಾರತೀಯ ಸೇನಾ ವಿಮಾನಗಳ ಹಾರಾಟಕ್ಕೆ ಭಾರತ ಅನುಮತಿ ಕೇಳಿದೆ ಎಂದು ಕೆಲವು ಮಾಧ್ಯಮಗಳು ವರದಿ ಮಾಡಿದ್ದವು. ಆದರೆ ಈ ವರದಿಗಳು ಸತ್ಯಕ್ಕೆ ದೂರವಾಗಿವೆ. ಇಂತಹ ಯಾವುದೇ ಪ್ರಸ್ತಾವನೆ ಭಾರತದಿಂದ ಸಲ್ಲಿಕೆಯಾಗಿಲ್ಲ ಎಂದು ಮೂಲಗಳು ತಿಳಿಸಿವೆ.

ನೇಪಾಳವು ತನ್ನ ವಿಮಾನಗಳಿಗೆ ಭಾರತದ ವಾಯುಪ್ರದೇಶದ ಮೂಲಕ ಹೆಚ್ಚುವರಿ ಪ್ರವೇಶ ಮಾರ್ಗಗಳನ್ನು ಒದಗಿಸುವಂತೆ ಮನವಿ ಮಾಡಿದೆ.



ಭೈರಹವಾ ಮತ್ತು ಮಹೇಂದ್ರನಗರ ಮಾರ್ಗಗಳ ಮೂಲಕ ಅಂತರರಾಷ್ಟ್ರೀಯ ವಿಮಾನಗಳ ಸಂಚಾರಕ್ಕೆ ಅವಕಾಶ ಕಲ್ಪಿಸುವುದು ನೇಪಾಳದ ಪ್ರಮುಖ ಬೇಡಿಕೆಯಾಗಿದೆ. ಈ ಕುರಿತು ಉಭಯ ದೇಶಗಳ ನಡುವೆ ಮಾತುಕತೆ ನಡೆಯುತ್ತಿದೆ.

ಇದೇ ಸಂದರ್ಭದಲ್ಲಿ ಬಾಗ್ಡೋಗ್ರಾ ವಿಮಾನ ನಿಲ್ದಾಣದ ಮೂಲಕ ನಾಗರಿಕ ವಿಮಾನಗಳ ಸಂಚಾರಕ್ಕೆ ಸಂಬಂಧಿಸಿದ ವಾಯುಮಾರ್ಗದ ವಿಚಾರವೂ ಚರ್ಚೆಯಲ್ಲಿದೆ. ನಾಗರಿಕ ವಿಮಾನಗಳ ಸಂಚಾರ ಮತ್ತು ಸೇನಾ ವಿಮಾನಗಳ ಸಂಚಾರಕ್ಕೆ ಅನುಮತಿ ನೀಡುವ ವಿಚಾರಗಳನ್ನು ಪ್ರತ್ಯೇಕವಾಗಿ ಪರಿಗಣಿಸಲಾಗುತ್ತಿದೆ ಎಂಬ ವರದಿಗಳೂ ಪ್ರಕಟವಾಗಿದ್ದವು.

ಸದ್ಗುರು ಜಗ್ಗಿ ವಾಸುದೇವ್‌ಗೆ ಗ್ಲೋಬಲ್ ಪೀಸ್ ಆನರ್ಸ್ ಪ್ರಶಸ್ತಿ

ಮುಂಬಯಿ, ನ.22: ತಮ್ಮನ್ನು ತಾವು ನಿರ್ವಹಿಸಿಕೊಳ್ಳಲು ಸಾಧ್ಯವಾಗದಿರುವುದೇ ಒತ್ತಡಕ್ಕೆ ಮೂಲ ಕಾರಣ. ರಾಜಕಾರಣಿಗಳ ರೂಪಾಂತರಣೆ ಕೇವಲ ನಾಲ್ಕೇ ದಿನಗಳಲ್ಲಿ ಸಾಧ್ಯ ಎಂದು ಸದ್ಗುರು ಮಹಾರಾಷ್ಟ್ರದ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಅವರಿಗೆ ಹೇಳಿದರು.

ನಗರದಲ್ಲಿ ಭಾನುವಾರ ನಡೆದ ಸಮಾರಂಭದಲ್ಲಿ ಪ್ರಶಸ್ತಿ ಸ್ವೀಕರಿಸಿ ಗಣ್ಯರೊಂದಿಗೆ ಸಂವಾದ ನಡೆಸಿದ ಸದ್ಗುರುಗಳು, ಜನರು ಜೀವನವನ್ನು ಹೇಗೆ ಅನುಭವಿಸುತ್ತಾರೆ ಎಂಬುದು ಅಂತಿಮವಾಗಿ ಅವರು ತಮ್ಮನ್ನು ತಾವು ಹೇಗೆ ನಿರ್ವಹಿಸಿಕೊಳ್ಳುತ್ತಾರೆ ಎಂಬುದರ ಮೇಲೆ ಅವಲಂಬಿತವಾಗಿರುತ್ತದೆ ಎಂದು ಹೇಳಿದರು. ಇಂದಿನ ಯುವಜನತೆ ವೃತ್ತಿಜೀವನ, ಸಾಮಾಜಿಕ ಜಾಲತಾಣ ಮತ್ತು ನಿರೀಕ್ಷೆಗಳಿಂದ ಎದುರಿಸುತ್ತಿರುವ ಒತ್ತಡಗಳ ಕುರಿತ ಪ್ರಶ್ನೆಗೆ ಉತ್ತರಿಸಿದ ಸದ್ಗುರುಗಳು, "ನಾವು ಖಿನ್ನತೆಗೆ ಅಥವಾ ಒತ್ತಡಕ್ಕೆ ಒಳಗಾಗಲು ನಮ್ಮ ಸಾಮಾಜಿಕ ವಾತಾವರಣವಾಗಲಿ ಅಥವಾ ನಾವು ಮಾಡುವ ಕೆಲಸದ ಸ್ವರೂಪವಾಗಲಿ ಕಾರಣವಲ್ಲ. ನಮ್ಮದೇ ವ್ಯವಸ್ಥೆಯನ್ನು (ದೇಹ ಮತ್ತು ಮನಸ್ಸು) ಸರಿಯಾಗಿ ನಿರ್ವಹಿಸಿಕೊಳ್ಳಲು ನಮಗೆ ಸಾಧ್ಯವಾಗದಿರುವುದೇ ಇದಕ್ಕೆ ಕಾರಣ" ಎಂದು ವಿಶ್ಲೇಷಿಸಿದರು.

ವ್ಯಕ್ತಿಗಳು ತಮ್ಮ ದೇಹ, ಆಲೋಚನೆಗಳು, ಭಾವನೆಗಳು ಮತ್ತು ಶಕ್ತಿಯನ್ನು ನಿರ್ವಹಿಸಲು ವಿಫಲವಾದಾಗ ಒತ್ತಡ, ಆತಂಕ ಹಾಗೂ ದುಃಖ ಹೇಗೆ ಉಂಟಾಗುತ್ತದೆ ಎಂಬುದನ್ನು ವಿವರಿಸಿದ ಅವರು, "ನಾವು ಒತ್ತಡ, ಆತಂಕ, ಸಂಕಟ ಅಥವಾ ಇನ್ಯಾವುದೇ ಹೆಸರಿನಿಂದ ಕರೆಯುವ ಸ್ಥಿತಿಯು ಮೂಲತಃ ನಮ್ಮದೇ ಬುದ್ಧಿವಂತಿಕೆ ನಮ್ಮ ವಿರುದ್ಧವೇ ತಿರುಗಿ ಬಿದ್ದಿರುವುದರ ಸಂಕೇತವಾಗಿದೆ. ಈ ಬುದ್ಧಿವಂತಿಕೆಯನ್ನು ನಿಮಗೆ ಪೂರಕವಾಗಿ ಕೆಲಸ ಮಾಡುವಂತೆ ಹೇಗೆ ಹಿಡಿದಿಟ್ಟುಕೊಳ್ಳಬೇಕು ಎಂಬುದು ನಿಮಗೆ ತಿಳಿದಿಲ್ಲ; ಹೀಗಾಗಿ ಅದು ನಿಮ್ಮ ವಿರುದ್ಧವೇ ಕೆಲಸ ಮಾಡುತ್ತಿದೆ" ಎಂದರು. ರಾಜಕಾರಣಿಗಳು ಉತ್ತಮ ನಾಯಕರಾಗಿ ಮತ್ತು ಉತ್ತಮ ಮನುಷ್ಯರಾಗಿ ರೂಪುಗೊಳ್ಳಲು ನೀವು ನೀಡುವ ಒಂದು ಸಲಹೆ ಏನು ಎಂದು ಸಿಎಂ ಫಡ್ನವಿಸ್ ಕೇಳಿದಾಗ, ಸದ್ಗುರು ಅವರು ಹಾಸ್ಯಮಯ ಧಾಟಿಯಲ್ಲಿ ಉತ್ತರಿಸಿದರು. ರಾಜಕಾರಣಿಗಳು ಕೆಲವು ದಿನಗಳ ಕಾಲ ಆಶ್ರಮದಲ್ಲಿ ಬಂದು ಉಳಿಯಬೇಕು, ಆಗ ಅವರಲ್ಲಿ ಖಂಡಿತ ಬದಲಾವಣೆಯಾಗುತ್ತದೆ ಎಂದು ಸದ್ಗುರುಗಳು ಹೇಳುತ್ತಿದ್ದಂತೆ ಸಭಾಂಗಣದಲ್ಲಿ ನಗೆಯ ಅಲೆ ಎದ್ದಿತು. ಮಾತು ಮುಂದುವರಿಸಿದ ಅವರು, "ಕೇವಲ ಒಂದು ಸಲಹೆಯ ಮೂಲಕ ಎಲ್ಲಾ ರಾಜಕಾರಣಿಗಳನ್ನು ಬದಲಾಯಿಸಲು ಸಾಧ್ಯವೇ... ಖಂಡಿತ ಇಲ್ಲ. ಆದರೆ ನೀವು



ನನಗೆ ನಾಲ್ಕು ದಿನಗಳ ಕಾಲಾವಕಾಶ ನೀಡಿದರೆ, ಅವರು ಯಾರೇ ಆಗಿರಲಿ ನಾನು ಮಹತ್ವದ ಬದಲಾವಣೆಯನ್ನು ತರಬಲ್ಲೆ. ನಿಮ್ಮೆಲ್ಲಾ ರಾಜಕಾರಣಿಗಳನ್ನು ನಾಲ್ಕೈದು ದಿನಗಳ ಮಟ್ಟಿಗೆ ನನ್ನ ಬಳಿ ಕಳುಹಿಸಿಕೊಡಿ, ಅವರಲ್ಲಿ ಗಮನಾರ್ಹ ಬದಲಾವಣೆ ತರುವ ಜವಾಬ್ದಾರಿ ನನ್ನದು" ಎಂದು ಹೇಳಿದರು. ಈ ಮಾತು ನೆರೆದಿದ್ದವರಲ್ಲಿ ಮತ್ತೊಮ್ಮೆ ನಗೆ ಉಕ್ಕಿಸಿತು.

ಜೀವನದ ಸವಾಲುಗಳನ್ನು ಎದುರಿಸಲು ಮತ್ತು ಶಾಂತಿಯುತ ಸಮಾಜವನ್ನು ನಿರ್ಮಿಸಲು ವೈಯಕ್ತಿಕ ಪರಿವರ್ತನೆ ಹಾಗೂ ಆಂತರಿಕ ಯೋಗಕ್ಷೇಮ ಹೇಗೆ ಅಡಿಪಾಯವಾಗುತ್ತವೆ ಎಂಬುದರ ಕುರಿತು ಈ ಸಂವಾದವು ಬೆಳಕು ಚೆಲ್ಲಿತು. 'ದಿವ್ಯಾಜ್ ಫೌಂಡೇಶನ್' ಆಯೋಜಿಸುವ 'ಗ್ಲೋಬಲ್ ಪೀಸ್ ಆನರ್ಸ್' ಒಂದು ವಾರ್ಷಿಕ ಉಪಕ್ರಮವಾಗಿದ್ದು, ಶಾಂತಿ, ಮಾನವೀಯತೆ ಮತ್ತು ಸಮಾಜಕ್ಕೆ ಗಣನೀಯ ಕೊಡುಗೆ ನೀಡಿದ ಸಾಧಕರನ್ನು ಗುರುತಿಸಿ ಗೌರವಿಸುತ್ತದೆ.

ಅಲ್ಲದೆ, ಈ ಕಾರ್ಯಕ್ರಮವು ಭಯೋತ್ಪಾದನೆಗೆ ಬಲಿಯಾದವರಿಗೆ ಶ್ರದ್ಧಾಂಜಲಿ ಸಲ್ಲಿಸುವುದರ ಜೊತೆಗೆ, ಶಾಂತಿ ಮತ್ತು ಮಾನವೀಯತೆಗಾಗಿ ನಿಲ್ಲುವವರ ಧೈರ್ಯ ಹಾಗೂ ಸ್ಥೈರ್ಯವನ್ನು ಸನ್ಮಾನಿಸುತ್ತದೆ.

ಸಿಎಂ ದೇವೇಂದ್ರ ಫಡ್ನವಿಸ್, ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ ಹಾಗೂ ಸಾಂಸ್ಕೃತಿಕ ವ್ಯವಹಾರಗಳ ಸಚಿವ ಆಶಿಶ್ ಶೇಲಾರ್ ಅವರಿಂದ ಸದ್ಗುರು ಅವರು 2026ನೇ ಸಾಲಿನ 'ಗ್ಲೋಬಲ್ ಪೀಸ್ ಆನರ್ಸ್' ಪ್ರಶಸ್ತಿಯನ್ನು ಸ್ವೀಕರಿಸಿದರು.

ವಿಷಪ್ರಾಶನ ಶಂಕೆ: ಬಂಗಾಳದ ಬಿಜೆಪಿ ಶಾಸಕಿ ರೇಖಾ ಪಾತ್ರ ಸ್ಥಿತಿ ಗಂಭೀರ

ಕೋಲ್ಕತ್ತಾ, ನ.22: ಶಂಕಿತ ವಿಷಪ್ರಾಶನದ ನಂತರ ಪಶ್ಚಿಮ ಬಂಗಾಳದ ಹಿಂಗಲ್‌ಗಂಜ್ ಬಿಜೆಪಿ ಶಾಸಕಿ ರೇಖಾ ಪಾತ್ರಾ ಅವರ ಆರೋಗ್ಯ ಸ್ಥಿತಿ ಗಂಭೀರವಾಗಿದ್ದು ಕೋಲ್ಕತ್ತಾದ ಖಾಸಗಿ ಆಸ್ಪತ್ರೆಗೆ ದಾಖಿಲಿಸಲಾಗಿದೆ. ಪಕ್ಷದ ನಾಯಕಿ ಅರ್ಚನಾ ದಾಸ್ ಮಜುಂದಾರ್ ಈ ಬಗ್ಗೆ ಮಾಹಿತಿ ನೀಡಿದ್ದಾರೆ.

ಶನಿವಾರ ರಾತ್ರಿ ಉತ್ತರ 24 ಪರಗಣ ಜಿಲ್ಲೆಯ ಹಿಂಗಲ್‌ಗಂಜ್‌ನಲ್ಲಿರುವ ತಮ್ಮ ಮನೆಯಲ್ಲಿ ಪಾತ್ರಾ ಅಸ್ವಸ್ಥರಾಗಿದ್ದರು. ಆರಂಭದಲ್ಲಿ ಸ್ಥಳೀಯ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ಅವರ ಸ್ಥಿತಿ ಹದಗೆಟ್ಟಿತು. ಇದರಿಂದಾಗಿ ಅವರನ್ನು ಬಸಿರ್ಹತ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ವರ್ಗಾಯಿಸಲಾಯಿತು. ನಂತರವೂ ಅವರ ಆರೋಗ್ಯದಲ್ಲಿ ಯಾವುದೇ ಸುಧಾರಣೆ ಕಂಡುಬರಲಿಲ್ಲವಾದ್ದರಿಂದ ಅವರನ್ನು ಕೋಲ್ಕತ್ತಾ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು.

ಆಸ್ಪತ್ರೆಯಲ್ಲಿ ತಂಗಿರುವ ಅರ್ಚನಾ ದಾಸ್ ಮಜುಂದಾರ್ ಮಾಧ್ಯಮಗಳಿಗೆ ಮಾಹಿತಿ ನೀಡಿ, ಪಾತ್ರಾ ಅವರ ಆರೋಗ್ಯ ಸ್ಥಿರವಾಗಿದ್ದು, ತೀವ್ರ ಚಿಕಿತ್ಸಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಪ್ರಸ್ತುತ ವೆಂಟಿಲೇಟರ್ ಬೆಂಬಲದಲ್ಲಿದ್ದಾರೆ ದೇಹದಲ್ಲಿ ವಿಷದ



ಪರಿಣಾಮಗಳ ಉಪಸ್ಥಿತಿ ಇದೆ. ರಾಜ್ಯ ಆರೋಗ್ಯ ಸಚಿವ ಶರದ್ವತ್ ಮುಖರ್ಜಿ ಅವರು ಆಸ್ಪತ್ರೆಗೆ ಭೇಟಿ ರೇಖಾ ಪಾತ್ರ ಅವರ ಆರೋಗ್ಯ ವಿಚಾರಿಸಿದರು.

ಬಂಧಿತ ತೃಣಮೂಲ ಕಾಂಗ್ರೆಸ್ ನಾಯಕ ಶೇಖ್ ಶಹಜಹಾನ್ ಮತ್ತು ಅವರ ಸಹಚರರ ವಿರುದ್ಧ ಉತ್ತರ 24 ಪರಗಣದಲ್ಲಿ ನಡೆದ ಸಾರ್ವಜನಿಕ ಚಳವಳಿಯಲ್ಲಿ ರೇಖಾ ಪಾತ್ರ ಪ್ರಮುಖ ಪಾತ್ರ ವಹಿಸಿದರು. 2024ರ ಲೋಕಸಭಾ ಚುನಾವಣೆಯಲ್ಲಿ ಬಸಿರ್ಹತ್ ನಿಂದ ವಿಫಲ ಪ್ರಯತ್ನದ ನಂತರ, ಈ ವರ್ಷದ ಏಪ್ರಿಲ್ ನಲ್ಲಿ ಹಿಂಗಲ್ ಗಂಜ್ ವಿಧಾನಸಭಾ ಸ್ಥಾನವನ್ನು ಪಡೆದುಕೊಂಡು ಬಿಜೆಪಿ ಶಾಸಕಿಯಾಗಿದ್ದರು.

ಬಂಟ್ಸ್ ಸಂಘ ಅಹಮದಾಬಾದ್ ಸಂಭ್ರಮದ ತ್ರಯೋದಶ ತ್ರಿಮಂಶೋತ್ಸವಕ್ಕೆ ಚಾಲನೆ

ಅಹಮದಾಬಾದ್, ನ.22: ಗುಜರಾತ್ ರಾಜ್ಯದಲ್ಲಿನ ಬಂಟ್ಸ್ ಸಂಘ ಸಂಸ್ಥೆಯು ಅಹಮದಾಬಾದ್ (ರಿ.) ಗುಜರಾತ್ ಸಂಸ್ಥೆಯು ತನ್ನ ಮೂವತ್ತ ಮೂರನೇ ಸೇವಾ ಸಂಭ್ರಮವನ್ನಾಗಿಸಿ ತ್ರಯೋದಶ ತ್ರಿಮಂಶೋತ್ಸವ (33ನೇ ವಾರ್ಷಿಕೋತ್ಸವ) ಶಾಹೀಬಾಗ್‌ನಲ್ಲಿರುವ ಸರ್ದಾರ್ ಪಟೇಲ್ ಸಭಾಂಗಣದಲ್ಲಿ ಇಂದಿಲ್ಲಿ ಭಾನುವಾರ ಸಂಜೆ ಬಿಎಸ್ಎ ಅಧ್ಯಕ್ಷ ನಿತೇಶ್ ಎಸ್.ಶೆಟ್ಟಿ ಶಿರ್ವಾಕೋಡು ಅಧ್ಯಕ್ಷತೆಯಲ್ಲಿ ಸಂಭ್ರಮಿಸಿದ್ದು, ಮುಖ್ಯ ಅತಿಥಿಯಾಗಿದ್ದ ರಾಯಲ್ ಸಿಂಫನಿ ಹೋಟೆಲ್ಸ್ ಪ್ರೈವೇಟ್ ಲಿಮಿಟೆಡ್‌ನ ಪ್ರವರ್ತಕ, ಪುಣೆ ಬಂಟ್ಸ್ ಸಂಘದ ಅಧ್ಯಕ್ಷ ಕೆಂಜಾರುಗುತ್ತು ಅಜಿತ್ ಹೆಗ್ಡೆ ದೀಪಹಚ್ಚಿ ಸಮಾರಂಭಮಕ್ಕೆ ಚಾಲನೆಯನ್ನೀಡಿದರು.

ವಾರ್ಷಿಕೋತ್ಸವ ಸಮಾರಂಭದಲ್ಲಿ ಲೈಫ್‌ಸ್ಟೈಲ್ ಡಿಸಾರ್ಡರ್ ಕನ್ಸಲ್ಟೆಂಟ್‌ನ ಮುಖ್ಯಸ್ಥ, ಆಯುರ್ವೇದ ವೈದ್ಯ ಡಾ. ಚಂದ್ರಮೋಹನ್ ಶೆಟ್ಟಿ ಹಾಗೂ ಪ್ರಶಸ್ತಿ ಪುರಸ್ಕೃತ ರಂಗಕರ್ಮಿ, ಕಲಾ ಸಂಗಮದ ನಿರ್ದೇಶಕ ವಿಜಯಕುಮಾರ್ ಕೊಡಿಯಾಲ್‌ಬೈಲ್ ವಿಶೇಷ ಆಹ್ವಾನಿತರಾಗಿ, ಅಂಕೇಶ್ವರ ತುಳು ಸಂಘದ ಅಧ್ಯಕ್ಷ ಶಂಕರ ಶೆಟ್ಟಿ ಸೂರತ್, ರಾಧಾಕೃಷ್ಣ ಗ್ರೂಪ್ ಆಫ್ ಹೋಟೆಲ್ಸ್‌ನ ವ್ಯವಸ್ಥಾಪಕ ನಿರ್ದೇಶಕ, ಕರ್ನಾಟಕ ಸಮಾಜದ ಅಧ್ಯಕ್ಷ ರಾಧಾಕೃಷ್ಣ ಟಿ.ಶೆಟ್ಟಿ ಮತ್ತು ತುಳುನಾಡ ಐಸಿರಿ ವಾಪಿ ಅಧ್ಯಕ್ಷ ನವೀನ್ ಶೆಟ್ಟಿ ಹೇರೂರು ಗೌರವಾನ್ವಿತ ಅತಿಥಿಗಳಾಗಿ ಹಾಗೂ ಬಿಎಸ್ಎ ಕಾರ್ಯದರ್ಶಿ ಕಿರಣ್ ಶೆಟ್ಟಿ ವಾಮಂಜೂರು, ಕೋಶಾಧಿಕಾರಿ ಪ್ರಶಾಂತ್ ಕುಮಾರ್ ನ್ಯಾಕ್, ಸಂಘಟನಾ ಕಾರ್ಯದರ್ಶಿ ಪ್ರವೀಣ್ ಶೆಟ್ಟಿ ವೇದಿಕೆಯನ್ನಲಂಕರಿಸಿದ್ದರು.

ಈ ಸಂದರ್ಭದಲ್ಲಿ ಸಂಘದ ಶಾಶ್ವತ



ಆಹ್ವಾನಿತರುಗಳಾದ ಅಜೆಕಾರು ಸಂಜೀವ ಶೆಟ್ಟಿ (ಬಿಎಸ್ಎ ಸಂಘದ ಸ್ಥಾಪಕ ಅಧ್ಯಕ್ಷ), ಮಾಜಿ ಅಧ್ಯಕ್ಷರಾದ ದೇವದತ್ತ ಎನ್.ಶೆಟ್ಟಿ, ಸುಧಾಕರ ಎಸ್.ಶೆಟ್ಟಿ, ಅಪ್ಪು ಪಿ.ಶೆಟ್ಟಿ, ಸಂಘದ ಶಾಶ್ವತ ವಿಶೇಷ ಆಹ್ವಾನಿತರಾದ ಪುರುಷೋತ್ತಮ ಶೆಟ್ಟಿ, ಜಗನ್ನಾಥ ಪಿ.ಶೆಟ್ಟಿ, ಆಶೀಶ್ ಶೆಟ್ಟಿ, ಹರೀಶ್ ಶೆಟ್ಟಿ, ಸಂಘದ ಪ್ರಸಸ್ತ ಉಪಾಧ್ಯಕ್ಷೆ ಶಕುಂತಳಾ ಐ.ಶೆಟ್ಟಿ, ಜೊತೆ ಕಾರ್ಯದರ್ಶಿ ಸಂತೋಷ್ ಶೆಟ್ಟಿ, ಜೊತೆ ಕೋಶಾಧಿಕಾರಿ ದೇವಿಪ್ರಸಾದ್ ಡಿ.ಶೆಟ್ಟಿ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರಾದ ಸುರೇಶ್ ಎನ್.ಶೆಟ್ಟಿ, ಅಪ್ಪು ಎ.ಶೆಟ್ಟಿ, ಚಂದ್ರಶೇಖರ್ ಕೆ.ಶೆಟ್ಟಿ, ವಿವೇಕ್ ಶೆಟ್ಟಿ, ಸರೋಜಾ ಎಸ್.ಶೆಟ್ಟಿ, ಪ್ರಕಾಶ್ ಬಿ.ಶೆಟ್ಟಿ, ಅಶೋಕ್ ಎಲ್.ಶೆಟ್ಟಿ, ಸುರೇಶ್ ಎಸ್.ಶೆಟ್ಟಿ, ಪ್ರಶಾಂತ್ ಎಸ್.ಶೆಟ್ಟಿ, ಸುದರ್ಶನ್ ಡಿ.ಶೆಟ್ಟಿ, ದಿನೇಶ್ ಎಸ್.ಶೆಟ್ಟಿ, ಮನೋಜ್ ಎಸ್.ಶೆಟ್ಟಿ ಸೇರಿದಂತೆ ಸದಸ್ಯರನೇಕರು, ನಮ್ಮ ಟಿವಿ ಮಾಧ್ಯಮದ ನಿರೂಪಕ ನವೀನ್‌ಕುಮಾರ್ ಶೆಟ್ಟಿ ಎಡ್ಮೆಮಾರ್ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

ಸಾಂಸ

1,712 ಬಾಲ್ಯವಿವಾಹ ಪ್ರಕರಣಗಳು ವಿಚಾರಣೆಗೆ ಬಾಕಿ: ನ್ಯಾ. ಸುನೀಲ್‌ದತ್ ಯಾದವ್ ಅಸಮಾಧಾನ

ಬೆಂಗಳೂರು, ನ.22: ಬಾಲ್ಯವಿವಾಹ ತಡೆಗೆ ರಾಜ್ಯ ಸರ್ಕಾರ ಮತ್ತು ವಿವಿಧ ಇಲಾಖೆಗಳು ಹಲವು ಕ್ರಮಗಳನ್ನು ಕೈಗೊಳ್ಳುತ್ತಿವೆ. ಆದರೂ, ರಾಜ್ಯದ ವಿವಿಧ ನ್ಯಾಯಾಲಯಗಳಲ್ಲಿ 1,712 ಬಾಲ್ಯವಿವಾಹ ಪ್ರಕರಣಗಳು ವಿಚಾರಣೆಗಾಗಿ ಬಾಕಿ ಉಳಿದಿವೆ ಎಂದು ಹೈಕೋರ್ಟ್ ನ್ಯಾಯಮೂರ್ತಿ ಎಸ್. ಸುನಿಲ್ ದತ್ ಯಾದವ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕರ್ನಾಟಕ ನ್ಯಾಯಾಂಗ ಅಕಾಡೆಮಿಯಲ್ಲಿ ಬಾಲ್ಯವಿವಾಹ ನಿರ್ಮೂಲನೆ ಮತ್ತು ಮಕ್ಕಳ ಮೇಲಿನ ಲೈಂಗಿಕ ಶೋಷಣೆ ಹಾಗೂ ದುರ್ಬಳಕೆ ತಡೆ ಕುರಿತು ರಾಜ್ಯಮಟ್ಟದ ಸಮಾಲೋಚನಾ ಸಭೆಯಲ್ಲಿ ಬಾಲ್ಯವಿವಾಹದ ಹಿಂದಿನ ಕಾರಣಗಳು ಮತ್ತು ಮುನ್ಸೂಚನೆಗಳ ಬಗ್ಗೆ ವಿವರಿಸಿದ ನ್ಯಾಯಮೂರ್ತಿಗಳು, ಬಾಲ್ಯವಿವಾಹ ಎನ್ನುವುದು ಏಕಾಏಕಿ ನಡೆಯುವ ಘಟನೆಯಲ್ಲ, ಬದಲಾಗಿ ಅದಕ್ಕೂ ಮುನ್ನ ಹಲವು ಸೂಚನೆಗಳು ಕಾಣಿಸಿಕೊಳ್ಳುತ್ತವೆ ಎಂದರು.



ಮಕ್ಕಳು ಶಾಲೆ ತೊರೆಯುವುದು, ಕುಟುಂಬಗಳ ಆರ್ಥಿಕ ಸಂಕಷ್ಟ ಹಾಗೂ ಮಕ್ಕಳ ಶಿಕ್ಷಣಕ್ಕಿಂತ ಸಾಮಾಜಿಕ ನಿರೀಕ್ಷೆಗಳಿಗೆ ಹೆಚ್ಚಿನ ಆದ್ಯತೆ ನೀಡುವುದು ಇಂತಹ ಘಟನೆಗಳಿಗೆ ಮುಖ್ಯ ಕಾರಣವಾಗುತ್ತಿವೆ. ಇಂತಹ ಮುನ್ಸೂಚನೆಗಳನ್ನು ಆರಂಭದಲ್ಲೇ ಗುರುತಿಸಿ ಸೂಕ್ತ ರೀತಿಯಲ್ಲಿ ಮಧ್ಯಪ್ರವೇಶಿಸಿದರೆ ಬಾಲ್ಯವಿವಾಹವನ್ನು ಪರಿಣಾಮಕಾರಿಯಾಗಿ ತಡೆಯಲು ಸಾಧ್ಯವಿದೆ ಎಂದು ಅಭಿಪ್ರಾಯಪಟ್ಟರು.

ಸಭೆಯಲ್ಲಿ ಭಾಗವಹಿಸಿದ್ದ ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿ, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯ ನಿರ್ವಾಹಕ ಅಧ್ಯಕ್ಷೆ ಅನು ಶಿವರಾಮನ್ ಅವರು, ಕೇವಲ ಕಾನೂನು ಜಾರಿಗೊಳಿಸುವುದರಿಂದ ಈ ಸಾಮಾಜಿಕ ಪಿಡುಗನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯವಿಲ್ಲ ಎಂದು ತಿಳಿಸಿದರು.

ವಿಶೇಷವಾಗಿ, ಗ್ರಾಮೀಣ ಮಟ್ಟದಲ್ಲಿ ಬಾಲ್ಯವಿವಾಹದ ವಿರುದ್ಧ ನಿರಂತರ ಜನಜಾಗೃತಿ ಮೂಡಿಸುವುದು ಮತ್ತು ಸಮುದಾಯದ ಸಹಭಾಗಿತ್ವ ಪಡೆಯುವುದು ಅತ್ಯಂತ ಮುಖ್ಯವಾಗಿದೆ. ತಲೆಮಾರುಗಳಿಂದ ನಡೆದುಕೊಂಡು ಬಂದ ಸಂಪ್ರದಾಯ ಎಂಬ ನೆಪದಲ್ಲಿ ಬಾಲ್ಯವಿವಾಹವನ್ನು ಸಮರ್ಥಿಸಿಕೊಳ್ಳುವ ಮನೋಭಾವ ಬದಲಾಗಬೇಕು ಎಂದು ಒತ್ತಿಹೇಳಿದರು.

ಇದರ ಜೊತೆಗೆ, ಇತ್ತೀಚಿನ ದಿನಗಳಲ್ಲಿ ಮಕ್ಕಳ ಮೇಲಿನ ಆನ್‌ಲೈನ್ ಲೈಂಗಿಕ ಶೋಷಣೆಯ ಅಪಾಯವೂ ಹೆಚ್ಚುತ್ತಿರುವ ಬಗ್ಗೆ ಸಭೆಯಲ್ಲಿ ಗಂಭೀರ ಕಳವಳ ವ್ಯಕ್ತವಾಯಿತು. ಮಕ್ಕಳ ಸುರಕ್ಷತೆ, ಶಿಕ್ಷಣ ಮತ್ತು ಹಕ್ಕುಗಳ ರಕ್ಷಣೆಗಾಗಿ ವಿವಿಧ ಸರ್ಕಾರಿ ಇಲಾಖೆಗಳು, ಕಾನೂನು ಸೇವಾ ಸಂಸ್ಥೆಗಳು ಹಾಗೂ ಸಾಮಾಜಿಕ ಸಂಘಟನೆಗಳು ಪರಸ್ಪರ ಸಮನ್ವಯದಿಂದ ಒಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದು ನ್ಯಾಯಮೂರ್ತಿಗಳು ಕರೆ ನೀಡಿದರು.



ಲಕ್ಷದೀಪೋತ್ಸವದ ಮುನ್ನಾದಿನವಾದ ಭಾನುವಾರ ಉಡುಪಿಯ ಶ್ರೀಕೃಷ್ಣ ಮಠದಲ್ಲಿ ನಡೆಯುತ್ತಿರುವ ಉತ್ಸವದ ಅಂಗವಾಗಿ ಶ್ರೀಕೃಷ್ಣ ಮತ್ತು ಮುಖ್ಯಪ್ರಾಣ ದೇವರ ಉತ್ಸವ ಮೂರ್ತಿಗಳನ್ನು ಸುಂದರವಾಗಿ ಅಲಂಕರಿಸಿದ ರಥದಲ್ಲಿ ಪ್ರತಿಷ್ಠಾಪಿಸಲಾಯಿತು. ಈ ಸಂದರ್ಭದಲ್ಲಿ ಅಸಂಖ್ಯ ಭಕ್ತರು ಉಡುಪಿಯ ರಥಬೀದಿಯಲ್ಲಿ ಜಮಾಯಿಸಿದ್ದರು.

ಮುಖ್ಯಮಂತ್ರಿಗೆ ಮಾಜಿ ಸಂಸದೆ ಸುಮಲತಾ ಅಂಬರೀಶ್ ಪತ್ರ

ಮಾನವೀಯತೆ ದೃಷ್ಟಿಯಿಂದ ಆಶಾ ಕಾರ್ಯಕರ್ತೆಯರ ಬೇಡಿಕೆ ಪರಿಗಣಿಸಿ

ಬೆಂಗಳೂರು, ನ.22: ಮಾಸಿಕ ಗೌರವಧನ ಹೆಚ್ಚಳಕ್ಕೆ ಆಗ್ರಹಿಸಿ ಬೆಂಗಳೂರಿನಲ್ಲಿ ಹಗಲು–ರಾತ್ರಿ ಪ್ರತಿಭಟನೆ ನಡೆಸುತ್ತಿರುವ ಆಶಾ ಕಾರ್ಯಕರ್ತೆಯರ ಬೇಡಿಕೆಯನ್ನು ಮಾನವೀಯ ದೃಷ್ಟಿಕೋನದಿಂದ ಪರಿಗಣಿಸಿ, ಶೀಘ್ರವೇ ನ್ಯಾಯ ಒದಗಿಸುವಂತೆ ಮಂಡ್ಯದ ಮಾಜಿ ಸಂಸದೆ ಸುಮಲತಾ ಅಂಬರೀಶ್ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದು ಮನವಿ ಮಾಡಿದ್ದಾರೆ.

ಆಶಾ ಕಾರ್ಯಕರ್ತೆಯರು ನಡೆಸುತ್ತಿರುವ ಹೋರಾಟದ ಕುರಿತು ಮುಖ್ಯಮಂತ್ರಿಗಳ ತುರ್ತು ಗಮನ ಸೆಳೆದಿರುವ ಸುಮಲತಾ ಅವರು, "ಹಲವು ದಿನಗಳಿಂದ ಚಳಿಯನ್ನೂ ಲೆಕ್ಕಿಸದೆ, ಬಯಲಿನಲ್ಲಿಯೇ ಹಗಲು–ರಾತ್ರಿ ಪ್ರತಿಭಟನೆ ನಡೆಸುತ್ತಿರುವ ಈ ಮಹಿಳೆಯರ ಪರಿಸ್ಥಿತಿ ನಿಜಕ್ಕೂ ಕಳವಳಕಾರಿಯಾಗಿದೆ" ಎಂದು ಪತ್ರದಲ್ಲಿ ಕಳವಳ ವ್ಯಕ್ತಪಡಿಸಿದ್ದಾರೆ.



ಮುಖ್ಯಮಂತಿಯವರು ಈ ವಿಚಾರದಲ್ಲಿ ವೈಯಕ್ತಿಕವಾಗಿ ಮಧ್ಯಪ್ರವೇಶಿಸಿ, ಆಶಾ ಕಾರ್ಯಕರ್ತೆಯರ ಪ್ರತಿನಿಧಿಗಳೊಂದಿಗೆ ಮಾತುಕತೆ ನಡೆಸಬೇಕು ಎಂದು ಅವರು ಕೋರಿದ್ದಾರೆ. ಅಲ್ಲದೆ, ಕಾರ್ಯಕರ್ತೆಯರ 15,000 ಗೌರವಧನ ಹೆಚ್ಚಳದ ಬೇಡಿಕೆಯನ್ನು ಮಾನವೀಯತೆ ಮತ್ತು ಸಹಾನುಭೂತಿಯಿಂದ ಪರಿಗಣಿಸಿ ಶೀಘ್ರವಾಗಿ ನ್ಯಾಯ ಒದಗಿಸಬೇಕು ಎಂದು ಹೃತ್ಪೂರ್ವಕವಾಗಿ ಮನವಿ ಮಾಡಿದ್ದಾರೆ.

ತಮ್ಮ ಸಮಯೋಚಿತ ಮಧ್ಯಪ್ರವೇಶದಿಂದ ಈ ಮಹಿಳೆಯರ ಹೋರಾಟಕ್ಕೆ ಸಕಾರಾತ್ಮಕ ಪರಿಹಾರ ದೊರೆತು, ಅವರು ಗೌರವಯುತವಾಗಿ ತಮ್ಮ ಮನೆಗಳಿಗೆ ಮರಳುವಂತಾಗಲಿ ಎಂದು ಆಶಿಸುತ್ತೇನೆ ಎಂದು ಸುಮಲತಾ ತಮ್ಮ ಪತ್ರದಲ್ಲಿ ತಿಳಿಸಿದ್ದಾರೆ. ಅಲ್ಲದೆ, ಸರ್ಕಾರದ ಭರವಸೆ ಶೀಘ್ರದಲ್ಲೇ ನಿರ್ಧಾರವಾಗಲಿದೆ ಎಂದು ಆಶಿಸಿದ್ದಾರೆ.

ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ 132 ವಿದ್ಯಾರ್ಥಿಗಳಿಗೆ ವಿಶ್ವಾಮಿತ್ರ ಪ್ರತಿಭಾ ಪುರಸ್ಕಾರ

ಕೌಶಲ್ಯಯುಕ್ತರಾದರೆ ಉದ್ಯೋಗಕ್ಕೆ ಕೊರತೆ ಇಲ್ಲ: ದಿನೇಶ್ ಗುಂಡೂರಾವ್

ಬೆಂಗಳೂರು, ನ.22: ದೇಶದಲ್ಲಾಗಲೀ ಅಥವಾ ರಾಜ್ಯದಲ್ಲಾಗಲೀ ಉದ್ಯೋಗಾವಕಾಶಗಳು ಸಾಕಷ್ಟಿವೆ. ಆದರೆ, ಕೌಶಲ್ಯಯುಕ್ತ ಮಾನವ ಸಂಪನ್ಮೂಲದ ಕೊರತೆಯಿಂದಾಗಿ ನಿರುದ್ಯೋಗದ ಮಾತು ಕೇಳಿಬರುತ್ತಿದೆ ಎಂದು ಶಾಸಕ ದಿನೇಶ್ ಗುಂಡೂರಾವ್ ಹೇಳಿದರು.

ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಭಾನುವಾರ ಏರ್ಪಡಿಸಿದ್ದ ವಿಶ್ವಾಮಿತ್ರ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಅವರು ಮಾತನಾಡಿದರು.

ಪ್ರಸ್ತುತ ವಿವಿಧ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಕಂಪನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸ್ಥಾಪನೆಯಾಗುತ್ತಿದ್ದು, ಅವುಗಳು ಯಶಸ್ವಿಯಾಗಿ ಕಾರ್ಯಾಚರಿಸಲು ಉದ್ಯೋಗಿಗಳ ಅಗತ್ಯ ಕಂಡುಬರುತ್ತಿದೆ. ಆದರೆ, ಉದ್ಯೋಗಗಳಿಗೆ ಯಾವ ಕೌಶಲ್ಯಗಳು ಬೇಕೋ ಅವುಗಳ ಕೊರತೆಯು ದೊಡ್ಡ ಮಟ್ಟದಲ್ಲಿದೆ. ಹೀಗಾಗಿ, ಯುವಜನತೆ ಕೌಶಲ್ಯ ಬೆಳೆಸಿಕೊಳ್ಳುವ ಜೊತೆಗೆ ಪರಿಶ್ರಮ ಪಡುವ ಮನಃಸ್ಥಿತಿ ಬೆಳೆಸಿಕೊಂಡರೆ ಈ ಉದ್ಯೋಗಾವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬಹುದು ಎಂದು ಅವರು ವಿವರಿಸಿದರು.

ಎಲ್ಲಾ ಸಮುದಾಯಗಳ ಯುವಕರಿಗೂ ಇಂದಿನ ಅಗತ್ಯಕ್ಕೆ ಅನುಗುಣವಾಗಿ ಕೌಶಲ್ಯ ಅಗತ್ಯವಿದೆ. ಈ ದಿಸೆಯಲ್ಲಿ, ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಉತ್ತಮ ಕಾರ್ಯಕ್ರಮಗಳನ್ನು ಹಾಕಿಕೊಂಡಿದೆ ಎಂದ ಅವರು, ಹೆಚ್ಚಿನ ಮಟ್ಟದಲ್ಲಿ ಸೌಲಭ್ಯ ಒದಗಿಸಲು ಅನುಕೂಲವಾಗುವಂತೆ ಮಂಡಳಿಗೆ ರೂ 50 ಕೋಟಿ ರೂ ವಿಶೇಷ ಅನುದಾನ ನೀಡಲು ಸರ್ಕಾರದ ಮನವೊಲಿಸುವ ಭರವಸೆ ನೀಡಿದರು.

ದೇಶದ ಅಭಿವೃದ್ಧಿಗೆ ಬ್ರಾಹ್ಮಣ ಸಮುದಾಯದ ಕೊಡುಗೆ ಅಪಾರ

ಮಾಜಿ ಸಚಿವ ಹಾಗೂ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ. ದೇಶಪಾಂಡೆ ಅವರು ಮಾತನಾಡಿ, ಸ್ವಾತಂತ್ರ್ಯ ಪೂರ್ವದಲ್ಲಿ ಹಾಗೂ ಮತ್ತು ನಂತರದ ಅವಧಿಯಲ್ಲಿ ಸಮಾಜದವರು ಸಕ್ರಿಯವಾಗಿ ತೊಡಗಿಸಿಕೊಂಡು ದೇಶದ ಅಭಿವೃದ್ಧಿಗೆ ಕೊಡುಗೆ ನೀಡಿದ್ದಾರೆ. ಸ್ವಾತಂತ್ರ್ಯಕ್ಕಾಗಿ ತ್ಯಾಗ, ಬಲಿದಾನದ ಜೊತೆಗೆ ಸಮಾಜಕ್ಕೆ ಸೇರಿದ ಬಹಳಷ್ಟು ಜನರು ಐಎಎಸ್, ಐಪಿಎಸ್, ಐಆರ್‌ಎಸ್ ಅಧಿಕಾರಿಗಳಾಗಿ ಆಡಳಿತಕ್ಕೆ ದೀರ್ಘಕಾಲ ಚೈತನ್ಯ ತುಂಬಿದ್ದಾರೆ ಎಂದರು. ಬ್ರಾಹ್ಮಣ ಸಮಾಜವು ಸಂಘಟಿತವಾಗಿ ಸಾರ್ವಜನಿಕ ಜೀವನಕ್ಕೆ ಮೌಲಿಕ ಕೊಡುಗೆ ನೀಡುವ ಬಗ್ಗೆ ಚಿಂತಿಸಬೇಕು. ಶಾಸನಸಭೆಗಳಲ್ಲಿ ಸಮಾಜದಿಂದ ಬಂದ ಹೆಚ್ಚಿನ ಪ್ರತಿನಿಧಿಗಳು ಕಾಣುವಂತಾಗಿ ರಚನಾತ್ಮಕ ರಾಜಕಾರಣದಿಂದ ಹೆಸರಾಗಬೇಕು ಎಂದು ಅವರು ಆಶಿಸಿದರು.



ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ನಿಕಟಪೂರ್ವ ಅಧ್ಯಕ್ಷ ಅಶೋಕ್ ಹಾರನಹಳ್ಳಿ, ಕೌಶಲ್ಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ರವಿ ತಿರ್ಲಾಪುರ, ಮಂಡಳಿ ವ್ಯವಸ್ಥಾಪಕ ನಿರ್ದೇಶಕಿ ಕೆ. ದೀಪಶ್ರೀ, ನಿರ್ದೇಶಕರಾದ ಗುರುರಾಜ ವಾದಿರಾಜ ಬಳಗನೂರು, ಬಿ.ಎನ್.ಮಹೇಶ್, ಮತ್ತು ಮಾಲತೇಶ್ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

ಕೆಪಿಎಸ್‌ಸಿ ಕಾರ್ಯವೈಖರಿಯಲ್ಲಿ ಮಹತ್ವದ ಬದಲಾವಣೆ

6 ದಿನದಲ್ಲೇ ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳ ಪರೀಕ್ಷೆ ತಾತ್ಕಾಲಿಕ ಫಲಿತಾಂಶ ಪ್ರಕಟ

ಬೆಂಗಳೂರು, ನ.22: ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ತನ್ನ ಕಾರ್ಯವೈಖರಿಯಲ್ಲಿ ಮಹತ್ವದ ಬದಲಾವಣೆ ತರುವ ಮೂಲಕ ಹೊಸ ಇತಿಹಾಸ ನಿರ್ಮಿಸಿದೆ. ಕಳೆದ ನವೆಂಬರ್ 15ರಂದು ನಡೆದಿದ್ದ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿ ಪೂರ್ವಭಾವಿ ಪರೀಕ್ಷೆಯ ತಾತ್ಕಾಲಿಕ ಫಲಿತಾಂಶವನ್ನು ಪರೀಕ್ಷೆ ಮುಗಿದ ಕೇವಲ 6 ದಿನಗಳಲ್ಲಿಯೇ ಪ್ರಕಟಿಸಿದೆ.

ಈ ಹಿಂದೆ ಕೆಪಿಎಸ್‌ಸಿ ನಡೆಸುತ್ತಿದ್ದ ಪರೀಕ್ಷೆಗಳಲ್ಲಿ ಕೀ ಉತ್ತರಗಳನ್ನು ಬಿಡುಗಡೆ ಮಾಡುವುದಕ್ಕೇ 15ರಿಂದ 20 ದಿನಗಳ ಕಾಲಾವಕಾಶ ಬೇಕಾಗುತ್ತಿತ್ತು. ಇನ್ನು ಪೂರ್ವಭಾವಿ ಪರೀಕ್ಷೆಯ ಫಲಿತಾಂಶ ಹೊರಬೀಳಲು ತಿಂಗಳುಗಟ್ಟಲೆ ಕಾಯಬೇಕಾದ ಪರಿಸ್ಥಿತಿ ಇತ್ತು. ಆದರೆ, ಈ ಬಾರಿ ಆಯೋಗವು ಅತ್ಯಂತ ಕ್ಷಿಪ್ರಗತಿಯಲ್ಲಿ ನೇಮಕಾತಿ ಪ್ರಕ್ರಿಯೆಯನ್ನು ನಡೆಸಿದ್ದು, ನವೆಂಬರ್ 15ರಂದು ಪರೀಕ್ಷೆ ನಡೆಸಿ, ಮರುದಿನವೇ ಅಂದರೆ ನವೆಂಬರ್ 16ರಂದು ಕೀ ಉತ್ತರಗಳನ್ನು ಬಿಡುಗಡೆ ಮಾಡಿತ್ತು. ಇದೀಗ ಕೇವಲ ಆರೇ ದಿನಗಳಲ್ಲಿ ತಾತ್ಕಾಲಿಕ ಫಲಿತಾಂಶವನ್ನು ಪ್ರಕಟಿಸುವ ಮೂಲಕ ಅಭ್ಯರ್ಥಿಗಳಿಗೆ ಅಚ್ಚರಿ ಮೂಡಿಸಿದೆ.

ನವೆಂಬರ್ 15ರಂದು ನಡೆದ ಈ ಪೂರ್ವಭಾವಿ ಪರೀಕ್ಷೆಯ ಮೊದಲ ಅವಧಿಗೆ ರಾಜ್ಯಾದ್ಯಂತ ಒಟ್ಟು 88,450 ಅಭ್ಯರ್ಥಿಗಳು ಹಾಜರಾಗಿದ್ದರೆ, ಎರಡನೇ ಅವಧಿಯ ಪರೀಕ್ಷೆಯನ್ನು 87,817 ಅಭ್ಯರ್ಥಿಗಳು ಬರೆದಿದ್ದರು. ಇದೀಗ ಪ್ರಕಟವಾಗಿರುವ ತಾತ್ಕಾಲಿಕ ಫಲಿತಾಂಶಕ್ಕೆ ಸಂಬಂಧಿಸಿದಂತೆ ಅಭ್ಯರ್ಥಿಗಳಿಗೆ ಏನಾದರೂ ಆಕ್ಷೇಪಣೆಗಳಿದ್ದಲ್ಲಿ, ಅವುಗಳನ್ನು ಸಲ್ಲಿಸಲು ನಾಳೆ (ಸೋಮವಾರ) ಬೆಳಗ್ಗೆ 11 ಗಂಟೆಯವರೆಗೆ ಕೆಪಿಎಸ್‌ಸಿ ಕಾಲಾವಕಾಶ ನೀಡಿದೆ.ನೇಮಕಾತಿ ಪ್ರಕ್ರಿಯೆಗಳಲ್ಲಿನ ವಿಳಂಬದಿಂದ ಬೇಸತ್ತಿದ್ದ ಉದ್ಯೋಗಾಕಾಂಕ್ಷಿಗಳಿಗೆ ಕೆಪಿಎಸ್‌ಸಿಯ ಈ ವೇಗದ ನಡೆ ಹೊಸ ಭರವಸೆ ಮೂಡಿಸಿದೆ.

ಅಕ್ರಮ ಚಟುವಟಿಕೆಯಲ್ಲಿ ತೊಡಗಿದರೆ ನಿರ್ದಾಕ್ಷಿಣ್ಯ ಕ್ರಮ: ಹಿತೇಂದ್ರ ಎಚ್ಚರಿಕೆ

ಬೆಂಗಳೂರು,ನ.22– ಅಕ್ರಮ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವ ಯಾವುದೇ ವ್ಯಕ್ತಿಯಾಗಲೀ ಅಂತಹವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ನಗರದ ಮುಖ್ಯ ಪೊಲೀಸ್ ಆಯುಕ್ತ ಆರ್. ಹಿತೇಂದ್ರ ಎಚ್ಚರಿಕೆ ನೀಡಿದ್ದಾರೆ.



ಸುದ್ದಿಗಾರರ ಜೊತೆ ಮಾತನಾಡಿದ ಅವರು ಭಾನುವಾರ ಮುಂಜಾನೆ ನಗರದ 130 ರೌಡಿಗಳ ಮನೆ ಮೇಲೆ ಪೊಲೀಸರು ಏಕಕಾಲದಲ್ಲಿ ದಾಳಿ ಮಾಡಿ ಪರಿಶೀಲಿಸಲಾಗಿದೆ ಎಂದು ತಿಳಿಸಿದರು.

ಸಾರ್ವಜನಿಕರಿಗೆ ತೊಂದರೆ ಕೊಡುವ ರೌಡಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದಲ್ಲದೇ ಗಡಿಪಾರು ಸಹ ಮಾಡಲಾಗುವುದು ಎಂದು ಅವರು ಹೇಳಿದರು.

ರಸ್ತೆಗಳಲ್ಲಿ ಮಚ್ಚು,ಲಾಂಗು ಹಿಡಿದುಕೊಂಡು ಓಡಾಡುವ ಸಮಾಜಘಾತುಕ ಶಕ್ತಿಗಳು ಕಂಡು ಬಂದಲ್ಲಿ ಅವರನ್ನು ಪತ್ತೆಹಚ್ಚಿ ತಕ್ಷಣ ಬಂಧಿಸಿ ಕಾನೂನು ಕ್ರಮ ಕೈಗೊಳ್ಳುತ್ತೇವೆ ಎಂದು ಅವರು ಎಚ್ಚರಿಕೆ ನೀಡಿದರು.

ಕಾನೂನು ಮತ್ತು ಸುವ್ಯವಸ್ಥೆಯನ್ನು ಗಟ್ಟಿಗೊಳಿಸಲು ಹಾಗೂ ಅಪರಾಧಗಳನ್ನು ನಿಯಂತ್ರಿಸಲು ಆಗಾಗ್ಗೆ ರೌಡಿಗಳ ಮನೆ ಮೇಲೆ ದಾಳಿ ನಡೆಯುತ್ತವೆ. ಮುಂದೆಯೂ ಸಹ ಇದೇ ರೀತಿ ದಾಳಿ ಮಾಡುತ್ತೇವೆ ಎಂದು ಮುಖ್ಯ ಆಯುಕ್ತರು ತಿಳಿಸಿದರು.

ಆಧಾರ್ ಕೇವಲ ಗುರುತಿನ ದಾಖಲೆಯಷ್ಟೇ: ವ್ಯಕ್ತಿಯ ವಯಸ್ಸು, ಜನ್ಮದಿನಾಂಕ ನಿರ್ಧರಿಸುವ ಅಧಿಕೃತ ಪುರಾವೆಯಲ್ಲ– ಹೈಕೋರ್ಟ್ ಮಹತ್ವದ ತೀರ್ಪು

ಬೆಂಗಳೂರು, ನ.22: ಆಧಾರ್ ಕಾರ್ಡ್ ಕೇವಲ ಗುರುತಿನ ದಾಖಲೆಯೇ ಹೊರತು, ವ್ಯಕ್ತಿಯ ವಯಸ್ಸು ಅಥವಾ ಜನ್ಮದಿನಾಂಕವನ್ನು ನಿರ್ಧರಿಸುವ ಅಧಿಕೃತ ಪುರಾವೆಯಲ್ಲ ಎಂದು ಕರ್ನಾಟಕ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ.

ವಯಸ್ಸನ್ನು ದೃಢಪಡಿಸುವ ಬೇರೆ ಅಧಿಕೃತ ದಾಖಲೆಗಳಿಲ್ಲದ ಸಂದರ್ಭದಲ್ಲಿ ಮರಣೋತ್ತರ ಪರೀಕ್ಷಾ ವರದಿಯಲ್ಲಿ ನಮೂದಿಸಿರುವ ವಯಸ್ಸನ್ನೇ ಪರಿಗಣಿಸಬೇಕು ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

ಡಿಸೆಂಬರ್ 18, 2021 ರಂದು ಮೈಸೂರಿನಿಂದ ಗುರುವಾಯನಕೆರೆಗೆ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಮೇಷ್ತ್ರಿ ಕೆಲಸ ಮಾಡುತ್ತಿದ್ದ ಷರೀಫ್ ಎಂಬುವವರು ಬೇಲೂರು–ಮೂಡಿಗೆರೆ ರಸ್ತೆಯಲ್ಲಿ ಸಂಭವಿಸಿದ ಅಪಘಾತದಲ್ಲಿ ಮೃತಪಟ್ಟಿದ್ದರು. ಈ ಪ್ರಕರಣದಲ್ಲಿ ಮಂಗಳೂರು ಮೋಟಾರು ಅಪಘಾತ ಪರಿಹಾರ ನ್ಯಾಯಮಂಡಳಿ ಮೃತರ ಕುಟುಂಬಕ್ಕೆ 26,73,100 ಪರಿಹಾರ ನೀಡಿತ್ತು.



ಆದರೆ, ಷರೀಫ್ ಅವರ ಆಧಾರ್ ಕಾರ್ಡ್‌ನಲ್ಲಿ ವಯಸ್ಸು 35 ವರ್ಷ 7 ತಿಂಗಳು ಎಂದು ನಮೂದಾಗಿದ್ದರೆ, ಮರಣೋತ್ತರ ಪರೀಕ್ಷಾ ವರದಿಯಲ್ಲಿ 32 ವರ್ಷ ಎಂದು ದಾಖಲಾಗಿತ್ತು.

ಕೆಳಹಂತದ ನ್ಯಾಯ ಮಂಡಳಿಯು ಆಧಾರ್ ವಿವರ ಆಧರಿಸಿ ವಯಸ್ಸನ್ನು 36 ವರ್ಷ ಎಂದು ಪರಿಗಣಿಸಿ ಪರಿಹಾರ ಲೆಕ್ಕಹಾಕಿತ್ತು. ಇದನ್ನು ಪ್ರಶ್ನಿಸಿ ಮೃತರ ಪತ್ನಿ ಸಕೀನಾ, ಮಗಳು ಮತ್ತು ತಾಯಿ ಹೈಕೋರ್ಟ್ ಮೆಟ್ಟಿಲೇರಿದ್ದರು. ಇನ್ನು ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಕೆ.ಎಸ್. ಭರತ್ ಕುಮಾರ್ ಅವರಿದ್ದ ಏಕಸದಸ್ಯ ಪೀಠವು, "ಆಧಾರ್ ಕಾರ್ಡ್‌ನಲ್ಲಿರುವ ವಯಸ್ಸನ್ನು ಅವಲಂಬಿಸಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟು, ಮರಣೋತ್ತರ ಪರೀಕ್ಷಾ ವರದಿಯ ವಯಸ್ಸನ್ನು ಪರಿಗಣಿಸಿ ಪರಿಹಾರದ ಮೊತ್ತವನ್ನು 26,73,100 ರಿಂದ 28,68,000ಕ್ಕೆ (ಹೆಚ್ಚುವರಿ 1.95 ಲಕ್ಷ) ಏರಿಸಿ ಆದೇಶಿಸಿದೆ. ಜೊತೆಗೆ, ಹೆಚ್ಚುವರಿ ಮೊತ್ತಕ್ಕೆ ವಾರ್ಷಿಕ ಶೇ.6ರ ಬಡ್ಡಿಯೊಂದಿಗೆ ಪಾವತಿಸುವಂತೆ ಯುನೈಟೆಡ್ ಇಂಡಿಯಾ ಇನ್ಶೂರೆನ್ಸ್ ಕಂಪನಿಗೆ ಸೂಚಿಸಿದೆ. ಇದೆ ವೇಳೆ, ಮೃತರ ವಯಸ್ಸನ್ನು ಸಾಬೀತುಪಡಿಸಲು ಕುಟುಂಬಸ್ಥರು ಬೇರೆ ದಾಖಲೆಗಳನ್ನು ಹಾಜರುಪಡಿಸಬೇಕು ಎಂಬ ವಿಮಾ ಕಂಪನಿಯ ವಾದವನ್ನು ತಳ್ಳಿಹಾಕಿದ ನ್ಯಾಯಾಲಯ, "ಬೇರೆ ದಾಖಲೆಗಳಿಲ್ಲದಿದ್ದಾಗ ಮರಣೋತ್ತರ ಪರೀಕ್ಷಾ ವರದಿಯನ್ನು ವೈಜ್ಞಾನಿಕ ವಸ್ತುನಿಷ್ಠ ಮೌಲ್ಯಮಾಪನ ಎಂದು ಪರಿಗ

ಬೀದರ್ ಜಿಲ್ಲಾ 22ನೇ ಕನ್ನಡ ಸಾಹಿತ್ಯ ಸಮ್ಮೇಳನ



ಬೀದರ್, ನ. 22: ಕರ್ನಾಟಕದ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಚಾರಿತ್ರ್ಯಹನನ, ಅಪಮಾನ ಈ ದೇಶದ ಮನುಕುಲದ ಉದ್ಧಾರಕ್ಕಾಗಿ ಶ್ರಮಿಸಿದ ಎಲ್ಲ ಮಹಾಪುರುಷರ ಅವಮಾನ ಮಾಡಿದಂತೆ. ಇದರ ವಿರುದ್ಧ ದನಿ ಎತ್ತುವುದು ಏಳು ಕೋಟಿ ಕನ್ನಡಿಗರ ಆದ್ಯ ಕರ್ತವ್ಯ ಎಂದು ಹಿರಿಯ ಪತ್ರಕರ್ತ ದಿನೇಶ ಅಮಿನ್‌ಮಟ್ಟು ಹೇಳಿದರು.

ನಗರದ ಜಿಲ್ಲಾ ರಂಗಮಂದಿರದಲ್ಲಿ ವಚನ ಸಾಹಿತ್ಯ ಕರ್ನಾಟಕದ ಸಾಹಿತ್ಯ ಕ್ಷೇತ್ರಕ್ಕೆ ಮಹತ್ತರ ಕೊಡುಗೆ ನೀಡಿದೆ. ಬಸವಣ್ಣನವರ ನೇತೃತ್ವದಲ್ಲಿ ಈ ವಚನ ಸಾಹಿತ್ಯ ಕ್ರಾಂತಿ ನಡೆಯಿತೆಂಬುದು ಬಹಳ ಮುಖ್ಯ. ಬಸವಣ್ಣನೊಳಗೆ ಗೌತಮ ಬುದ್ಧ, ಡಾ.ಬಿ.ಆರ್. ಅಂಬೇಡ್ಕರ್, ನಾರಾಯಣಗುರು, ಕುವೆಂಪು ಹೀಗೆ ಎಲ್ಲ ಮಹಾಪುರುಷರು ಇದ್ದಾರೆ. ಬಸವಣ್ಣನವರನ್ನು ಅಪಮಾನಿಸಿದರೆ ಇವರೆಲ್ಲರಿಗೂ ಅವಮಾನಿಸಿದಂತೆ. ಇದನ್ನು ಇಂದಿನ ಸಾಹಿತಿಗಳು, ಲೇಖಕರು ಹಾಗೂ ಕನ್ನಡ ನಾಡಿನ ಜನ ಅರಿತುಕೊಳ್ಳಬೇಕಿದೆ ಎಂದರು.

ವಚನ ಚಳವಳಿಯ ಮುಖ್ಯ ಉದ್ದೇಶ ಸಾಮಾಜಿಕ ಪರಿವರ್ತನೆ ಆಗಿತ್ತು. ಅದರಿಂದ ಸಾಮಾಜಿಕ ಬದಲಾವಣೆ ಆರಂಭವಾಗಿದ್ದವು. ಯಾರೂ ಕೂಡ ಬಸವಣ್ಣನವರ ಪ್ರಭಾವದಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ಶರಣ ಚಳವಳಿ ಎಲ್ಲಾ ಚಳವಳಿಗೆ ಮಾತೃಸ್ವರೂಪಿ. ದಲಿತ, ಮಹಿಳಾ, ಕಾರ್ಮಿಕ, ಭಾಷಾ ಚಳವಳಿ ಎಲ್ಲವೂ ಅದರಲ್ಲಿ ಸೇರಿದೆ. ಸಂವಿಧಾನದ ಆಶಯಗಳು ಬಸವತತ್ವದಲ್ಲಿವೆ.

ಎಲ್ಲಾ ರೀತಿಯ ಚಳವಳಿಗಳಲ್ಲಿ ಸಾಹಿತ್ಯ ಹಾಗೂ ಸಾಹಿತಿಗಳ ಪಾತ್ರ ಬಹಳ ದೊಡ್ಡದಿತ್ತು. ಅನೇಕ ಸಾಹಿತಿಗಳು ಸಾಮಾಜಿಕ, ಧಾರ್ಮಿಕ ಹಾಗೂ ಇತರ ಚಳವಳಿಗಳಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಆದರೆ, ಈಗ ಅಂಥ ವಾತಾವರಣ ಇಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.

ಹಿರಿಯ ನಾಗರಿಕರು ಚಿಂತೆಮುಕ್ತ ನೆಮ್ಮದಿಯ ಬದುಕು ನಡೆಸಬೇಕು: ರಾಘವೇಂದ್ರ ಉಪಾಧ್ಯೆ



ಬೀದರ್, ನ. 22: ಹಿರಿಯ ನಾಗರಿಕರು ಚಿಂತಾಮುಕ್ತರಾಗಿ, ಸಾಮಾಜಿಕವಾಗಿ ಗೌರವಯುತ ಹಾಗೂ ನೆಮ್ಮದಿಯ ಬದುಕು ನಡೆಸಬೇಕು. ಹಿರಿಯ ನಾಗರಿಕರ ರಕ್ಷಣೆಗಾಗಿ ಹಲವಾರು ಕಾನೂನುಗಳಿದ್ದು, ಅವುಗಳ ಬಗ್ಗೆ ಅರಿವು ಹೊಂದುವ ಮೂಲಕ ತಮ್ಮ ಹಕ್ಕು ಮತ್ತು ಸಂರಕ್ಷಣೆಗೆ ಮುಂದಾಗಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ರಾಘವೇಂದ್ರ ಉಪಾಧ್ಯೆ ಹೇಳಿದರು.

ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಇತ್ತೀಚೆಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಮತ್ತು ಹಿರಿಯ ನಾಗರಿಕರ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಸ್ವಯಂಸೇವಾ ಸಂಸ್ಥೆಗಳು ಹಾಗೂ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ, ಶಿಬಿರ ಹಾಗೂ ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಅಂಗವಾಗಿ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾಯಧೀಶ ರಾಘವೇಂದ್ರ ಉಪಾಧ್ಯೆ ಅವರು ಉದ್ಘಾಟಿಸಿ ಮಾತನಾಡಿದರು.

ಬೀದರ ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಇತ್ತೀಚೆಗೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಮತ್ತು ಹಿರಿಯ ನಾಗರಿಕರ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಸ್ವಯಂಸೇವಾ ಸಂಸ್ಥೆಗಳು ಹಾಗೂ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ, ಶಿಬಿರ ಹಾಗೂ ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಅಂಗವಾಗಿ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾಯಧೀಶ ರಾಘವೇಂದ್ರ ಉಪಾಧ್ಯೆ ಅವರು ಉದ್ಘಾಟಿಸಿ ಮಾತನಾಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಶ್ರೀಕಾಂತ ಮಾತನಾಡಿದರು. ಹಿರಿಯ ನಾಗರಿಕರಿಗೆ ಆರೋಗ್ಯ ತಪಾಸಣೆ ನಡೆಸಲಾಯಿತು. ಇತ್ತೀಚೆಗೆ ಆಯೋಜಿಸಿದ್ದ ಹಿರಿಯ ನಾಗರಿಕರ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಈ ಸಂದರ್ಭದಲ್ಲಿ ಬಹುಮಾನ ವಿತರಿಸಲಾಯಿತು.

ನಿಗಮ-ಮಂಡಳಿ ನೇಮಕ, ಕಲಬುರಗಿ ಮೂವರಿಗೆ ದಕ್ಕಿದ ಅಧಿಕಾರ



ಕಲಬುರಗಿ, ನ. 22 : ಬಹುದಿನಗಳಿಂದ ನಿರೀಕ್ಷೆಯಲ್ಲಿದ್ದ ನಿಗಮ ಮಂಡಳಿಗಳ ಅಧ್ಯಕ್ಷ ಸ್ಥಾನಗಳ ನೇಮಕಾತಿಗೆ ಕೊನೆಗೂ ಚಾಲನೆ ದೊರೆತಿದ್ದು, ವಿಳಂಬವಾಗಿ ಆದರೂ ಪಕ್ಷಕ್ಕಾಗಿ ಹಗಲಿರುಳು ಶ್ರಮಿಸಿದ ಕಟ್ಟಾ ಕಾಂಗ್ರೆಸ್ ಕಾರ್ಯಕರ್ತರಿಗೆ ಮನ್ನಣೆ ಸಿಕ್ಕಂತಾಗಿದೆ.

ಎಐಸಿಸಿ ಮಟ್ಟದಲ್ಲಿ ನಡೆದ ಚರ್ಚೆ ಹಾಗೂ ಪಕ್ಷದ ವರಿಷ್ಠರ ಸೂಚನೆಯ ಮೇರೆಗೆ ನಿಗಮ ಮಂಡಳಿಗಳ ನೇಮಕಾತಿ ಪ್ರಕ್ರಿಯೆ ನಡೆದಿದ್ದು, ಕಲಬುರಗಿ ಜಿಲ್ಲೆಗೆ ಗರಿಷ್ಠ ಅಧಿಕಾರ ದೊರಕಿದೆ.

ಶಾಸಕ ಅಲ್ಲಮಪ್ರಭು ಪಾಟೀಲ್, ಸುಭಾಷ್ ರಾಠೋಡ್, ಶಾಮ್ ನಾಟಿಕಾರ್ ಸೇರಿದಂತೆ ಹಲವರಿಗೆ ನಿಗಮ ಮಂಡಳಿಗಳ ಜವಾಬ್ದಾರಿ ನೀಡಿರುವುದು ಕಾಂಗ್ರೆಸ್ ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ಮೂಡಿಸಿದೆ. ಚುನಾವಣೆಯ ಸಂದರ್ಭದಲ್ಲಿ ಪಕ್ಷದ ಗೆಲುವಿಗಾಗಿ ಶ್ರಮಿಸುವ ಕಾರ್ಯಕರ್ತರು ಅಧಿಕಾರ ಹಂಚಿಕೆಯಲ್ಲಿ ಕಡೆಗಣನೆಯಾಗುತ್ತಿದ್ದಾರೆ ಎಂಬ ಅಸಮಾಧಾನ ಕಾಂಗ್ರೆಸ್ ವಲಯದಲ್ಲಿ ಬಹು ದಿನಗಳಿಂದ ಕೇಳಿಬರುತ್ತಿತ್ತು. ಇದೀಗ ಪಕ್ಷದ ನಿಷ್ಠಾವಂತರು ಹಾಗೂ ಸಂಘಟನೆಯಲ್ಲಿ ತೊಡಗಿಸಿಕೊಂಡಿರುವ ಮುಖಂಡರಿಗೆ ಅವಕಾಶ ಕಲ್ಪಿಸಿರುವುದು ಪಕ್ಷದ ಸಂಘಟನೆಗೆ ಬಲ ತುಂಬುವ ಪ್ರಯತ್ನವೆಂದು ವಿಶ್ಲೇಷಿಸಲಾಗುತ್ತಿದೆ.

ಆದರೆ ಈ ನೇಮಕಾತಿ ಇನ್ನಷ್ಟು ಮೊದಲೇ ಆಗಬೇಕಿತ್ತು ಎಂಬ ಅಭಿಪ್ರಾಯವೂ ಕಾರ್ಯಕರ್ತರ ವಲಯದಲ್ಲಿದೆ. ಅಧಿಕಾರದ ನಿರೀಕ್ಷೆಯಲ್ಲಿ ಕಾಯುತ್ತಿದ್ದ ಮುಖಂಡರಿಗೆ ತಡವಾಗಿಯಾದರೂ ಅವಕಾಶ ಸಿಕ್ಕಿರುವುದು ಸಮಾಧಾನದ ಸಂಗತಿ.

ಮುಂದಿನ ಹೆಜ್ಜೆ: ನಿಗಮ ಮಂಡಳಿ ಸ್ಥಾನಮಾನ ಪಡೆದವರು ಕೇವಲ ಅಧಿಕಾರದ ಗೌರವಕ್ಕೆ ಸೀಮಿತವಾಗದೆ, ಜನರ ಸಮಸ್ಯೆಗಳಿಗೆ ಸ್ಪಂದಿಸಿ ಅಭಿವೃದ್ಧಿ ಕಾರ್ಯಗಳಿಗೆ ವೇಗ ನೀಡಬೇಕಿದೆ. ಪಕ್ಷಕ್ಕಾಗಿ ದುಡಿದವರಿಗೆ ಸಿಕ್ಕಿರುವ ಈ ಮನ್ನಣೆ ಜನಸೇವೆಯ ಮೂಲಕ ಸಾರ್ಥಕವಾಗಲಿ ಎಂಬುದು ಕಾರ್ಯಕರ್ತರ ಆಶಯವಾಗಿದೆ.

ಕಲಬುರಗಿ ಜಿಲ್ಲೆಯ ಹಾಗೂ ಮಲ್ಲಿಕಾರ್ಜುನ್ ಖರ್ಗೆ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿರುವ ಶಾಸಕ ಅಲ್ಲಮ ಪ್ರಭು ಪಾಟೀಲ ಅವರಿಗೆ ಕರ್ನಾಟಕ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮದ ರಾಜ್ಯ ಮಟ್ಟದ ಅಧ್ಯಕ್ಷ, ಸುಭಾಷ ರಾಠೋಡ ಅವರಿಗೆ ಕರ್ನಾಟಕ ಲಂಬಾಣಿ ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಶಾಮ ನಾಟೀಕರ ಅವರಿಗೆ ಸಾಂಬಾರು ಪದಾರ್ಥ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನವನ್ನು ನೀಡಲಾಗಿದೆ. ಜಿಲ್ಲೆಯ ಒಂಭತ್ತು ವಿಧಾನಸಭಾ ಕ್ಷೇತ್ರಗಳ ಪೈಕಿ ಇಬ್ಬರು ಮಾತ್ರ ಬಿಜೆಪಿ ಶಾಸಕರಿದ್ದು, ಇನ್ನುಳಿದ ಏಳು ಶಾಸಕರು ಕಾಂಗ್ರೆಸ್ಸಿನವರೇ ಆಗಿದ್ದಾರೆ. ಏಳರಲ್ಲಿ ಪ್ರಿಯಾಂಕ್ ಖರ್ಗೆ, ಡಾ.ಶರಣಪ್ರಕಾಶ ಪಾಟೀಲ್ ಮತ್ತು ಡಾ.ಅಜಯಸಿಂಗ್ ಅವರು ಮಂತ್ರಿಯಾಗಿದ್ದಾರೆ. ಇನ್ನೊಬ್ಬ ಶಾಸಕ ಕನೀಜ್ ಫಾತಿಮಾ ಈ ಹಿಂದೆಯೇ ರೇಶ್ಮೆ ನಿಗಮದ ಅಧ್ಯಕ್ಷರಾಗಿದ್ದು, ಅವರೊಂದಿಗೆ ಶಾಸಕ ಎಂವೈ ಪಾಟೀಲ್ ಪುತ್ರ ಅರುನಕುಮಾರ ಪಾಟೀಲ್ ಅವರಿಗೆ ಕೆಕೆಆರ್‌ಟಿಸಿ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿತ್ತು. ಇದೀಗ ಇನ್ನೊಬ್ಬ ಶಾಸಕ ಸೇರಿದಂತೆ ಇಬ್ಬರು ಕಾರ್ಯಕರ್ತರಿಗೆ ಅಧಿಕಾರ ನೀಡಲಾಗಿದೆ. ಈ ಮೂಲಕ ನಿಗಮ ಮಂಡಳಿ ನೇಮಕದಲ್ಲೂ ಖರ್ಗೆ ಆಪ್ತರಿಗೇ ಗರಿಷ್ಠ ಪ್ರಾತಿನಿಧ್ಯ ದೊರೆತಂತಾಗಿದೆ.

ಮಿಷನ್-60+ ಯಶಸ್ವಿಗೊಳಿಸಿ, ಮಕ್ಕಳಲ್ಲಿ ಸಕಾರಾತ್ಮಕ ಬದಲಾವಣೆ ತನ್ನಿ: ಸಚಿವ ಮಧು ಬಂಗಾರಪ್ಪ ಕರೆ



ರಾಯಚೂರು, ನ. 22: ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಶೇ.100 ರಷ್ಟು ಫಲಿತಾಂಶ ಸಾಧಿಸುವ ಹಾಗೂ ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ವಿಶೇಷ ಆದ್ಯತೆ ನೀಡಲು ನಾವು ಜಾರಿಗೆ ತಂದಿರುವ 'ಮಿಷನ್ 60+' ಎಂಬ ಅಭಿಯಾನದ ಉದ್ದೇಶ ಕೇವಲ ಫಲಿತಾಂಶವನ್ನು ಸುಧಾರಿ ಸುವುದು ಮಾತ್ರವಲ್ಲ, ಮಕ್ಕಳ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸುವುದರ ಜತೆಗೆ ಅವರಲ್ಲಿ ಸಕಾರಾತ್ಮಕ ಬದಲಾವಣೆ ತರುವುದೂ ನಮ್ಮ ಗುರಿಯಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಕರೆ ನೀಡಿದರು.

ನಗರದ ಕೃಷಿ ವಿಶ್ವವಿದ್ಯಾಲಯದಲ್ಲಿ ಇಂದು ಆಯೋಜಿಸಿದ್ದ 2026-27ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಗಳ ಫಲಿತಾಂಶ ಸುಧಾರಣೆಗಾಗಿ ಕಲಬುರಗಿ ವಿಭಾಗ ಮಟ್ಟದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈ ಕಾರ್ಯಗಾರದಲ್ಲಿ ಕಲಬುರಗಿ ವಿಭಾಗದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ಎಲ್ಲಾ ಅನುಷ್ಠಾನ ಅಧಿಕಾರಿಗಳಿಗೆ, ಪ್ರಾಂಶುಪಾಲರಿಗೆ, ಸಂಪನ್ಮೂಲ ವ್ಯಕ್ತಿಗಳಿಗೆ ಮತ್ತು ತಾಲ್ಲೂಕುಗಳ ಎಲ್ಲಾ ಮಾಧ್ಯಮ ಹಾಗೂ ಎಲ್ಲಾ ವಿಷಯಗಳ ತಾಲ್ಲೂಕು ಸಂಪನ್ಮೂಲ ವ್ಯಕ್ತಿಗಳಿಗೆ/ ಶಿಕ್ಷಕರಿಗೆ ಫಲಿತಾಂಶವನ್ನು ಉತ್ತಮ ಪಡಿಸುವ ನಿಟ್ಟಿನಲ್ಲಿ ವಿಶೇಷ ತರಬೇತಿಯನ್ನು ನೀಡಲಾಗುತ್ತಿದೆ. ಕಳೆದ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಬಹುತೇಕ ಶಾಲೆಗಳಲ್ಲಿ ಶಿಕ್ಷಕರು ವಿಶೇಷ ಆಸಕ್ತಿ ವಹಿಸಿ ಹೆಚ್ಚುವರಿ ತರಗತಿಗಳನ್ನು ನಡೆಸಿ, ಮಕ್ಕಳಿಗೆ ಕಲಿಕೆಗೆ ಪೂರಕವಾದ ಅವಕಾಶಗಳನ್ನು ಕಲ್ಪಿಸಿದ ಪರಿಣಾಮ ಉತ್ತಮ ಫಲಿತಾಂಶ ಸಾಧಿಸಲು ಸಾಧ್ಯವಾಗಿದೆ. ಈ ಬಾರಿಯೂ ಅದೇ ಬದ್ಧತೆ ಮತ್ತು ಪರಿಶ್ರಮದೊಂದಿಗೆ ಕಾರ್ಯನಿರ್ವಹಿಸಿ, ಪ್ರತಿಯೊಬ್ಬ ವಿದ್ಯಾರ್ಥಿಯೂ ಉತ್ತಮ ಅಂಕ ಗಳಿಸುವಂತೆ ಸಿದ್ಧಪಡಿಸಬೇಕು. ಶೇ.100ರಷ್ಟು ಫಲಿತಾಂಶ ಸಾಧಿಸುವ ಗುರಿಯನ್ನು ಎಲ್ಲರೂ ಹೊಂದಬೇಕು ಎಂದರು.

ಕಳೆದ ವರ್ಷ ಮಿಷನ್-40+ ಅಭಿಯಾನಕ್ಕೆ ಡಿಸೆಂಬರ್ ಕೊನೆಯಲ್ಲಿ ಚಾಲನೆ ನೀಡಲಾಗಿತ್ತು. ಈ ಬಾರಿ ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟ ಮತ್ತು ಪರೀಕ್ಷಾ ಫಲಿತಾಂಶವನ್ನು ಮತ್ತಷ್ಟು ಸುಧಾರಿಸುವ ಉದ್ದೇಶದಿಂದ ಮುಂಚಿತವಾಗಿಯೇ ಮಿಷನ್-60+ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ. ಧಾರವಾಡದ ಐಐಟಿಯಲ್ಲಿ ರಾಜ್ಯಮಟ್ಟದ ಕಾರ್ಯಕ್ರಮ ಉದ್ಘಾಟನೆಯಾಗುವ ಮೊದಲೇ ರಾಯಚೂರು ಜಿಲ್ಲೆಯ ಶಿಕ್ಷಕರು ಫಲಿತಾಂಶ ಸುಧಾರಣೆಯ ಸಂಕಲ್ಪ ಮಾಡಿರುವುದು ಸಂತಸದ ಸಂಗತಿ. ಕಳೆದ ವರ್ಷದ ಮಿಷನ್-40+ ಯಶಸ್ಸನ್ನು ಈ ಬಾರಿ ಮಿಷನ್-60+ ಮೂಲಕ ಮತ್ತಷ್ಟು ಎತ್ತರಕ್ಕೆ ಕೊಂಡೊಯ್ಯಬೇಕು ಎಂದು ಹೇಳಿದರು.

ಕಳೆದ ಸಾಲಿನ ಉತ್ತಮ ಫಲಿತಾಂಶದ ಹಿಂದೆ ಶಿಕ್ಷಕರ ವಿಶೇಷ ಪರಿಶ್ರಮವಿದೆ. ಮಕ್ಕಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಹಣ ಕೊಟ್ಟು ಹಲವು ವಸ್ತುಗಳನ್ನು ಖರೀದಿಸಬಹುದು. ಆದರೆ ಶಿಕ್ಷಣವನ್ನು ಖರೀದಿಸಲು ಸಾಧ್ಯವಿಲ್ಲ. ಶಿಕ್ಷಕರು ಮನಃಪೂರ್ವಕವಾಗಿ ಬೋಧನೆ ಮಾಡಿದಾಗ ಮಾತ್ರ ಮಕ್ಕಳ ಭವಿಷ್ಯ ಉಜ್ವಲವಾಗಲು ಸಾಧ್ಯ. ಶಿಕ್ಷಕರ ಬಗ್ಗೆ ನನಗೆ ಅಪಾರ ಹೆಮ್ಮೆ ಮತ್ತು ಗೌರವವಿದೆ ಎಂದರು.

18 ಸಾವಿರ ಶಿಕ್ಷಕರ ನೇಮಕಾತಿ

ಶಿಕ್ಷಣ ಸಚಿವನಾಗಿ ಅಧಿಕಾರ ವಹಿಸಿಕೊಂಡ ಆರಂಭದಲ್ಲಿಯೇ ಹಿಂದಿನ ಸರ್ಕಾರದ ಅವಧಿಯಲ್ಲಿ ಬಾಕಿ ಉಳಿದಿದ್ದ 13 ಸಾವಿರ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿದೆ. ಪ್ರಸ್ತುತ ಸುಮಾರು 18 ಸಾವಿರ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದ್ದು, ಪರೀಕ್ಷೆ ನಡೆಯುವ ದಿನಾಂಕ ಏನು ಎಂಬುದನ್ನು ಶೀಘ್ರದಲ್ಲೇ ಪ್ರಕಟಿಸಲಾ ಗುತ್ತದೆ. ಬರುವ ಜೂನ್ ಹೊತ್ತಿಗೆ ಪರೀಕ್ಷೆ ಬರೆದು ಪಾಸಾಗುವ ಶಿಕ್ಷಕರಿಗೆ ಆರ್ಡರ್ ಕೊಡಿಸಿ, ಪಾಠ ಬೋಧನೆಗೆ ಅನುಕೂಲ ಆಗುವಂತೆ ನೋಡಿಕೊಳ್ಳುವೆ ಎಂದು ತಿಳಿಸಿದರು.

ವಿದ್ಯಾರ್ಥಿಗಳ ಪರೀಕ್ಷಾ ವ್ಯವಸ್ಥೆಯಲ್ಲಿ ಹಲವು ಸುಧಾರಣೆಗಳನ್ನು ತರಲಾಗಿದೆ. ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟುವ ಉದ್ದೇಶದಿಂದ ದೇಶದಲ್ಲೇ ಮೊದಲ ಬಾರಿಗೆ ರಾಜ್ಯದಲ್ಲಿ ಮೆಬ್‌ಕಾಸ್ಟಿಂಗ್ ವ್ಯವಸ್ಥೆಯನ್ನು ಪರಿಚಯಿಸ ಲಾಗಿದೆ. ಆರಂಭದಲ್ಲಿ ಇದರಿಂದ ಫಲಿತಾಂಶದ ಮೇಲೆ ಪ್ರತಿಕೂಲ ಪರಿಣಾಮ ಉಂಟಾದರೂ, ಇದೀಗ ವ್ಯವಸ್ಥೆ ಯಶಸ್ವಿಯಾಗಿದೆ. ಪರೀಕ್ಷೆಗಳಲ್ಲಿ ನಕಲು ಮಾಡುವುದನ್ನು ತಡೆದು, ವಿದ್ಯಾರ್ಥಿಗಳ ನೈಜ ಕಲಿಕಾ ಸಾಮರ್ಥ್ಯಕ್ಕೆ ಅನುಗುಣವಾಗಿ ಫಲಿತಾಂಶ ಹೊರ ಬರುವಂತಾಗಿದೆ ಎಂದರು.

ಬಸವ ಮಂಟಪ ಲೇಖಕ ರವಿಹಂಜ್ ಹತ್ಯೆಗೈದವರಿಗೆ 5 ಲಕ್ಷ ರೂ ಬಹುಮಾನ

ಪ್ರಕಾಶ್ ಮಹಾಜನ್ ಘೋಷಣೆಗೆ ಪ್ರಭು ಚನ್ನಬಸವ ಸ್ವಾಮೀಜಿ ವಿರೋಧ



ಅಥಣಿ, ನ.22: ಲೇಖಕ ರವಿ ಹಂಜ್ ಅವರನ್ನು ಕೊಲ್ಲುವವರಿಗೆ 5 ಲಕ್ಷ ರೂಪಾಯಿ ಬಹುಮಾನ ನೀಡುವುದಾಗಿ ಲಿಂಗಾಯತ ನಾಯಕರೊಬ್ಬರು ಘೋಷಿಸಿದ್ದಾರೆ. ರವಿ ಹಂಜ್ ಅವರು ಇತ್ತೀಚೆಗೆ ನೀಡಿದ ಸಂದರ್ಶನವೊಂದರಲ್ಲಿ, 12ನೇ ಶತಮಾನದ ಸಮಾಜ ಸುಧಾರಕ ಬಸವೇಶ್ವರ ಅವರ ವಿರುದ್ಧ ಅವಹೇಳನಕಾರಿ ಹೇಳಿಕೆಗಳನ್ನು ನೀಡಿದ್ದಾರೆ ಎಂದು ಆರೋಪಿಸಲಾಗಿದ್ದು, ಇದು ವ್ಯಾಪಕ ಪ್ರತಿಭಟನೆಗಳಿಗೆ ಕಾರಣವಾಗಿದೆ.

ಘೋಷಣೆಯಾದ ತಕ್ಷಣವೇ, ಮೊಟಗಿ ಮಠದ ಪ್ರಭು ಚನ್ನಬಸವ ಸ್ವಾಮೀಜಿ ಅವರು ಮಧ್ಯಪ್ರವೇಶಿಸಿ, ಯಾರನ್ನಾದರೂ ಶಿರಚ್ಛೇದನ ಮಾಡುವ (ಕೊಲ್ಲುವ) ಕರೆಗೆ ತೀವ್ರ ವಿರೋಧ ವ್ಯಕ್ತಪಡಿಸಿದರು. ಲಿಂಗಾಯತ ನಾಯಕ ಪ್ರಕಾಶ್ ಮಹಾಜನ್ ಅವರ ಈ ಘೋಷಣೆಯನ್ನು ಗಂಭೀರವಾಗಿ ಪರಿಗಣಿಸದಂತೆ ಮನವಿ ಮಾಡಿದರು.

ಬೆಳಗಾವಿ ಜಿಲ್ಲೆಯ ಅಥಣಿಯಲ್ಲಿ ಸ್ವಾಮೀಜಿ ಆಯೋಜಿಸಿದ್ದ ಪ್ರತಿಭಟನಾ ಸಭೆಯಲ್ಲಿ ಮಾತನಾಡಿದ ಮಹಾಜನ್, ರವಿ ಹಂಜ್ ಅವರನ್ನು ಕೊಲ್ಲುವಂತೆ ಬಹಿರಂಗವಾಗಿ ಕರೆ ನೀಡಿದರು. ಅಲ್ಲದೆ, 5 ಲಕ್ಷ ರೂಪಾಯಿ ಬಹುಮಾನ ಘೋಷಿಸಿದ ಅವರು, ತಮ್ಮ ಮೊಬೈಲ್ ಸಂಖ್ಯೆಯನ್ನು ನೀಡಿ, ಕೊಲೆ ಮಾಡಿದವರು ಹಣ ಪಡೆಯಲು ತಮ್ಮನ್ನು ಸಂಪರ್ಕಿಸುವಂತೆ ಹೇಳಿದರು.

ಮಹಾಜನ್ ಅವರು ವಿದ್ವಾಂಸ ಎಂ.ಎಂ. ಕಲ

ಶಿಕ್ಷಣದಲ್ಲಿ ಸಾಧನೆಗೈದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಮಾಜಿ ಶಾಸಕ ಸೋಮಶೇಖರರೆಡ್ಡಿ ಅಭಿನಂದನೆ



ಬಳ್ಳಾರಿ ನ 22. ಬಳ್ಳಾರಿ ನಗರದ ಡಾ. ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಕರ್ನಾಟಕ ರಾಜ್ಯ ಭೋವಿ ಸಂಘ, ಬೆಂಗಳೂರು ಹಾಗೂ ಬಳ್ಳಾರಿ ಜಿಲ್ಲಾ ಭೋವಿ ಸಂಘದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ರಾಜ್ಯಮಟ್ಟದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಪುಸ್ತಕಗಳ ಲೋಕಾರ್ಪಣೆ ಸಮಾರಂಭದಲ್ಲಿ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ ಭಾಗವಹಿಸಿದ್ದರು. ಶಿಕ್ಷಣ ಕ್ಷೇತ್ರದಲ್ಲಿ ಸಾಧನೆಗೈದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗೌರವಿಸಿ, ಅವರ ಸಾಧನೆಯನ್ನು ಪ್ರೋತ್ಸಾಹಿಸುವ ಈ ಕಾರ್ಯಕ್ರಮವು ಶ್ಲಾಘನೀಯ. ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ಹಾರೈಸುತ್ತಾ, ಕಾರ್ಯಕ್ರಮದ ಆಯೋಜಕರಿಗೆ ಅಭಿನಂದನೆಗಳನ್ನು ಸಲ್ಲಿಸಿದರು.

ಆರ್ಥಿಕ ಪ್ರಗತಿಯ ಬೆನ್ನೆಲುಬು ಸಣ್ಣ ಕೈಗಾರಿಕಾ ಕ್ಷೇತ್ರದ ನಿಗಮಕ್ಕೆ ಅಲ್ಲಮಪ್ರಭು ಪಾಟೀಲ್ ಸಾರಥ್ಯ: ಅಭಿನಂದನೆ




ಕಲಬುರಗಿ, ನ.22– ರಾಜ್ಯದ ಆರ್ಥಿಕ ಬೆಳವಣಿಗೆಯಲ್ಲಿ ಸಣ್ಣ ಕೈಗಾರಿಕಾ ರಂಗದಲ್ಲಿ ಹೊಸ ನೀತಿ ನಿರೂಪಣೆ ಮಾಡಿ ಸಣ್ಣ ಕೈಗಾರಿಕೆದಾರರಿಗೆ ಉತ್ತೇಜನ ಸಿಗಲಿ ಎಂದು ರಾಜ್ಯ ಹೋಟೆಲ್ ಅಸೋಸಿಯೇಷನ್ ಉಪಾಧ್ಯಕ್ಷರಾದ ಸತ್ಯನಾಥ್ ಶೆಟ್ಟಿ ಹೇಳಿದರು.

ಕರ್ನಾಟಕ ಸಣ್ಣ ಕೈಗಾರಿಕಾ ನಿಗಮದ ನೂತನ ಅಧ್ಯಕ್ಷರಾಗಿ ನೇಮಕ ಹೊಂದಿದ ಕಲಬುರಗಿ ದಕ್ಷಿಣ ಮತ ಕ್ಷೇತ್ರದ ಶಾಸಕ ಅಲ್ಲಮ ಪ್ರಭು ಪಾಟೀಲ್ ನೆಲೋಗಿ ಅವರನ್ನು ನ 22ರಂದು ಹೋಟೆಲ್ ಅಸೋಸಿಯೇಷನ್ ವತಿಯಿಂದ ಅಭಿನಂದಿಸಿ ಅವರು ಶುಭ ಹಾರೈಸಿದರು. ಸಣ್ಣ ಕೈಗಾರಿಕಾ ನಿಗಮದ ಅಧ್ಯಕ್ಷರಾಗಿರುವುದಕ್ಕೆ ಸಂತಾದವಾಗಿದೆ. ಸಣ್ಣ ಕೈಗಾರಿಕಾ ವಲಯದ ಸಮಗ್ರ ಅಭಿವೃದ್ಧಿಗೆ ಶಕ್ತಿ ಮೀರಿ ಶ್ರಮಿಸಲಾಗುವುದು ಎಂದು ಅಲ್ಲಮ ಪ್ರಭು ಪಾಟೀಲ್ ಹೇಳಿದರು. ಹೋಟೆಲ್ ವಸತಿ ಮತ್ತು ಬೇಕರಿ ಸಂಘದ ಜಿಲ್ಲಾ ಪದಾಧಿಕಾರಿಗಳಾದ ಡಾ. ಸದಾನಂದ ಪೆರ್ಲ, ಮಾಲಾ ಕಣ್ಣಿ, ಮತ್ತು ಸಿದ್ದರಾಮ ತಳವಾರ ಇದ್ದರು.

ನಾಳೆ ಅಯ್ಯನ ಕಥೆಗಳು ಪುಸ್ತಕ ವಿತರಣಾ ಅಭಿಯಾನ

ಕಲಬುರಗಿ, ನ.22–ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಹಿರಿಯ ಸಾಹಿತಿ, ಹೈದರಾಬಾದ್ ಸಂಸ್ಥಾನ ವಿಮೋಚನ ಹೋರಾಟಗಾರ ದಿ. ಮಹಾದೇವಪ್ಪ ಕಡೇಚೂರ್ ಅವರು ಮಕ್ಕಳಿಗಾಗಿ ಬರೆದ ಕಥಾ ಸಂಕಲನ "ಅಯ್ಯನ ಕಥೆಗಳು" ಕೃತಿಗಳನ್ನು ಶಾಲಾ ಗ್ರಂಥಾಲಯಕ್ಕೆ ಹಸ್ತಾಂತರಿಸುವ ಪುಸ್ತಕ ವಿತರಣಾ ಅಭಿಯಾನದ ಐದನೇ ಕಾರ್ಯಕ್ರಮವು ನವೆಂಬರ್ 24ರಂದು ಶರಣಸಿರಸಗಿ ಗ್ರಾಮೀಣ ಕ್ರೀಡಾ ವಸತಿ ಶಾಲೆಯಲ್ಲಿ ನಡೆಯಲಿದೆ.



ಶ್ರೀಮತಿ ಬಾಲಮ್ಮ ಮಹಾದೇವಪ್ಪ ಕಡೇಚೂರ್ ಟ್ರಸ್ಟ್ ಹಾಗೂ ಗ್ರಾಮೀಣ ಕ್ರೀಡಾ ವಸತಿ ಶಾಲೆ ಶರಣ ಸಿರಸಿಗಿ ಆಡಳಿತ ಮಂಡಳಿಯ ವತಿಯಿಂದ ನವೆಂಬರ್ 24 ರಂದು ಬೆಳಗ್ಗೆ 11.30ಕ್ಕೆ ಪುಸ್ತಕ ವಿತರಣಾ ಅಭಿಯಾನವನ್ನು ಕಲಬುರಗಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿಜಯಕುಮಾರ ತೇಗಲತಿಪ್ಪಿ ಉದ್ಘಾಟಿಸಲಿದ್ದಾರೆ.

ಗ್ರಾಮೀಣ ಕ್ರೀಡಾ ವಸತಿ ಶಾಲೆಯ ಅಧ್ಯಕ್ಷ ಸಿ.ಎನ್ ಬಾಬಳಗಾಂವ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಮಕ್ಕಳ ಸಾಹಿತಿ ಹಾಗೂ ಹಿರಿಯ ಚಿಂತಕ ಎ.ಕೆ ರಾಮೇಶ್ವರ ಮುಖ್ಯ ಅತಿಥಿಗಳಾಗಿ ಭಾಗವಹಿಸ ಲಿದ್ದಾರೆ.

ಕಾರ್ಯಕ್ರಮದಲ್ಲಿ ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥೆ ಡಾ. ಸದಾನಂದ ಪೆರ್ಲ, ಶಾಲೆಯ ಮುಖ್ಯ ಗುರುಗಳಾದ ಸಿದ್ಧರಾಮ ಮುಗಳಿ, ಟ್ರಸ್ಟಿ ಮಹೇಶ್ ಕಡೇಚೂರ್ ಭಾಗವಹಿಸಲಿದ್ದಾರೆ ಎಂದು ಸಿ.ಎನ್ ಬಾಬಳಗಾಂವ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಾಲ್ಮೀಕಿ ಹನುಮಂತಪ್ಪ ಸಾವು: ಅವರ ಕುಟುಂಬಕ್ಕೆ ನ್ಯಾಯ ಒದಗಿಸಲು ರಾತ್ರಿ ಮೌನ ಮೆರವಣಿಗೆ



ತೆಕ್ಕಲಕೋಟೆ ನ.22: ದಿವಂಗತ ವಾಲ್ಮೀಕಿ ಹನುಮಂತಪ್ಪ ಅವರ ಕುಟುಂಬಕ್ಕೆ ನ್ಯಾಯ ಒದಗಿಸಬೇಕು ಹಾಗೂ ಘಟನೆಗೆ ಕಾರಣರಾದ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಪಟ್ಟಣದಲ್ಲಿ ರಾತ್ರಿ ಮೌನ ಮೋಂಬತ್ತಿ ಮೆರವಣಿಗೆ ನಡೆಸಲಾಯಿತು.

ಹನುಮಂತಪ್ಪ ಅವರ ಸಾವಿನ ದುಃಖದ ಘಟನೆಯ ಹಿನ್ನೆಲೆಯಲ್ಲಿ ಕುಟುಂಬಕ್ಕೆ ನ್ಯಾಯ ದೊರಕಿಸಿ ಕೊಡಬೇಕೆಂಬ ಉದ್ದೇಶದಿಂದ ಸಾರ್ವಜನಿಕರು ಒಗ್ಗೂಡಿ ಮೊಂಬತ್ತಿ ಮೆರವಣಿಗೆ ಹಮ್ಮಿಕೊಂಡಿದ್ದರು. ಮೊಂಬತ್ತಿಗಳನ್ನು ಹಿಡಿದು ಮೌನವಾಗಿ ಸಾಗಿದ ಪ್ರತಿಭಟನಾಕಾರರು, ಕುಟುಂಬದ ನೋವಿಗೆ ಧ್ವನಿಯಾಗುವ ಮೂಲಕ ನ್ಯಾಯಕ್ಕಾಗಿ ಒಗ್ಗಟ್ಟಿನ ಸಂದೇಶ ಸಾರಿದರು. ಮೆರವಣಿಗೆಯಲ್ಲಿ ಭಾಗವಹಿಸಿದ ಸಾರ್ವಜನಿಕರು,ವಾಲ್ಮೀಕಿ ಹನುಮಂತಪ್ಪ ಅವರ ಕುಟುಂಬಕ್ಕೆ ನ್ಯಾಯ ದೊರಕಬೇಕು, ಘಟನೆಗೆ ಕಾರಣರಾದ ತಪ್ಪಿತಸ್ಥರನ್ನು ಗುರುತಿಸಿ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಒತ್ತಾಯಿಸಿದರು. ನ್ಯಾಯಕ್ಕಾಗಿ ಆಗ್ರಹಿಸಿ ನಡೆದ ಈ ಮೌನ ಮೆರವಣಿಗೆಯಲ್ಲಿ ದುಃಖ, ಆಕ್ರೋಶ ಹಾಗೂ ನ್ಯಾಯದ ನಿರೀಕ್ಷೆ ವ್ಯಕ್ತವಾಯಿತು. ಹನುಮಂತಪ್ಪ ಅವರ ಕುಟುಂಬಕ್ಕೆ ನ್ಯಾಯ ದೊರಕುವವರೆಗೂ ಹೋರಾಟವನ್ನು ಮುಂದುವರಿಸುವ ಸಂಕಲ್ಪವನ್ನು ಪ್ರತಿಭಟನಾಕಾರರು ವ್ಯಕ್ತಪಡಿಸಿದರು. ನ್ಯಾಯದ ಪರವಾಗಿ ಸಾರ್ವಜನಿಕರು ಒಂದಾಗಿ ಧ್ವನಿ ಎತ್ತಿದ್ದು, ಕುಟುಂಬಕ್ಕೆ ನ್ಯಾಯ ಸಿಗಬೇಕು ಎಂಬ ಆಗ್ರಹ ಪಟ್ಟಣದಲ್ಲಿ ಪ್ರತಿಧ್ವನಿಸಿತು.

ನಾವೀನ್ಯತೆ ಉನ್ನತ ಶಿಕ್ಷಣ ವ್ಯವಸ್ಥೆಯ ಅವಿಭಾಜ್ಯ ಅಂಗವಾಗಲಿ; ಪ್ರೊ.ಸತ್ಯನಾರಾಯಣ



ಕಲಬುರಗಿ, ನ. 22: ವಿಕಸಿತ ಭಾರತ 2047ರ ಗುರಿ ಸಾಧನೆಯಲ್ಲಿ ಉದ್ಯಮ–ಶೈಕ್ಷಣಿಕ ಸಹಭಾಗಿತ್ವ ಮಹತ್ವದ ಪಾತ್ರ ವಹಿಸಲಿದ್ದು, ನಾವೀನ್ಯತೆಯು ಉನ್ನತ ಶಿಕ್ಷಣ ವ್ಯವಸ್ಥೆಯ ಅವಿಭಾಜ್ಯ ಅಂಗವಾಗಬೇಕು ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ಹೇಳಿದರು.

ಭಾರತೀಯ ತೋಟ ಗಾರಿಕೆ ವ್ಯವಸ್ಥಾಪಕ ಸಂಸ್ಥೆಯಲ್ಲಿ ಆಯೋಜಿಸಿದ್ದ ಉದ್ಯಮ–ಶೈಕ್ಷಣಿಕ ಸಮಾವೇಶದಲ್ಲಿ ಮಾತನಾಡಿದ ಅವರು, ನಾವೀನ್ಯತೆ, ಉದ್ಯಮಶೀಲತೆ ಮತ್ತು ಕೌಶಲ್ಯಾಭಿವೃದ್ಧಿಯನ್ನು ಉತ್ತೇಜಿಸುವುದರ ಜೊತೆಗೆ ಪದವೀಧರರ ಉದ್ಯೋಗಾರ್ಹ ತೆಯನ್ನು ಹೆಚ್ಚಿಸಲು ಕೈಗಾರಿಕೆಗಳು ಹಾಗೂ ಶೈಕ್ಷಣಿಕ ಸಂಸ್ಥೆಗಳ ನಡುವೆ ಬಲವಾದ ಸಹಯೋಗ ಅಗತ್ಯವೆಂದು ಪ್ರತಿಪಾದಿಸಿದರು.

ಯುವಜನರು ಹೊಸ ಆಲೋಚನೆಗಳನ್ನು ರೂಪಿಸಲು, ಉದ್ಯಮಶೀಲತೆಯ ಅವಕಾಶಗಳನ್ನು ಅನ್ವೇಷಿಸಲು ಹಾಗೂ ಉದಯೋನ್ಮುಖ ಕೈಗಾರಿಕಾ ಮತ್ತು ಸಾಮಾಜಿಕ ಸವಾಲುಗಳಿಗೆ ಪರಿಹಾರಗಳನ್ನು ಕಂಡುಕೊಳ್ಳಲು ಪ್ರೋತ್ಸಾಹಿಸಬೇಕು. ಭಾರತ ಸರ್ಕಾರವು ನವೋದ್ಯಮಗಳು ಮತ್ತು ಉದ್ಯಮಶೀಲತೆಯನ್ನು ಸಕ್ರಿಯವಾಗಿ ಉತ್ತೇಜಿಸುತ್ತಿದ್ದು, ವಿದ್ಯಾರ್ಥಿಗಳಲ್ಲಿ ಉದ್ಯಮಶೀಲತಾ ಮನೋಭಾವ ಬೆಳೆಸುವಲ್ಲಿ ವಿಶ್ವವಿದ್ಯಾಲಯಗಳು ಪ್ರಮುಖಪಾತ್ರ ವಹಿಸಬೇಕಿದೆ ಎಂದು ತಿಳಿಸಿದರು.

ರಾಷ್ಟ್ರೀಯ ಶಿಕ್ಷಣ ನೀತಿ (ಎನ್ಇಪಿ) 2020 ಅನ್ನು ಉಲ್ಲೇಖಿಸಿದ ಅವರು, ವಿಶ್ವವಿದ್ಯಾಲಯಗಳ ಪಠ್ಯಕ್ರಮದಲ್ಲಿ ಅಪ್ರೆಂಟಿಸ್‌ಶಿಪ್, ಅನುಭವಾಧಾರಿತ ಕಲಿಕೆ ಹಾಗೂ ಕೈಗಾರಿಕಾ ಕ್ಷೇತ್ರದ ಪ್ರಾಯೋಗಿಕ ಅನುಭವಕ್ಕೆ ಹೆಚ್ಚಿನ ಆದ್ಯತೆ ನೀಡುವ ಅಗತ್ಯವಿದೆ. ಈ ನಿಟ್ಟಿನಲ್ಲಿ, ಕೇಂದ್ರೀಯ ವಿಶ್ವವಿದ್ಯಾಲಯವು ತನ್ನ ಶೈಕ್ಷಣಿಕ ಚೌಕಟ್ಟಿನಲ್ಲಿ ಅಪ್ರೆಂಟಿಸ್‌ಶಿಪ್ ಅವಕಾಶಗಳನ್ನು ಅಳವಡಿಸಿ ಕೊಳ್ಳಲು ಕ್ರಮ ಕೈಗೊಂಡಿದೆ. ಕೈಗಾರಿಕೆಗಳು ವಿಶ್ವವಿದ್ಯಾಲಯಗಳೊಂದಿಗೆ ಸಹಯೋಗ ಬೆಳೆಸಿಕೊಂಡು ವಿದ್ಯಾರ್ಥಿಗಳಿಗೆ ಅಪ್ರೆಂಟಿಸ್‌ಶಿಪ್ ಅವಕಾಶಗಳನ್ನು ಒದಗಿಸುವುದು, ಕಲಿಕಾ ಪ್ರಯೋಗಾಲಯಗಳ ಸ್ಥಾಪನೆಗೆ ನೆರವು ನೀಡುವುದು, ಪ್ರಾಯೋಗಿಕ ತರಬೇತಿ ನೀಡುವುದು ಹಾಗೂ ಕೈಗಾರಿಕಾ ಕ್ಷೇತ್ರದ ನೈಜ ಕಾರ್ಯಾನುಭವ ಪಡೆಯಲು ಅವಕಾಶ ಕಲ್ಪಿಸುವಂತೆ ಅವರು ಕರೆ ನೀಡಿದರು.

ಉದ್ಯಮ–ಶೈಕ್ಷಣಿಕ ಸಹಯೋಗವು ಪರಸ್ಪರ ಪ್ರಯೋಜನಕಾರಿ ಪಾಲುದಾರಿಕೆಯಾಗಿರಬೇಕು ಎಂದು ಪ್ರತಿಪಾದಿಸಿದ ಅವರು, ಕೈಗಾರಿಕೆಗಳು ತಂತ್ರಜ್ಞಾನ, ಪ್ರಾಯೋಗಿಕ ಪರಿಣತಿ ಹಾಗೂ ಅಗತ್ಯ ಸಂಪನ್ಮೂಲಗಳನ್ನು ಒದಗಿಸಿದರೆ, ವಿಶ್ವವಿದ್ಯಾಲಯಗಳು ಸಂಶೋಧನಾ ಸಾಮರ್ಥ್ಯ, ನವೀನ ಆಲೋಚನೆಗಳು ಮತ್ತು ಕೌಶಲ್ಯಪೂರ್ಣ ಮಾನವ ಸಂಪನ್ಮೂಲವನ್ನು ಒದಗಿಸ ಬಲ್ಲವು. ಇಂತಹ ಸಹಭಾಗಿತ್ವವು ಅನ್ವಯಿಕ ಸಂಶೋಧನೆ, ಉತ್ಪನ್ನ ಅಭಿವೃದ್ಧಿ, ತಾಂತ್ರಿಕ ಪ್ರಗತಿ ಹಾಗೂ ಕೈಗಾರಿಕಾ ಮತ್ತು ಸಾಮಾಜಿಕ ಸವಾಲುಗಳಿಗೆ ಪರಿಣಾಮಕಾರಿ ಪರಿಹಾರಗಳನ್ನು ಕಂಡುಕೊಳ್ಳಲು ನೆರವಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಅಭಿವೃದ್ಧಿ ಹೊಂದಿದ ದೇಶಗಳ ಅನುಭವ ವನ್ನು ಉಲ್ಲೇಖಿಸಿದ ಅವರು, ವಿಶ್ವವಿದ್ಯಾಲಯಗಳು ಮತ್ತು ಕೈಗಾರಿಕೆಗಳ ನಡುವಿನ ಬಲವಾದ ಸಹಭಾಗಿತ್ವವು ಆ ದೇಶಗಳ ಆರ್ಥಿಕ ಹಾಗೂ ತಾಂತ್ರಿಕ ಪ್ರಗತಿಯಲ್ಲಿ ಮಹತ್ವದ ಪಾತ್ರ ವಹಿಸಿದೆ ಎಂದು ಹೇಳಿದರು.

ಭಾರತದಲ್ಲಿಯೂ ನಾವೀನ್ಯತೆಗೆ ಉತ್ತೇಜನ ನೀಡಲು, ಪದವೀಧರರ ಉದ್ಯೋಗಾರ್ಹತೆಯನ್ನು ಹೆಚ್ಚಿಸಲು ಹಾಗೂ ರಾಷ್ಟ್ರೀಯ ಅಭಿವೃದ್ಧಿ ಗುರಿಗಳನ್ನು ಸಾಧಿಸಲು ವಿಶ್ವವಿದ್ಯಾ ಲಯಗಳು ಮತ್ತು ಕೈಗಾರಿಕೆಗಳ ನಡುವಿನ ಇಂತಹ ಸಹ ಯೋಗದ ವ್ಯವಸ್ಥೆಗಳನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಗುಣಮಟ್ಟದ ಶಿಕ್ಷಣ, ಸಂಶೋಧನೆ ಮತ್ತು ಕೌಶಲ್ಯಾಭಿವೃದ್ಧಿಗೆ ಸಿಯುಕೆ ಬದ್ಧವಾಗಿದೆ ಎಂದು ಪುನರುಚ್ಚರಿಸಿದ ಅವರು, ವಿದ್ಯಾರ್ಥಿಗಳ ಶೈಕ್ಷಣಿಕ, ಸಂಶೋಧನಾ ಹಾಗೂ ಉದ್ಯಮಶೀಲತಾ ಆಶಯಗಳನ್ನು ಸಾಕಾರಗೊಳಿಸಲು ಅಗತ್ಯ ವಾದ ಶೈಕ್ಷಣಿಕ ವಾತಾವರಣ ಮತ್ತು ಮೂಲಸೌಕರ್ಯ ಗಳನ್ನು ವಿಶ್ವವಿದ್ಯಾ ಲಯ ಕಲ್ಪಿಸುತ್ತಿದೆ. ವಿದ್ಯಾರ್ಥಿಗಳು ವಿಶ್ವವಿದ್ಯಾಲಯ ದಲ್ಲಿರುವ ಅವಕಾಶಗಳನ್ನು ಸಮರ್ಪಕವಾಗಿ ಬಳಸಿಕೊಂಡು ಶಿಸ್ತು, ವೃತ್ತಿಪರ ನೈತಿಕತೆ, ಸಕಾರಾ ತ್ಮಕ ಮನೋಭಾವ ಹಾಗೂ ನಿರಂ ತರ ಕಲಿಕೆಯ ಹವ್ಯಾಸವನ್ನು ಬೆಳೆಸಿಕೊ ಳ್ಳಬೇಕು ಎಂದು ಕರೆ ನೀಡಿದರು.

ತಮ್ಮ ಸಮಾರೋಪ ಭಾಷಣದಲ್ಲಿ ಅವರು, ರಾಷ್ಟ್ರನಿರ್ಮಾಣದ ಕಾರ್ಯದಲ್ಲಿ ವಿಶ್ವವಿದ್ಯಾಲಯ ಗಳು, ಕೈಗಾರಿಕೆಗಳು, ಉದ್ಯಮಿಗಳು, ಸಂಶೋಧಕರು ಮತ್ತು ವಿದ್ಯಾರ್ಥಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ನಾವೀನ್ಯತೆ, ಉದ್ಯಮ ಶೀಲತೆ, ಸಂಶೋಧನೆ, ಕೌಶಲ್ಯಾಭಿವೃದ್ಧಿ ಹಾಗೂ ಅರ್ಥ ಪೂರ್ಣ ಉದ್ಯಮ–ಶೈಕ್ಷಣಿಕ ಸಹಭಾಗಿತ್ವಕ್ಕೆ ಆದ್ಯತೆ ನೀಡುವ ಮೂಲಕ ವಿಕಸಿತ ಭಾರತ 2047ರ ಸಂಕಲ್ಪವನ್ನು ಸಾಕಾರಗೊಳಿಸಲು ಎಲ್ಲರೂ ಕೈಜೋಡಿಸಬೇಕು ಎಂದರು.

ಸಮಾವೇಶದಲ್ಲಿ ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಸಂಸದ ಡಾ. ಸಿ. ಎನ್. ಮಂಜುನಾಥ್, ಐ.ಐ.ಪಿ.ಎಂ ನಿರ್ದೇಶಕ ಡಾ.ಸೆಂಥಿಲ್ ವಿನಾಯಗಂ, ಕರ್ನಾಟಕ ಪ್ರಾದೇಶಿಕ ನಬಾರ್ಡ್‌ನ ಮುಖ್ಯ ಪ್ರಧಾನ ವ್ಯವಸ್ಥಾಪಕ ಡಾ. ಸುರೇಂದ್ರಬಾಬು, ಸಿಯು ಕೆಯ ವ್ಯವಹಾರ ನಿರ್ವಹಣಾ ವಿಭಾ ಗದ ಮುಖ್ಯಸ್ಥ ಪ್ರೊ. ಎ. ಎನ್. ವಿಜಯ ಕುಮಾರ್ ಸೇರಿದಂತೆ ವಿವಿಧ ಕ್ಷೇತ್ರಗಳ ಗಣ್ಯರು ಹಾಗೂ ಪ್ರತಿನಿಧಿಗಳು ಉಪಸ್ಥಿತರಿ ದ್ದರು.

ಅಂಚೆ ಮತ ಮರುಎಣಿಕೆ: ಜೀವರಾಜ್ ವಿರುದ್ಧದ ಕ್ರಿಮಿನಲ್ ಪ್ರಕರಣ ರದ್ದುಗೊಳಿಸಿದ ಹೈಕೋರ್ಟ್



ಚಿಕ್ಕಮಗಳೂರು, ನ.22: ಜಿಲ್ಲೆಯ ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತ ಮರು ಎಣಿಕೆ ವಿಚಾರಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಡಿ.ಎನ್. ಜೀವರಾಜ್ ಅವರ ಮೇಲೆ ದಾಖಲಾಗಿದ್ದ ಕ್ರಿಮಿನಲ್ ಪ್ರಕರಣವನ್ನು ಹೈಕೋರ್ಟ್ ರದ್ದುಗೊಳಿಸಿದೆ.

ಪ್ರಕರಣ ರದ್ದು ಕೋರಿ ಜೀವರಾಜ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ನಾಗಪ್ರಸನ್ನ ಅವರಿದ್ದ ಏಕ ಸದಸ್ಯ ಪೀಠ ಈ ಮಹತ್ವದ ಆದೇಶ ನೀಡಿದೆ.

2023ರ ವಿಧಾನಸಭಾ ಚುನಾವಣೆಯಲ್ಲಿ 201 ಮತಗಳ ಅಂತರದಿಂದ ಸೋತಿದ್ದ ಡಿ.ಎನ್. ಜೀವರಾಜ್, ಮತ ಎಣಿಕೆಯನ್ನು ಪ್ರಶ್ನಿಸಿ ನ್ಯಾಯಾಲಯದ ಮೊರೆ ಹೋಗಿದ್ದರು. ಅರ್ಜಿಯನ್ನು ಪರಿಶೀಲಿಸಿದ್ದ ಕೋರ್ಟ್, ತಿರಸ್ಕೃತ ಗೊಂಡಿದ್ದ 279 ಮತಗಳ ಪರಿಶೀಲನೆ ಹಾಗೂ ಅಂಚೆ ಮತಗಳ ಮರು ಎಣಿಕೆಗೆ ಸೂಚಿಸಿತ್ತು. ಅದರಂತೆ ಮೇ 2 ರಂದು ನಡೆದ ಅಂಚೆ ಮತಗಳ ಮರು ಎಣಿಕೆಯಲ್ಲಿ ಜೀವರಾಜ್ 52 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದರು.

ಈ ಬೆಳವಣಿಗೆಯ ಬೆನ್ನಲ್ಲೇ, ಕಾಂಗ್ರೆಸ್ ಮುಖಂಡ ಹಾಗೂ ವಕ್ತಾರ ಸುಧೀರ್ ಕುಮಾರ್ ಮುರೋಳ್ಳಿ ಅವರು ಜೀವರಾಜ್ ವಿರುದ್ಧ ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು. ಅವರ ದೂರಿನ ಅನ್ವಯ ಜೀವರಾಜ್ ವಿರುದ್ಧ ಅಕ್ರಮ, ಕ್ರಿಮಿನಲ್, ವಂಚನೆ ಮತ್ತು ಅಪರಾಧ ಪ್ರಕರಣ ದಾಖಲಾಗಿತ್ತು. ಇದೀಗ ಹೈಕೋರ್ಟ್ ಈ ಪ್ರಕರಣವನ್ನು ರದ್ದುಗೊಳಿಸುವ ಮೂಲಕ ಜೀವರಾಜ್ ಅವರಿಗೆ ಬಿಗ್ ರಿಲೀಫ್ ನೀಡಿದೆ.

ರವಿ ಹಂಜ್ ಬಸವ ಮಂಟಪ ವಿರೋಧಿಸಿ ಬಸವಪರ ಸಂಘಟನೆಗಳಿಂದ ಪ್ರತಿಭಟನೆ ನಡೆಸಿ ಕ್ರಮಕ್ಕೆ ಆಗ್ರಹಿಸಿ ಮನವಿ



ಬೀದರ್, ನ. 22: ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವಣ್ಣನವರ ಕುರಿತು ಆಕ್ಷೇಪಾರ್ಹ ಹೇಳಿಕೆ ನೀಡಿರುವ ಅನಿವಾಸಿ ಭಾರತೀಯ ಲೇಖಕ ರವಿ ಹುಂಜ ವಿರುದ್ಧ ಬಸವ ಪರ ಸಂಘಟನೆಗಳ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ಜಾಗತಿಕ ಲಿಂಗಾಯತ ಮಹಾಸಭಾದ ನೇತೃತ್ವದಲ್ಲಿ ಬಸವೇಶ್ವರ ವೃತ್ತದಲ್ಲಿ ಸೇರಿದ ಕಾರ್ಯಕರ್ತರು, ರವಿ ಹುಂಜ ವಿರುದ್ಧ ಘೋಷಣೆಗಳನ್ನು ಕೂಗಿ, ಅವರ ಪ್ರತಿಕೃತಿಗೆ ಚಪ್ಪಲಿ ಹಾರ ಹಾಕಿ, ಚಪ್ಪಲಿ ಏಟು ಕೊಟ್ಟರು. ಬಳಿಕ ಪ್ರತಿಕೃತಿ ಸುಟ್ಟು ಆಕ್ರೋಶ ಹೊರ ಹಾಕಿದರು.

ನಂತರ ನ್ಯೂ ಟೌನ್ ಪೊಲೀಸ್ ಠಾಣೆಗೆ ತೆರಳಿ ಜಾಗತಿಕ ಲಿಂಗಾಯತ ಮಹಾಸಭಾ, ರಾಷ್ಟ್ರೀಯ ಬಸವ ದಳ, ಭಾರತೀಯ ಬಸವ ಬಳಗ, ಲಿಂಗಾಯತ ಸಮಾಜ, ಬಸವ ಕೇಂದ್ರ ಹಾಗೂ ಇತರ ಬಸವ ಪರ ಸಂಘಟನೆಗಳ ವತಿಯಿಂದ ರವಿ ಹುಂಜ ವಿರುದ್ಧ ಸಾಮೂಹಿಕ ದೂರು ಸಲ್ಲಿಸಿದರು.



ಚಿಕ್ಕಮಗಳೂರಿನಲ್ಲಿ ಭಾನುವಾರ ಅಡಿಕೆ ಬೆಳೆ ಸಂಸ್ಕರಣೆಯಲ್ಲಿ ತೊಡಗಿರುವ ಕಾರ್ಮಿಕರು.

ಮಹಾತ್ಮರ ಬಗ್ಗೆ ಕೀಳಾಗಿ ಮಾತನಾಡುವ, ಬರೆಯುವವರ ವಿರುದ್ಧ ಕಾನೂನು ಬಿಗಿಯಾಗಲಿ: ಮಾಜಿ ಸಂಸದ ಪ್ರತಾಪ್‌ಸಿಂಹ



ಮೈಸೂರು, ನ.22: ರಾಜ್ಯಾದ್

ಸರಳತೆ, ಸಜ್ಜನಿಕೆಯ ಸಾಕಾರಮೂರ್ತಿಗಳೂ, ಹಿರಿಯ ಸಹಕಾರಿ ಧುರೀಣರೂ, ಬಡ ವಿದ್ಯಾರ್ಥಿಗಳಿಗೆ ವಸತಿ, ಅನ್ನ ದಾಸೋಹ, ಶಿಕ್ಷಣ ದಾಸೋಹ, ಧಾರ್ಮಿಕ, ಸಾಮಾಜಿಕ ಹಾಗೂ ರಾಜಕೀಯ ಕ್ಷೇತ್ರಗಳಲ್ಲಿ ನೆಲೆಯೂರಿರುವ ಕರ್ನಾಟಕ ವೀರಶೈವ ವಿದ್ಯಾಭಿವೃದ್ಧಿ ಸಂಸ್ಥೆ, ವೀರಶೈವ ಸಹಕಾರಿ ಬ್ಯಾಂಕಿನ ಗೌರವಾಧ್ಯಕ್ಷರಾಗಿ ಹಾಗೂ ಇನ್ನಿತರೆ ಸಂಘ-ಸಂಸ್ಥೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ, ಅವುಗಳ ಶ್ರೇಯೋಭಿವೃದ್ಧಿಗೆ ಕಾರಣೀಭೂತರಾಗಿರುವ ಧೀಮಂತ ವ್ಯಕ್ತಿ. ತಮ್ಮ ಅಪಾರವಾದ ಸಂಘಟನಾ ಪ್ರವೃತ್ತಿಗಳಿಂದ ಅನೇಕ ಪ್ರಶಸ್ತಿಗಳನ್ನು ತಮ್ಮದಾಗಿಸಿಕೊಂಡಿರುವ

ಶ್ರೀ ಬಿ.ಎಸ್. ಪರಮಶಿವಯ್ಯನವರ





87ನೇ ವರ್ಷದ ಜನ್ಮದಿನೋತ್ಸವ

ದಿನಾಂಕ 23.11.2026, ಸೋಮವಾರ ಬೆಳಿಗ್ಗೆ 10.30 ಗಂಟೆಗೆ

ಸ್ಥಳ: ಶ್ರೀ ಬಸವೇಶ್ವರ ಸುಜ್ಞಾನ ಮಂಟಪ, ಟೆಲಿಫೋನ್ ಎಕ್ಸ್‌ಚೇಂಜ್ ಪಕ್ಕ, ವಿಜಯನಗರ, ಬೆಂಗಳೂರು-40

ದಿವ್ಯ ಸಾನ್ನಿಧ್ಯ : **ಷ.ಬ್ರ. ಡಾ. ಮಲಯ ಶಾಂತಮುನಿ ಶಿವಾಚಾರ್ಯ ಸ್ವಾಮಿಗಳು,**
ಮೇಲಣಗವಿ ಮಠಾಧ್ಯಕ್ಷರು.



ಉದ್ಘಾಟನೆ : **ರಾಜಯೋಗಿ ಡಾ. ಬಿ.ಕೆ. ಮೃತ್ಯುಂಜಯ**
ಅಡಿಷನಲ್ ಸೆಕ್ರೆಟರಿ ಜನರಲ್, ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಮೌಂಟ್‌ಅಬು, ರಾಜಸ್ಥಾನ

ಮಾನ್ಯ ಸದಸ್ಯರು, ಸಮಾಜಭಾಂದವರು, ಸ್ನೇಹಿತರು ಹಾಗೂ "ಬಿ.ಎಸ್.ಪಿ. ಅಭಿಮಾನಿಗಳು" ಆಗಮಿಸಿ ಶ್ರೀಯುತರಿಗೆ ಶುಭ ಹಾರೈಸಬೇಕೆಂದು ವಿನಂತಿಸಲಾಗಿದೆ.

ಈ ಕಾರ್ಯಕ್ರಮದ ನಂತರ ಮಧ್ಯಾಹ್ನ 2.00 ಗಂಟೆಯಿಂದ ಶ್ರೀ ಸಿದ್ಧಗಂಗಾ ಮಠದ ಕಲಾ ತಂಡದವರಿಂದ "ಜಗಜ್ಯೋತಿ ಶ್ರೀ ಬಸವೇಶ್ವರ" ಐತಿಹಾಸಿಕ ನಾಟಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.

ಶುಭ ಕೋರುವವರು :

ಕರ್ನಾಟಕ ವೀರಶೈವ ವಿದ್ಯಾಭಿವೃದ್ಧಿ ಸಂಸ್ಥೆ ಮತ್ತು ವೀರಶೈವ ಸಹಕಾರಿ ಬ್ಯಾಂಕ್
ಪದಾಧಿಕಾರಿಗಳು ಮತ್ತು ನಿರ್ದೇಶಕರು ಹಾಗೂ ಸಿಬ್ಬಂದಿ ವರ್ಗ


ಬಿ.ಎಸ್. ಪ್ರಭುದೇವರು
ಉಪಾಧ್ಯಕ್ಷರು


ಸಿ. ಸಿದ್ಧಲಿಂಗಯ್ಯ
ಕಾರ್ಯದರ್ಶಿ


ಬಿ.ಪಿ. ಮಹದೇವಪ್ರಸಾದ್
ಸಹ ಕಾರ್ಯದರ್ಶಿ


ಎಂ.ಎಸ್. ನಟರಾಜ್
ಖಜಾಂಚಿ














ಆಡಳಿತಾಧಿಕಾರಿ